ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 76 ಸಂಚಿಕೆ- 76 | PAGE- 8 ಪುಟ-8 | ಮಂಗಳವಾರ 29.04.2025 | RS.2/- ಬೆಲೆ 2/-

# ರಾಜ್ಯಾದ್ಯಂತ ಮುಂದಿನ 5 ದಿನ ಗುಡುಗು ಸಹಿತ ಮಳೆ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಏ.28:ಬಂಗಾಳಕೊಲ್ಲಿಯಲ್ಲಿ ಈಗಾಗಲೇ ರೂಪುಗೊಂಡಿರುವ ಚಂಡಮಾರುತದ ಪರಿಚಲನೆಯ ಪರಿಣಾಮವಾಗಿ ಕರ್ನಾಟಕದಲ್ಲಿ ಮುಂದಿನ 5 ದಿನಗಳ ಕಾಲ ಗುಡುಗು, ಮಿಂಚು ಮತ್ತು ಬಿರುಗಾಳಿ ಸಹಿತ ಮಳೆಯಾಗಲಿದೆ ಎಂದು ಕರ್ನಾಟಕ ಹವಾಮಾನ ಇಲಾಖೆ ಮಾಹಿತಿ ನೀಡಿದೆ.ಬಂಗಾಳಕೊಲ್ಲಿಯಲ್ಲಿ ಈಗಾಗಲೇ ರೂಪುಗೊಂಡಿರುವ ಚಂಡಮಾರುತದ ಪರಿಚಲನೆಯು ಮರಾಠವಾಡ ಪ್ರದೇಶದಿಂದ ಕರ್ನಾಟಕ ಮತ್ತು ತಮಿಳುನಾಡಿನಾದ್ಯಂತ ಮನ್ನಾರ್ ಕೊಲ್ಲಿಯವರೆಗೆ ಸರಾಸರಿ ಸಮುದ್ರ ಮಟ್ಟದಿಂದ 0.9 ಕಿ.ಮೀ ಎತ್ತರದಲ್ಲಿ ವಿಸ್ತರಿಸುತ್ತಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಈತಗ್ಗು ಕರ್ನಾಟಕದ ಹವಾಮಾನದ ಮೇಲೆ ಪ್ರಭಾವ ಬೀರುತ್ತಿದೆ. ಉತ್ತರ ಒಳನಾಡು ಕರ್ನಾಟಕ, ದಕ್ಷಿಣ ಒಳನಾಡು ಕರ್ನಾಟಕ ಮತ್ತು ಕರಾವಳಿ ಪ್ರದೇಶಗಳಲ್ಲಿ ಲಘು ಮಳೆಯಾಗುವ ಮುನ್ಸೂಚನೆ ಇರುವುದರಿಂದ ಬೆಂಗಳೂರಿನಲ್ಲಿ ಆಹ್ಲಾದಕರ ಹವಾಮಾನವಿರುತ್ತದೆ ಎಂದು ನಿರೀಕ್ಷಿಸಲಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಮುಂದಿನ 5 ದಿನಗಳ ಕಾಲ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ಮಳೆಯಾಗುವ ಕುರಿತು ಹವಾಮಾನ ಇಲಾಖೆ ಮುನ್ಸೂಚನೆ ಮತ್ತು ಎಚ್ಚರಿಕೆಗಳನ್ನು ನೀಡಿದೆ. ರಾಜ್ಯದಾದ್ಯಂತ ಮುಂದಿನ 5 ದಿನಗಳವರೆಗೆ ಅಲ್ಲಲ್ಲಿ ಗುಡುಗು, ಮಿಂಚು ಮತ್ತು ಬಿರುಗಾಳಿ ಸಹಿತ ಮಳೆಯಾಗಲಿದ್ದು, ಗಾಳಿಯ ವೇಗ ಗಂಟೆಗೆ 40–60 ಕಿಮೀ ತಲುಪುವ ಸಾಧ್ಯತೆ ಇದೆ ಎಂದು ಹೇಳಿದೆ. ಅಂತೆಯೇ ಹಲವು ಜಿಲ್ಲೆಗಳಲ್ಲಿ ಅಲ್ಲಲ್ಲಿ ಚದುರಿದಂತೆ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಕರ್ನಾಟಕದ ಒಳನಾಡು ಅಂ-ದರೆ ವಿಜಯನಗರ, ಹಾವೇರಿ, ದಾವಣಗೆರೆ, ಚಿತ್ರದುರ್ಗ, ಶಿವಮೊಗ್ಗ, ಚಿಕ್ಕಮಗಳೂರು, ತುಮಕೂರು, ಹಾಸನ, ಮಂಡ್ಯ, ಮೈಸೂರು, ಬೆಂಗಳೂರು,



ರಾಮನಗರ, ಚಾಮರಾಜನಗರಲ್ಲಿ ಗುಡುಗು ಮಿಂಚು ಸಹಿತ ಮಳೆಯಾಗಲಿದ್ದು, ಕೋಲಾರದ ಮುಳಬಾಗಿಲು, ಬಂಗಾರಪೇಟೆಯಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

ಅಂತೆಯೇ ಚಿತ್ರದುರ್ಗದ ಹೊಳಲ್ಕೆರೆ, ಚಳ್ಳಕೆರೆ, ಹಿರಿಯೂರು ಮತ್ತು ಹೊಸದುರ್ಗದಲ್ಲಿ ಚದುರಿದಂತೆ ಮಳೆಯಾಗಲಿದ್ದು, ಚಿತ್ರದುರ್ಗ ನಗರದಲ್ಲಿ ಒಣಹವೆ ಮುಂದುವರೆಯಲಿದೆ ಎನ್ನಲಾಗಿದೆ. ಉಳಿದಂತೆ ಉತ್ತರ ಕರ್ನಾಟಕ ಗದಗ, ಕೊಪ್ಪಳ, ಬಳ್ಳಾರಿ, ಹಾವೇರಿ ಯಲ್ಲಿ ಸಾಧಾರಣ ಮಳೆ ಜೊತೆ ಒಣಹವೆ ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

ಬೆಂಗಳೂರಿನಲ್ಲಿ ಆಲಿಕಲ್ಲು ಮಳೆ

ಇನ್ನು ಬೆಂಗಳೂರು ಮತ್ತು ಅದರ ಸುತ್ತಮುತ್ತ ಪ್ರದೇಶಗಳಲ್ಲಿ ಏಪ್ರಿಲ್ 30 ಮತ್ತು ಮೇ 01, 2025 ರಂದು ಅಲ್ಲಲ್ಲಿ ಆಲಿಕಲ್ಲು ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ.

## ಬಿಜೆಪಿ ಗೊಡ್ಡು ಬೆದರಿಕೆಗಳಿಗೆ ಜಗ್ಗಲ್ಲ-ಬಗ್ಗಲ್ಲ:ಸಿಎಂ



ಮಲ್ಲಮ್ಮ ನುಡಿ ವಾರ್ತೆ ಬೆಳಗಾವಿ:ಏ.28: ಕಾಶ್ಮೀರದಲ್ಲಿ ಅಮಾಯಕ ಭಾರತೀಯರನ್ನು, ಕರ್ನಾಟಕದ ಮೂವರು ಅಮಾಯಕರನ್ನು ರಾಜಾರೋಷವಾಗಿ ಗನ್‌ಗಳ ಸಮೇತ ಬಂದು ಅಮಾನುಷವಾಗಿ ಹತ್ಯೆ ಮಾಡಿ ಹೋದರಲ್ಲಾ ಇದು ಕೇಂದ್ರ ಸರ್ಕಾರದ ಭದ್ರತಾ ಲೋಪ ಅಲ್ಲವಾ? ಭಾರತೀಯರಿಗೆ ರಕ್ಷಣೆ ಕೊಡುವುದರಲ್ಲಿ ವಿಫಲ ಆಗಿರುವುದನ್ನು ಭಾರತೀಯರು ಪ್ರಶ್ನಿಸಬಾರದಾ? ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭಾನುವಾರ ಕಿಡಿಕಾರಿದರು.ಕೇಂದ್ರ ಸರ್ಕಾರದ ಬೆಲೆ ಏರಿಕೆ, ಜನ ವಿರೋಧಿ ನೀತಿ ವಿರುದ್ಧ ಆಯೋಜಿಸಿದ್ದ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ, ನಮ್ಮ ಕಾರ್ಯಕ್ರಮಕ್ಕೆ ಬಂದು ಅಡ್ಡಿಪಡಿಸಿದ ದುಷ್ಟರಿಗೆ ದೇಶಪ್ರೇಮ ಇಲ್ಲವೇ? ಭಾರತಕ್ಕೆ ಸ್ವಾತಂತ್ರ್ಯ ಬಂದು 52 ವರ್ಷಗಳ ಕಾಲ ಆರ್.ಎಸ್.ಎಸ್ ಕೇಂದ್ರ ಕಚೇರಿ ಮೇಲೆ ಭಾರತದ ಬಾವುಟ ಹಾರಿಸಲೇ ಇಲ್ಲ. ಇದಕ್ಕೆ ನಾಚಿಕೆ ಆಗುವುದಿಲ್ಲವೇ? ಯಾವತ್ತಾದರೂ ಆರ್.ಎಸ್.ಎಸ್ ಕಚೇರಿ ಮುಂದೆ ಹೋಗಿ ಪ್ರತಿಭಟಿಸಿದ್ದೀರ? ಸ್ವಾತಂತ್ರ್ಯ ಹೋರಾಟದಿಂದ ಹಿಡಿದು ಆಧುನಿಕ ಭಾರತ ನಿರ್ಮಾಣದವರೆಗೂ ಬಿಜೆಪಿ, ಸಂಘ ಪರಿವಾರದ ಕೊಡುಗೆ ಏನಿದೆ? ನಾಚಿಕೆ ಇಲ್ಲದೆ ದೇಶಭಕ್ತಿ ಬಗ್ಗೆ ಮಾತಾಡ್ತೀರಾ. ಭಾರತೀಯ ಸಮಾಜವನ್ನು ಬಿರುಕು ಮೂಡಿಸಿದ್ದು ಬಿಟ್ಟರೆ ಇಷ್ಟು ವರ್ಷಗಳ ನಿಮ್ಮ ಕೊಡುಗೆ ಏನು? ಎಂದು ಪ್ರಶ್ನಿಸಿದರು.

ಕಾಂಗ್ರೆಸ್ ಪಕ್ಷದ ಕಾರ್ಯಕ್ರಮಕ್ಕೆ ಬಂದು ಅಡ್ಡಿಪಡಿಸಿದ ಬಿಜೆಪಿ ಕಾರ್ಯಕರ್ತರಿಗೆ,

(2ನೇ ಪುಟ ನೋಡಿ)

## ಬಿಲಾವಲ್ ಹೇಳಿಕೆ ಚೈಲ್ಡಿಶ್:ಓವೈಸಿ



ಮಲ್ಲಮ್ಮ ನುಡಿ ವಾರ್ತೆ ಛತ್ರಪತಿ ಶಂಭಾಜಿ ನಗರ: ಪಾಕಿಸ್ತಾನದ ವಿರುದ್ಧ ತೀವ್ರವಾಗ್ದಾಳಿ ನಡೆಸಿದ ಎಐಎಂಐಎಂ ಅಧ್ಯಕ್ಷ ಅಸಾದುದ್ದೀನ್ ಓವೈಸಿ, ಆ ದೇಶದ ಗುಪ್ತಚರ ಸಂಸ್ಥೆ ಐಎಸ್‌ಐ ಆಗಿರಲಿ, ಭಯೋತ್ಪಾದಕ ಸಂಘಟನೆ ಐಸಿಸ್ ಆಗಿರಲಿ ಅಥವಾ ಇತರ ಪಾಕಿಸ್ತಾನಿ ಉಗ್ರಸಂಘಟನೆಗಳು ಹಿಂದೂಗಳು ಮತ್ತು ಮುಸ್ಲಿಮರ ನಡುವೆ ಜಗಳ ನಡೆಯುವುದನ್ನು ನೋಡಲು ಬಯಸುತ್ತಿವೆ. ಅದಕ್ಕಾಗಿಯೇ ಪಹಲ್ಗಾಮ್‌ನಲ್ಲಿ ಭಯೋತ್ಪಾದಕ ದಾಳಿ ನಡೆದಿದೆ ಎಂದು ಸೋಮವಾರ ಹೇಳಿದರು.

ಇಂದು ಮಹಾರಾಷ್ಟ್ರದ ಛತ್ರಪತಿ ಶಂಭಾಜಿನಗರದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಓವೈಸಿ, "ನನ್ನ ಬೇಡಿಕೆ-ಯೆಂದರೆ, ಪಾಕಿಸ್ತಾನವನ್ನು ಫೈನಾನ್ಶಿಯಲ್ ಆಕ್ಷನ್ ಟಾಸ್ಕ್ ಫೋರ್ಸ್, ಬೂದು ಪಟ್ಟಿಗೆ ಸೇರಿಸುವ ಅಗತ್ಯ ಇದೆ. ಅವರು ಅಕ್ರಮ ಹಣದಿಂದ ಭಯೋತ್ಪಾದನೆಗೆ ಹಣಕಾಸು ಒದಗಿಸುತ್ತಿದ್ದಾರೆ. ಆದ್ದರಿಂದ ಪಾಕಿಸ್ತಾನವನ್ನು ಬೂದು ಪಟ್ಟಿಗೆ ಸೇರಿಸಬೇಕು ನಾವು ಮೋದಿ

(2ನೇ ಪುಟ ನೋಡಿ)

## ಹೆಚ್ಚುವರಿ ಎಸ್‌ಪಿ ವಿರುದ್ಧ ಗರಂ: ವೇದಿಕೆಯಲ್ಲೇ ಕಪಾಳಮೋಕ್ಷಕ್ಕೆ ಮುಂದಾದ ಸಿಎಂ




ಮಲ್ಲಮ್ಮ ನುಡಿ ವಾರ್ತೆ ಬೆಳಗಾವಿ:ಏ.28: ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಸಮಾವೇಶದಲ್ಲಿ ಸಿಎಂ ಸಿದ್ದರಾಮಯ್ಯ ಗರಂ ಆಗಿದ್ದರು. ವೇದಿಕೆ ಮೇಲೆಯೇ ಧಾರವಾಡದ ಹೆಚ್ಚುವರಿ ಎಸ್‌ಪಿ ನಾರಾಯಣ ಭರಮನಿ ಅವರತ್ತ ಸಿಎಂ ಕೈ ಎತ್ತಿದ್ದ ವಿಡಿಯೋ ಈಗ ಎಲ್ಲೆಡೆ ವೈರಲ್ ಆಗತೊಡಗಿದೆ.ಬೆಲೆ ಏರಿಕೆ ವಿರೋಧಿಸಿ ಇಂದು ಕಾಂಗ್ರೆಸ್ ಪ್ರತಿಭಟನಾ ಸಭಾ ಆಯೋಜಿಸಿತ್ತು. ಸಿಎಂ ಮಾತನಾಡುವಾಗ ಬಿಜೆಪಿಯ ಮಹಿಳಾ ಕಾರ್ಯಕರ್ತೆಯರು ಕಪ್ಪು ಪಟ್ಟಿಯನ್ನು ಧರಿಸಿ ಪ್ರತಿಭಟಿಸಿದರು. ಪಾಕ್ ಜೊತೆ ಯುದ್ಧ ಅನಿವಾರ್ಯವಲ್ಲ ಎಂಬ ಹೇಳಿಕೆಯನ್ನು ವಿರೋಧಿಸಿ ಬಿಜೆಪಿ ಕಾರ್ಯಕರ್ತರು ಕಪ್ಪು ಪಟ್ಟಿ ಪ್ರದರ್ಶಿಸಿದ್ದಾರೆ.ಈ ವೇಳೆ ಸಂಯಮ ಕಳೆದುಕೊಂಡ ಸಿಎಂ ಹೆಚ್ಚುವರಿ ಎಸ್‌ಪಿಯನ್ನು ತರಾಟೆಗೆ ತೆಗೆದು-ಕೊಂಡಿದ್ದಾರೆ.ಕಾಂಗ್ರೆಸ್ ಸಮಾವೇಶಕ್ಕೆ ಬಿಜೆಪಿ ಮಹಿಳಾ ಕಾರ್ಯಕರ್ತೆಯರು ಆಗಮಿಸಿದ್ದರು. ಬೇರೆ ನಾಯಕರ ಭಾಷಣದವರೆಗೆ ಸುಮ್ಮನೇ ಕುಳಿತಿದ್ದ ಕಾರ್ಯಕರ್ತೆಯರು ಸಿಎಂ ಭಾಷಣ ಮಾಡುವಾಗ ಕಪ್ಪು ಪಟ್ಟಿಯನ್ನು ತೋರಿಸಿ ಪ್ರತಿಭಟಿಸಿದರು. ಇದ್ದಕ್ಕಿದ್ದಂತೆ ತನ್ನ ಮುಂಭಾಗವೇ

ಪ್ರತಿಭಟನೆ ನೋಡಿ ಸಿಎಂ ಒಂದು ಕ್ಷಣ ಭಾಷಣ ಮಾಡುವುದನ್ನು ನಿಲ್ಲಿಸಿದರು. ನಿಲ್ಲಿಸಿದ ಬಳಿಕ ಯಾರದು ಎಸ್‌ಪಿ ಎಂದು ಹೇಳಿ ವೇದಿಕೆಗೆ ಬರುವಂತೆ ಹೇಳಿದ್ದಾರೆ. ಹೆಚ್ಚುವರಿ ಎಸ್‌ಪಿ ಬರುತ್ತಿದ್ದಂತೆ ಏನ್ರೀ ಇದು, ಏನು ಮಾಡ್ತಾ ಇದ್ದೀರಿ ಎಂದು ಪ್ರಶ್ನಿಸಿ ಕೈ ಎತ್ತಿ ಸಿಟ್ಟು ಹೊರಹಾಕಿದ್ದಾರೆ. ನಂತರ ಸಚಿವ ಎಂಬಿ ಪಾಟೀಲ್ ಅವರು ಸಿಎಂ ಸಿದ್ದರಾಮಯ್ಯ ಅವರನ್ನು ಸಮಾಧಾನಪಡಿಸಿದರು.

(2ನೇ ಪುಟ ನೋಡಿ)

## ದೇಶ ಮೊದಲು: ರಾಜಶೇಖರ ಪಾಟೀಲ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್.ಕಾಶ್ಮೀರದ ಪುಲ್ಗಾಮದಲ್ಲಿ ನಡೆದ ಘಟನೆಯಿಂದ ಅತಿ ದುಖವಾಗಿದೆ.ಅಮಾಯಕ ಯಾತ್ರಾರ್ಥಿಗಳನ್ನು ಗುಂಡಿಟ್ಟು ಕೊಂದ. ಭಯೋತ್ಪಾದಕರನ್ನು ಯಾವುದೇ ಕಾರಣಕ್ಕು ಸುಮ್ಮನೆ ಬಿಡಬಾರದು ಎಂದು ಮಾಜಿ ಸಚಿವ ರಾಜಶೇಖರ ಪಾಟೀಲರವರು ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ. ಈ ಕುರಿತು ಸೋಮವಾರ ಪತ್ರಿಕೆ ಜೊತೆ ಮಾತನಾಡಿದ ಅವರು, ಮೃತರ ಕುಟುಂಬಗಳಿಗೆ ಶ್ರದ್ಧಾಂಜಲಿ ಸಲ್ಲಿಸಲಾಗಿದೆ. ಇಂದು ನಾವು ಇರುತ್ತೆವು ನಾಳೆ ಇರುವುದಿಲ್ಲ, ಅಧಿಕಾರ.ಆಸ್ತಿ.ಅಂತಸ್ತು. ಬರುತ್ತೆ ಹೊಗುತ್ತೆ. ಆದರೆ ನಾವುಗಳು ದೇಶದ ವಿಷಯ ಬಂದಾಗ ಒಗ್ಗಟ್ಟಾಗಿ ಇರಬೇಕು.

(2ನೇ ಪುಟ ನೋಡಿ)

## ಪಾಕ್‌ನ ನ್ಯೂಸ್ ಚಾನೆಲ್ ಸೇರಿ 16 ಯೂಟ್ಯೂಬ್, 29 ಎಕ್ಸ್ ಖಾತೆ ಬ್ಯಾನ್




ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಏ.28: ಪಹಲ್ಗಾಮ್‌ನ ಉಗ್ರರ ದಾಳಿಯ ಬಳಿಕ ಭಾರತದ ವಿರುದ್ಧ ಪ್ರಚೋದನಕಾರಿ ಹಾಗೂ ನಕಲಿ ಸುದ್ದಿಯನ್ನು ಪ್ರಸಾರ ಮಾಡುತ್ತಿದ್ದ ಪಾಕಿಸ್ತಾನದ ನ್ಯೂಸ್ ಚಾನೆಲ್ ಸೇರಿ 16 ಯೂಟ್ಯೂಬ್ , 29 ಎಕ್ಸ್ ಖಾತೆಗಳನ್ನು ಕೇಂದ್ರ ಸರ್ಕಾರ ಭಾರತದಲ್ಲಿ ಬ್ಯಾನ್ ಮಾಡಿದೆ.

ಡಾನ್, ಸಮಾ ಟಿವಿ, ಎಆರ್‌ವೈ ನ್ಯೂಸ್, ಬೋಲ್ ನ್ಯೂಸ್, ರಫ್ತಾರ್, ಜಿಯೋ ನ್ಯೂಸ್ ಮತ್ತು ಸುನೋ ನ್ಯೂಸ್ ಸುದ್ದಿ ವಾಹಿನಿಗಳನ್ನ ಭಾರತದಲ್ಲಿ ಬ್ಯಾನ್ ಮಾಡಲಾಗಿದೆ. ಪತ್ರಕರ್ತರಾದ ಇರ್ಷಾದ್ ಭಟ್ಟಿ, ಅಸ್ಮಾ ಶಿರಾಜಿ, ಉಮರ್ ಚೀಮಾ ಮತ್ತು ಮುನೀಬ್ ಫಾರೂಕ್ ಅವರ ಯೂಟ್ಯೂಬ್ ಚಾನೆಲ್‌ಗಳನ್ನು ಸಹ ನಿಷೇಧಿಸಲಾಗಿದೆ. ದಿ ಪಾಕಿಸ್ತಾನ್ ರೆಫರೆನ್ಸ್, ಸಮಾ ಸ್ಪೋರ್ಟ್ಸ್, ಉಜೈರ್ ಕ್ರಿಕೆಟ್ ಮತ್ತು ರಾಜಿ ನಾಮಾ ಸೇರಿದಂತೆ ಇತರ ಖಾತೆಗಳನ್ನು ಕೇಂದ್ರ ಗೃಹ ಸಚಿವಾಲಯದ ಶಿಫಾರಸ್ಸಿನ ಮೇಲೆ ಬ್ಯಾನ್ ಮಾಡಲಾಗಿದೆ ಎಂದು ಮೂಲಗಳು ತಿಳಿಸಿವೆ.

ಈ ಚಾನೆಲ್‌ಗಳನ್ನು ನೋಡಲು ಯಾರಾದರೂ ಪ್ರಯತ್ನಿಸಿದರೆ, ಅವರಿಗೆ ಈ ಕೆಳಗಿನ ಸಂದೇಶವು ಕಾಣಿಸುತ್ತದೆ. 'ರಾಷ್ಟ್ರೀಯ ಭದ್ರತೆ ಅಥವಾ ಸಾರ್ವಜನಿಕ ಸುವ್ಯವಸ್ಥೆಗೆ ಸಂಬಂಧಿಸಿದ ಸರ್ಕಾರದ ಆದೇಶದಿಂದಾಗಿ ಈ ವಿಷಯವು ಪ್ರಸ್ತುತ ಈ ದೇಶದಲ್ಲಿ ಲಭ್ಯವಿಲ್ಲ. ಸರ್ಕಾರದ ಈ ನಿರ್ಧಾರದ ಕುರಿತು ಹೆಚ್ಚಿನ ವಿವರಗಳಿಗಾಗಿ, ದಯವಿಟ್ಟು ಗೂಗಲ್‌ನ ಪಾರದರ್ಶಕತೆ ವರದಿಗೆ ಭೇಟಿ ನೀಡಿ' ಎಂದು ತೋರಿಸುತ್ತದೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಪಾಕಿಸ್ತಾನವು ಪ್ರಮುಖ ಪಾತ್ರವಹಿಸಿದೆ ಎಂದು ಶಂಕಿಸಿ ಭಾರತ ಪಾಕ್ ವಿರುದ್ಧ ತೀವ್ರ ಕ್ರಮ ಕೈಗೊಂಡಿದೆ. ನವದೆಹಲಿ ಸಿಂಧೂ ಜಲ ಒಪ್ಪಂದ ಮತ್ತು

(2ನೇ ಪುಟ ನೋಡಿ)

## ಅಂತರರಾಜ್ಯ ಕಳ್ಳನ ಬಂಧನ 30 ಲಕ್ಷ ರೂ ಚಿನ್ನಾಭರಣ ಜಪ್ತಿ





ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಏ.28: ಅಶೋಕನಗರ ಪೊಲೀಸರು ಕಾರ್ಯಾಚರಣೆ ನಡೆಸಿ ಅಂತರರಾಜ್ಯ ಕುಖ್ಯಾತ ಕಳ್ಳನೊಬ್ಬನನ್ನು ಬಂಧಿಸಿ 30 ಲಕ್ಷ ರೂ.ಮೌಲ್ಯದ 412 ಗ್ರಾಂ. ಚಿನ್ನಾಭರಣ ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದರು.ನಗರದ ಕಮೀಷನರ್ ಕಚೇರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿ ವಿಷಯ ತಿಳಿಸಿದ ಅವರು, ಇಲ್ಲಿನ ಭಾಗ್ಯವಂತಿ ನಗರದ ಶಂಕರಗೌಡ ಬಮಶೆಟ್ಟಿ ಎಂಬುವವರ ಮನೆ ಬೀಗ ಮುರಿದು 14.60 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಲಾಗಿತ್ತು. ಈ ಸಂಬಂಧ ಶಂಕರಗೌಡ ಅವರು ಅಶೋಕ ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು.

ಈ ದೂರಿನ ಅನ್ವಯ ಪ್ರಕರಣದ ತನಿಖೆಗೆ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ್ ಅವರ ಮಾರ್ಗದರ್ಶನದಲ್ಲಿ ದಕ್ಷಿಣ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಭೂತೇಗೌಡ ವಿ.ಎಸ್. ಅವರ ನೇತೃತ್ವದಲ್ಲಿ ಅಶೋಕ ನಗರ ಪೊಲೀಸ್ ಠಾಣೆ ಪಿಐ ಅರುಣಕುಮಾರ, ಸಿಬ್ಬಂದಿಗಳಾದ ವೈಜಿನಾಥ, ಮಲ್ಲಿಕಾರ್ಜುನ ಮೇತ್ರಿ, ನೀಲಕಂಠರಾಯ ಪಾಟೀಲ, ಶಿವಲಿಂಗ, ಚಂದ್ರಶೇಖರ, ಸುಭಾಷ, ಚನ್ನವೀರೇಶ, ಅನುಜಾ ಅವರನ್ನು ಒಳಗೊಂಡ ತಂಡ ರಚಿಸಲಾಗಿತ್ತು.

ಅಶೋಕನಗರ ಪೊಲೀಸ್ ಠಾಣೆ ಪಿಐ ಅರುಣಕುಮಾರ ಅವರು ಸಿಬ್ಬಂದಿಗಳೊಂದಿಗೆ ರಾತ್ರಿ ಗಸ್ತು ಮೇಲ್ವಿಚಾರಣೆಯಲ್ಲಿದ್ದಾಗ ರಾಮ ಮಂದಿರ ಹತ್ತಿರವಿರುವ ಮಾನಕರ ಲೇಔಟ್‌ನಲ್ಲಿ ಅನುಮಾನಾಸ್ಪದವಾಗಿ ಓಡಾಡುತ್ತಿದ್ದ ಶಿವಪ್ರಸಾದ ಅಲಿಯಾಸ್ ಮಂತ್ರಿ ಶಂಕರ ತಂದೆ ಆದಿನಾರಾಯಣ

(2ನೇ ಪುಟ ನೋಡಿ)

## ರಾಜ್ಯದಲ್ಲಿ ಬಿಜೆಪಿಯವರಿಗೆ ಒಂದೇ ಒಂದು ಸಭೆ ಮಾಡಲು ಬಿಡಲ್ಲ: ಡಿಕೆಶಿ ಎಚ್ಚರಿಕೆ



ಮಲ್ಲಮ್ಮ ನುಡಿ ವಾರ್ತೆ ಬೆಳಗಾವಿ: ಏ.28:ರಾಜ್ಯದಲ್ಲಿ ಬಿಜೆಪಿಯವರಿಗೆ ಒಂದೇ ಒಂದು ಸಭೆ ಮಾಡಲು ಬಿಡಲ್ಲ.ಇದು ಕಾಂಗ್ರೆಸ್ ಪಕ್ಷದ ಪ್ರತಿಜ್ಞೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಬಿಜೆಪಿ ನಾಯಕರಿಗೆ ಎಚ್ಚರಿಕೆ ಕೊಟ್ಟಿದ್ದಾರೆ.ಸಿಎಂ ಸಿದ್ದರಾಮಯ್ಯ ಭಾಷಣದ ವೇಳೆ ಬಿಜೆಪಿ ಕಾರ್ಯಕರ್ತರ ಅಡ್ಡಿ ವಿಚಾರವಾಗಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬಿಜೆಪಿ ನಾಯಕರಿಗೆ ಒಂದು ಹೇಳಲು ಬಯಸುತ್ತೇನೆ.ನೀವು ಒಂದು ಸಭೆ ಮಾಡಲು ಬಿಡಲ್ಲ. ನಾನು ಕಾರ್ಯಕರ್ತರಿಗೆ ಒಂದು ಸಂದೇಶ ಕೊಡುತ್ತೇವೆ. ಇದೇ ವರ್ತನೆ ಮುಂದುವರಿಸಿದರೆ ಹುಷಾರ್ ಎಂದು ವಾರ್ನಿಂಗ್ ಕೊಟ್ಟರು.

ನಿಮಗಿಂತ ಕಾರ್ಯರೂಪಕ್ಕೆ ತರುವ ಶಕ್ತಿ ಜನ ನನಗೆ ಕೊಟ್ಟಿದ್ದಾರೆ. ಬಿಜೆಪಿ ಕಾರ್ಯಕರ್ತರಿಗೆ ಬುದ್ಧಿವಾದ ಹೇಳಿದ್ರೆ ಸರಿ, ಇದು ವಾರ್ನಿಂಗ್ ಎಂದು ಖಡಕ್ ಸಂದೇಶ ಕೊಟ್ಟರು.

## ಪಾಕಿಸ್ತಾನದ ವಿರುದ್ಧ ಕೇಂದ್ರ ಯುದ್ಧ ಪ್ರಾರಂಭ ಮಾಡಲಿ: ರಾಯರೆಡ್ಡಿ



ಮಲ್ಲಮ್ಮನುಡಿವಾರ್ತೆ ಬೆಂಗಳೂರು:ಏ.28: ಪಹಲ್ಗಾಮ್ ಘಟನೆ ಸೇಡು ತೀರಿಸಿಕೊಳ್ಳಲು ಕೂಡಲೇ ಕೇಂದ್ರ ಸರ್ಕಾರ ಯುದ್ಧ ಪ್ರಾರಂಭ ಮಾಡಬೇಕು ಎಂದು ಸಿಎಂ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಕೇಂದ್ರ ಸರ್ಕಾರವನ್ನು ಆಗ್ರಹಿಸಿದ್ದಾರೆ. ಅಲ್ಲದೇ ಸಿಎಂ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

## ೩೦ ಲಕ್ಷ ರೂ ಚಿನ್ನಾಭರಣ ಜಪ್ತಿ

ಮಂತ್ರಿ (56) ಎಂಬಾತನನ್ನು ವಿಚಾರಣೆಗೆ ಒಳಪಡಿಸಿದಾಗ ಅಶೋಕನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬರುವ ಭಾಗ್ಯವಂತಿ ನಗರದಲ್ಲಿನ ಮನೆ ಕಳ್ಳತನ ಸೇರಿದಂತೆ ಅಶೋಕನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ರಾತ್ರಿ ವೇಳೆ 9 ಕಳ್ಳತನ ಪ್ರಕರಣ, ಹಗಲು ವೇಳೆ 1 ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿರುವುದಾಗಿ ಬಾಯಿ ಬಿಟ್ಟಿದ್ದಾನೆ.ತಾನೂ ಮೂಲತ: ತೆಲಂಗಾಣ ರಾಜ್ಯದವನಾಗಿದ್ದು, ಕಳ್ಳತನ ಮಾಡಿದ ಬಂಗಾರ ಮತ್ತು ಬೆಳ್ಳಿ ಆಭರಣಗಳನ್ನು ಲಾತೂರ್ ಬಸ್ ನಿಲ್ದಾಣ ಮತ್ತು ರೈಲ್ವೆ ಸ್ಟೇಷನ್‌ಗಳಲ್ಲಿ ಯಾರಿಗಾದರೂ ಮಾರಾಟ ಮಾಡಿ ಬಂದ ಹಣವನ್ನು ಗುಡಿ ಗುಂಡಾರಗಳ ಜಾತ್ರೆಯಲ್ಲಿ ಸಾರ್ವಜನಿಕರಿಗೆ ಊಟ ಹಾಕುವುದು, ದೊಡ್ಡ ದೊಡ್ಡ ನಗರಗಳಿಗೆ ಹೋಗಿ ಮೋಜು-ಮಸ್ತಿ ಮಾಡುವುದು ಮತ್ತು ಡ್ಯಾನ್ಸ್ ಕ್ಲಬ್‌ಗಳಿಗೆ ಹೋಗಿ ಹಣ ಖರ್ಚು ಮಾಡುತ್ತಿರುವುದಾಗಿ ತಿಳಿಸಿದ್ದಾನೆ. ಕೆಲವೊಂದು ಆಭರಣಗಳನ್ನು ಕಲಬುರಗಿಯ ಅಯ್ಯರವಾಡಿಯಲ್ಲಿರುವ ಸಂಬಂಧಿಕರಾದ ಭಾಗವತ ಕಿಶನರಾವ ಅವರ ಮನೆಯಲ್ಲಿ ಅವರಿಗೆ ಗೊತ್ತಾಗದಂತೆ ಹಳೆಯ ಅಲಮಾರಿಯಲ್ಲಿ ಟಾವೆಲ್ಸ್‌ನಲ್ಲಿ ಗಂಟು ಕಟ್ಟಿ ಇಟ್ಟಿರುವುದಾಗಿ ತಿಳಿಸಿದ್ದಾನೆ. ಅವನು ನೀಡಿದ ಮಾಹಿತಿಯಂತೆ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ತಂಡ ಸ್ಥಳಕ್ಕೆ ತೆರಳಿ 30 ಲಕ್ಷ ರೂ.ಮೌಲ್ಯದ 412 ಗ್ರಾಂ.ಚಿನ್ನಾಭರಣವನ್ನು ವಶಪಡಿಸಿಕೊಂಡಿದೆ ಎಂದು ವಿವರಿಸಿದರು.ಶಿವಪ್ರಸಾದ ಅಲಿಯಾಸ್ ಮಂತ್ರಿ ಶಂಕರ ಮೂಲತ: ತೆಲಂಗಾಣ ರಾಜ್ಯದ ನಿವಾಸಿಯಾಗಿದ್ದು, ತನ್ನ 14ನೇ ವಯಸ್ಸಿನಲ್ಲಿಯೇ ಕಳ್ಳತನ ಮಾಡುವ ಚಾಳಿಗೆ ಬಿದ್ದಿದ್ದಾನೆ. ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ವಿವಿಧ ಪೊಲೀಸ್ ಠಾಣೆಗಳಲ್ಲಿ ಈತನ ವಿರುದ್ಧ 250 ಕಳ್ಳತನ ಪ್ರಕರಣಗಳು ದಾಖಲಾಗಿವೆ. 4 ಬಾರಿ ಪಿ.ಡಿ. ಕಾಯ್ದೆ ಅಡಿಯಲ್ಲಿ ಬಂಧಿಸಿ 4 ವರ್ಷಗಳ ಕಾಲ ಕೇಂದ್ರ ಕಾರಾಗೃಹದಲ್ಲಿ ಬಂಧಿಯಾಗಿದ್ದ ಎಂದು ತಿಳಿಸಿದರು.ಈ ಕಳ್ಳತನ ಪ್ರಕರಣ ಪತ್ತೆ ಹಚ್ಚುವಲ್ಲಿ ಯಶಸ್ವಿಯಾಗಿರುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ಅವರು ಶ್ಲಾಘಿಸಿದರು.ಶಿವಪ್ರಸಾದ ಅಲಿಯಾಸ್ ಮಂತ್ರಿ ಶಂಕರ ತಾನು ಕಳ್ಳತನ ಮಾಡಿದ ಬಂಗಾರ ಮತ್ತು ಬೆಳ್ಳಿ ಆಭರಣಗಳನ್ನು ಲಾತೂರ್ ಬಸ್ ನಿಲ್ದಾಣ ಮತ್ತು ರೈಲ್ವೆ ಸ್ಟೇಷನ್‌ಗಳಲ್ಲಿ ಯಾರಿಗಾದರೂ ಮಾರಾಟ ಮಾಡಿ ಬಂದ ಹಣವನ್ನು ಗುಡಿ ಗುಂಡಾರಗಳ ಜಾತ್ರೆಯಲ್ಲಿ ಸಾರ್ವಜನಿಕರಿಗೆ ಊಟ ಹಾಕುವುದು, ದೊಡ್ಡ ದೊಡ್ಡ ನಗರಗಳಿಗೆ ಹೋಗಿ ಮೋಜು-ಮಸ್ತಿ ಮಾಡುವುದು ಮತ್ತು ಡ್ಯಾನ್ಸ್ ಕ್ಲಬ್‌ಗಳಿಗೆ ಹೋಗಿ ಹಣ ಖರ್ಚು ಮಾಡುತ್ತಿದ್ದ ಎಂದು ವಿವರಿಸಿದರು.

## ವೇದಿಕೆಯಲ್ಲೇ ಕಪಾಳಮೋಕ್ಷಕ್ಕೆ ಮುಂದಾದ ಸಿಎಂ

ಘಟನೆಯ ನಂತರ ಸಮಾವೇಶದ ಹೊರಗೆ ಬಿಜೆಪಿ ಕಾರ್ಯಕರ್ತರು ಹಾಗೂ ಕಾಂಗ್ರೆಸ್ ಕಾರ್ಯಕರ್ತರ ನಡುವೆ ಜಟಾಪಟಿ ನಡೀತು. ಸ್ಥಳಕ್ಕೆ ಎಂಟ್ರಿಕೊಟ್ಟ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್, ಪೊಲೀಸರಿಗೆ ಅವಾಜ್ ಹಾಕಿದ್ರು. ಬಿಜೆಪಿ ಕಾರ್ಯಕರ್ತರನ್ನ ಒಳಗೆ ಹೇಗೆ ಬಿಟ್ರಿ..? ನೀವು ಎಲ್ಲಿಗೆ ಹೋಗಿದ್ರಿ ಎಂದು ಡಿಸಿಪಿ ರೋಹನ್ ಜಗದೀಶ್ ಅವರಿಗೆ ಏರುಧ್ವನಿಯಲ್ಲಿ ಕ್ಲಾಸ್ ತೆಗೆದುಕೊಂಡ್ರು.ಸಿಎಂ ಸಿದ್ದರಾಮಯ್ಯ ಭಾಷಣಕ್ಕೆ ಅಡ್ಡಿ ಪಡಿಸಿದ ಕುರಿತು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಪ್ರತಿಕ್ರಿಯಿಸಿದ್ದು, ನಮ್ಮಲ್ಲೂ ಕಾರ್ಯಕರ್ತರು ಇದ್ದಾರೆ. ಇಂತಹ ಬೆದರಿಕೆ ನಾವು ಹೆದರಲ್ಲ ಅಂದ್ರು, ಇನ್ನೂ, ಬಿಜೆಪಿಯವರಿಗೆ ಒಂದೇ ಒಂದು ಸಭೆ ಮಾಡಲು ಬಿಡಲ್ಲ ಎಂದು ಡಿಸಿಎಂ ಡಿಕೆಶಿ ಎಚ್ಚರಿಕೆ ಕೊಟ್ರು. ಸಿಎಂ ವರ್ತನೆಗೆ ಕೇಸರಿ ನಾಯಕರು ಗರಂ..!

ವೇದಿಕೆ ಮೇಲೆ ಪೊಲೀಸ್ ಅಧಿಕಾರಿ ಮೇಲೆ ಕೈಎತ್ತಲು ಹೋಗಿರೋದನ್ನ ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಖಂಡಿಸಿದ್ದಾರೆ. ಪೊಲೀಸರು ಸರ್ಕಾರದ ಗುಲಾಮರಾ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ಕಿಡಿಕಾರಿದ್ರು. ಬಿಜೆಪಿ ಮಹಿಳಾ ಮೋರ್ಚಾ ಅಧ್ಯಕ್ಷೆ ಮಂಜುಳಾ ಮಾತನಾಡಿ, ಸಿಎಂ ಎಲ್ಲೆ ಹೋದ್ರು ಕಪ್ಪು ಬಟ್ಟೆ ಪ್ರದರ್ಶನ ಮಾಡುತ್ತೇವೆ. ಹೋರಾಟಕ್ಕೂ ಅವಕಾಶ ನಿಮ್ಮ ಸರ್ಕಾರದಲ್ಲಿ ಇಲ್ವಾ..? ಎಂದು ಪ್ರಶ್ನಿಸಿದ್ರು.. ಇನ್ನೂ ಜೆಡಿಎಸ್ ಕೂಡ ಟ್ವೀಟ್ ಮಾಡಿ ಆಕ್ರೋಶ ಹೊರಹಾಕಿದೆ.

## ರಾಜಶೇಖರ ಪಾಟೀಲ

ದೇಶ ಮೊದಲು ಎಂದು ಅರ್ಥ ಮಾಡಿಕೊಳ್ಳಬೇಕು. ಎಂದರು. ನಮ್ಮ ದೇಶ ಸರ್ವ ಧರ್ಮ ಇರುವ ದೇಶವಾಗಿದೆ.ಪ್ರತಿಯೊಬ್ಬ ಯುವಕ ಯುವತಿಯರು ದೇಶದ ಭಕ್ತಿಯನ್ನು ಮೈಗೂಡಿಸಿಕೊಳ್ಳಬೇಕು ಎಂದು ರಾಜಶೇಖರ ಪಾಟೀಲ ರವರು ಕರೆ ನೀಡಿದ್ದಾರೆ.

## ಪ್ರಾರಂಭ ಮಾಡಲಿ: ರಾಯರೆಡ್ಡಿ

ಸಿದ್ದರಾಮಯ್ಯ ವಿರುದ್ಧ ಅಪಪ್ರಚಾರ ಮಾಡುತ್ತಿರುವ ಬಿಜೆಪಿ ನಾಯಕರಾದ ಅಶೋಕ್, ವಿಜಯೇಂದ್ರ ಸಿಎಂ ವಿರುದ್ಧದ ಹೇಳಿಕೆಯನ್ನು ವಾಪಸ್ ಪಡೆಯಬೇಕು ಎಂದು ಆಗ್ರಹಿಸಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ಅವರು ಯುದ್ಧ ಬೇಡ ಅಂತ ಹೇಳಿಲ್ಲ. ಅವರ ಹೇಳಿಕೆಯನ್ನ ತಪ್ಪಾಗಿ ಅರ್ಥೈಸಲಾಗಿದೆ. ಇದರಲ್ಲಿ ಬಿಜೆಪಿ ರಾಜಕೀಯ ಮಾಡುತ್ತಿದ್ದು, ಅಶೋಕ್, ವಿಜಯೇಂದ್ರ ಅವರು ಸಿಎಂ ವಿರುದ್ಧ ಮಾತನಾಡೋದು ಸರಿಯಲ್ಲ. ಕೂಡಲೇ ಇಬ್ಬರು ತಮ್ಮ ಹೇಳಿಕೆ ವಾಪಸ್ ಪಡೆಯಬೇಕು ಎಂದು ಆಗ್ರಹ ಮಾಡಿದರು. ಸಿಎಂ ಅವರ ಹೇಳಿಕೆ ಪಾಕಿಸ್ತಾನದಲ್ಲಿ ಬಂದರೆ ಅದಕ್ಕೂ ನಮಗೂ ಸಂಬಂಧವಿಲ್ಲ. ಸಿದ್ದರಾಮಯ್ಯ ಯಾವತ್ತೂ ದೇಶದ ವಿರುದ್ಧ ಮಾತಾಡಿಲ್ಲ ಎಂದು ಸಿಎಂ ಪರ ಬ್ಯಾಟ್ ಬೀಸಿದರು.

ಕೇಂದ್ರ ಸರ್ಕಾರ ಕೂಡಲೇ ಪಾಕಿಸ್ತಾನದ ವಿರುದ್ದ ಯುದ್ಧ ಪ್ರಾರಂಭ ಮಾಡಬೇಕು. ಯಾಕೆ ಇನ್ನೂ ಯುದ್ಧ ಮಾಡಲು ಮುಂದಾಗಿಲ್ಲ ಎಂದು ಪ್ರಶ್ನಿಸಿದರು. ರಾಹುಲ್ ಗಾಂಧಿ ಕಾಶ್ಮೀರಕ್ಕೆ ಹೋಗಿದ್ರು. ಪ್ರಧಾನಿ ಮೋದಿ ಹೋಗಿರಲಿಲ್ಲ. ಕೂಡಲೇ ಪ್ರಧಾನಿ ಮೋದಿ ಕಾಶ್ಮೀರಕ್ಕೆ ಹೋಗಿ ಸ್ಥಳ ಪರಿಶೀಲನೆ ಮಾಡಬೇಕು ಎಂದು ಒತ್ತಾಯಿಸಿದರು.

ಕೇಂದ್ರ ಸರ್ಕಾರ ಕೂಡಲೇ ವಿಶೇಷ ತುರ್ತು ಸಂಸತ್ ಅಧಿವೇಶನ ಕರೆಯಬೇಕು. ಪಾಕಿಸ್ತಾನವನ್ನ ಭಯೋತ್ಪಾದಕ ರಾಷ್ಟ್ರ ಅಂತ ಘೋಷಣೆ ಮಾಡಬೇಕು. ಯುದ್ಧ ಕೂಡಲೇ ಪ್ರಾರಂಭ ಮಾಡಬೇಕು. ಯುದ್ಧಕ್ಕೆ ಹೆಚ್ಚು ಹಣ ಖರ್ಚು ಮಾಡಲು ಸಂಸತ್ ಅಧಿವೇಶನದಲ್ಲಿ ಅನುಮತಿ ಪಡೆಯಬೇಕು. ಸೈನ್ಯದಲ್ಲಿ ಖಾಲಿ ಇರುವ ಹುದ್ದೆ ಕೂಡಲೇ ಭರ್ತಿ ಮಾಡಬೇಕು ಎಂದು ಆಗ್ರಹಿಸಿದರು.

## ಮೇಳಕುಂದಾ(ಬಿ) ಗ್ರಾಮದ ಕೆರೆ ಹೂಳೆತ್ತುವ ಕಾಮಗಾರಿ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.ಏ.28:ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿಯೋಜನೆಯಡಿ ಕಲಬುರಗಿ ತಾಲೂಕಿನ ಮೇಳಕುಂದಾ (ಬಿ) ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಮೇಳಕುಂದಾ (ಬಿ) ಗ್ರಾಮದ ಕೆರೆ ಹೂಳೆತ್ತುವ ಕಾಮಗಾರಿಯನ್ನು ಕಲಬುರಗಿ ತಾಲೂಕು ಪಂಚಾಯತ್ ಸಹಾಯಕ ನಿರ್ದೇಶಕ ರೇವಣಸಿದ್ದಪ್ಪ ಗೌಡರ ಅವರು ಪರಿಶೀಲಿಸಿ ಕೂಲಿ ಕಾರ್ಮಿಕರಿಗೆ ಮಾಹಿತಿ ನೀಡಿದರು.

ಕೆಲಸ ಮತ್ತು ಅಳತೆ ಮಾಡಿ ಕೂಲಿ ಕಾರ್ಮಿಕರು ಪ್ರತಿಯೊಬ್ಬರು ಪಿ.ಎಮ್.ಜೆ.ಜೆ.ವೈ ಮತ್ತು ಪಿ.ಎಮ್.ಎಸ್.ಬಿ.ವೈ. (PMJJY & PMSBY) ಯೋಜನೆಗಳಡಿ ಇನ್ಸುರೆನ್ಸ್ ಮಾಡಿಕೊಳ್ಳಬೇಕು. ಕೂಲಿ ಮೊತ್ತವನ್ನು 370=00 ರೂ.ಗಳಿಗೆ ಹೆಚ್ಚಿಸಲಾಗಿದೆ. ಎಲ್ಲರೂ ನಿಗದಿಪಡಿಸಿದ ಅಳತೆಗನುಗುಣವಾಗಿ ಕೆಲಸ ನಿರ್ವಹಿಸಬೇಕು. ಕಾಮಗಾರಿ ಸ್ಥಳದಲ್ಲಿ 220 ಕೂಲಿ ಕಾರ್ಮಿಕರು ಕೆಲಸ ನಿರ್ವಹಿಸುತ್ತಿದ್ದು, ಇವರಿಗೆ ನೆರಳಿನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ಆರೋಗ್ಯ ಕಿಟ್ ಹಾಗೂ ಓ.ಆರ್.ಎಸ್. ಪಾಕೇಟ್ ವ್ಯವಸ್ಥೆ ಮಾಡುವ ಜವಾಬ್ದಾರಿಯು ಪಿ.ಡಿ.ಓ. ಅವರ ಮೇಲೆ ಇರುತ್ತದೆ ಎಂದರು.

ಈ ಸಂದರ್ಭದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸುವರ್ಣಾ, ಐ.ಈ.ಸಿ.ಸಂಯೋಜಕ ಮೋಸಿನ್ ಖಾನ್, ತಾಂತ್ರಿಕ ಸಹಾಯಕರಾದ ಎಮ್.ಡಿ ಗೌಸ್,ಬಿ.ಎಫ್.ಟಿ ಮಾಳಿಂಗರಾಯ ಕೋಟೆ, ಮಮತ ಜಿ.ಕೆ.ಎಮ್ ಹಾಗೂ ಗ್ರಾಮ ಪಂಚಾಯತಿ ಸಿಬ್ಬಂದಿಗಳು ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

## ಚೈಲ್ಡಿಶ್:ಓವೈಸಿ

ಸರ್ಕಾರವನ್ನು ಒತ್ತಾಯಿಸುತ್ತೇವೆ ಎಂದರು.

ಪಹಲ್ಗಾಮ್ ದಾಳಿಯ ನಂತರ ಬಿಲಾವಲ್ ಭುಟ್ಟೋ ಜರ್ದಾರಿ ಅವರು, ಸಿಂಧೂ ನದಿ ನೀರು ನಿಲ್ಲಿಸಿದರೆ 'ರಕ್ತ ಹರಿಯುತ್ತದೆ' ಎಂಬ ಹೇಳಿಕೆಗೆ ಪ್ರತಿಕ್ರಿಯಿಸಿದ ಓವೈಸಿ, "ಬಚ್ಚಾನೆ ಕಿ ಬಾತೇ ನಹಿ ಕರ್ನಾ (ಚೈಲ್ಡಿಶ್ ಹೇಳಿಕೆ ನೀಡಬೇಡಿ). ಅವರ ತಾಯಿಯನ್ನು ಅಲ್ಲಿನ ಸ್ಥಳೀಯ ಭಯೋತ್ಪಾದಕರೇ ಕೊಂದರು. ಅವರು ಏನು ಹೇಳುತ್ತಿದ್ದಾರೆಂದು ಅವರಿಗೆ ಗೊತ್ತಿದೆಯೇ?" ಎಂದು ಪ್ರಶ್ನಿಸಿದರು.ಅವರು ತಮ್ಮ ರಾಜಕೀಯ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಭಾರತದ ಏಕತೆಯನ್ನು ದುರ್ಬಲಗೊಳಿಸಲು ಬಯಸುತ್ತಿದ್ದಾರೆ. "ನಿಮ್ಮ ಸ್ವಂತ ರಾಜಕೀಯ ಭಿನ್ನಾಭಿಪ್ರಾಯಗಳನ್ನು ಹೊಂದಿರಬಹುದು, ಆದರೆ ಈ ಏಕತೆಯನ್ನು ದುರ್ಬಲಗೊಳಿಸಲು ಬಯಸುವ ಜನರನ್ನು ಗೆಲ್ಲಲು ಬಿಡಬೇಡಿ, ಈ ರಾಷ್ಟ್ರವನ್ನು ದುರ್ಬಲಗೊಳಿಸಬೇಡಿ" ಎಂದು ಓವೈಸಿ ಹೇಳಿದರು.ಇದಕ್ಕು ಮುನ್ನ "ಪಾಕಿಸ್ತಾನವು ಭಾರತವನ್ನು ಗುರಿಯಾಗಿಸಲು ಹಲವು ವರ್ಷಗಳಿಂದ ಭಯೋತ್ಪಾದಕರಿಗೆ ತರಬೇತಿ ನೀಡುತ್ತಿದೆ. ಆದರೆ ಪಾಕಿಸ್ತಾನ ಒಂದಲ್ಲ ಒಂದು ದಿನ ತನ್ನ ಕುತಂತ್ರಗಳಿಗೆ ತಕ್ಕ ಬೆಲೆ ತೆರಲಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪಾಕಿಸ್ತಾನವನ್ನು ಆರ್ಥಿಕವಾಗಿ ದುರ್ಬಲಗೊಳಿಸಲು ಕ್ರಮ ಕೈಗೊಳ್ಳಬೇಕು" ಎಂದು ಹೈದರಾಬಾದ್ ಸಂಸದ ಹೇಳಿದ್ದರು.

"ಪಾಕಿಸ್ತಾನ ಪದೇ ಪದೇ ತಮ್ಮಲ್ಲಿ ಪರಮಾಣು ಬಾಂಬ್‌ಗಳಿವೆ, ಅಣು ಬಾಂಬ್‌ಗಳಿವೆ ಎಂದು ಹೇಳುತ್ತದೆ. ನೆನಪಿಡಿ, ನೀವು ಇನ್ನೊಂದು ದೇಶಕ್ಕೆ ಹೋಗಿ ಮುಗ್ಧ ಜನರನ್ನು ಕೊಂದರೆ, ಯಾವುದೇ ದೇಶ ಸುಮ್ಮನಿರುವುದಿಲ್ಲ" ಎಂದು ಅಸಾದುದ್ದೀನ್ ಓವೈಸಿ ಎಚ್ಚರಿಸಿದರು.

"ನೀವು ಕೇವಲ ಅರ್ಧ ಗಂಟೆ ಹಿಂದಿಲ್ಲ, ನೀವು ಭಾರತಕ್ಕಿಂತ ಅರ್ಧ ಶತಮಾನ ಹಿಂದಿದ್ದೀರಿ. ನಿಮ್ಮ ದೇಶದ ಬಜೆಟ್ ನಮ್ಮ ಮಿಲಿಟರಿ ಬಜೆಟ್‌ಗೆ ಸಮನಾಗಿರುವುದಿಲ್ಲ" ಎಂದು ಅಸಾದುದ್ದೀನ್ ಓವೈಸಿ ಪಾಕಿಸ್ತಾನದ ವಿರುದ್ಧ ಗುಡುಗಿದರು.

## ಯೂಟ್ಯೂಬ್, ೨೯ ಎಕ್ಸ್ ಖಾತೆ ಬ್ಯಾನ್

ಪಾಕಿಸ್ತಾನಿ ಪ್ರಜೆಗಳಿಗೆ ವೀಸಾ ಸೇವೆಗಳನ್ನು ಸ್ಥಗಿತಗೊಳಿಸಿದೆ. ಇದರ ಬೆನ್ನಲ್ಲೇ ಪಾಕ್ ಕೂಡಾ ಶಿಮ್ಲಾ ಗಡಿ ಒಪ್ಪಂದ ಸೇರಿ ಎಲ್ಲಾ ರೀತಿಯ ರಾಜತಾಂತ್ರಿಕ ಸಂಬಂಧಗಳನ್ನು ಕಡಿದುಕೊಂಡಿದೆ. 'ಕಾಶ್ಮೀರದಲ್ಲಿ ಪ್ರವಾಸಿಗರ ಮೇಲಿನ ದಾಳಿಯ ನಂತರ ಭಾರತದಲ್ಲಿರುವ ಪಾಕ್ ಪ್ರಜೆಗಳಿಗೆ ವೀಸಾ ಸ್ಥಗಿತಗೊಳಿಸಿದೆ' ಎಂಬ ಶೀರ್ಷಿಕೆಯ ಬಗ್ಗೆ ಸರ್ಕಾರ ಬಿಬಿಸಿಗೆ ಎಚ್ಚರಿಕೆ ನೀಡಿದೆ. ಅಲ್ಲದೇ ಕೆಲವು ಸುದ್ದಿಗಳಲ್ಲಿ 'ಭಾರತ ಪ್ರವಾಸಿಗರನ್ನು ಕೊಂದಿದೆ' ಎಂಬ ಶೀರ್ಷಿಕೆಯನ್ನು ಹಾಕಲಾಗಿದೆ. ಈ ಕುರಿತು ಬಿಬಿಸಿಗೆ ಪತ್ರ ಬರೆದ ಭಾರತ ವಾಸ್ತವ ವರದಿಗಳನ್ನಷ್ಟೇ ಪ್ರಸಾರ ಮಾಡುವಂತೆ ಖಡಕ್ ಎಚ್ಚರಿಕೆ ಸಂದೇಶ ರವಾನಿಸಿದೆ.

## ರಸ್ತೆ ನಿರ್ಮಾಣ ಕಾಮಗಾರಿಗೆ ಶಾಸಕರಿಂದ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಏ.28: ತಾಲೂಕಿನ ಠಾಣಾಕುಶನೂರ, ಡೋಣಗಾಂವ (ಎಂ), ರಾಂಪೂರ, ಚಿಕಲಿ ತಾಂಡಾ, ಹೋಳಸಮುದ್ರ ಮತ್ತು ಕಳಗಾಪುರ ಗ್ರಾಮಗಳಿಗೆ ಶಾಸಕ ಪ್ರಭು ಚವ್ಹಾಣ ಶನಿವಾರ ಭೇಟಿ ನೀಡಿ ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿದರು.

ಸಿ.ಆರ್.ಎಫ್ ಯೋಜನೆಯಡಿ ಠಾಣಾಕುಶನೂರ ಗ್ರಾಮದಿಂದ ಸಂಗಮ್ ಕ್ರಾಸ್‌ವರೆಗೆ ರಸ್ತೆ ಸುಧಾರಣೆ ರೂ. 6 ಕೋಟಿ, ಕೆ.ಕೆ.ಆರ್.ಡಿ.ಬಿ ಯೋಜನೆಯಡಿ ಡೋಣಗಾಂವ್ (ಎಂ) ಗ್ರಾಮದಲ್ಲಿ ರಸ್ತೆ ನಿರ್ಮಾಣ ಕಾಮಗಾರಿಗೆ 2.30 ಕೋಟಿ ರೂ.ಗಳು, ರಾಂಪುರ-ಕೋಟಗ್ಯಾಳ ಮುಖ್ಯ ರಸ್ತೆಯಿಂದ ಕಮಲನಗರವರೆಗೆ ರಸ್ತೆ ನಿರ್ಮಾಣ 70 ಲಕ್ಷ ರೂ.ಗಳು ಮತ್ತು ಕಳಗಾಪುರ ಗ್ರಾಮದಿಂದ ಸೋನಾಳ ಕ್ರಾಸ್‌ವರೆಗೆ ರಸ್ತೆ ನಿರ್ಮಾಣಕ್ಕೆ 1.20 ಕೋಟಿ ರೂ.ಗಳ ವಿವಿಧ ಅಭಿವೃದ್ಧಿ ದ್ದಿ ಕಾಮಗಾರಿಗಳಿಗೆ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಶಾಸಕರು, ಕಾಮಗಾರಿ ಅಂದಾಜು ಪಟ್ಟಿಯಲ್ಲಿರುವಂತೆ ಗುಣಮಟ್ಟದಿಂದ ಮತ್ತು ನಿಗದಿತ ಅವಧಿಯೊಳಗೆ ಕಾಮಗಾರಿ ಮುಗಿಸಬೇಕು. ಡಾಂಬರೀಕರಣ, ಕ್ಯೂರಿಂಗ್ ಸರಿಯಾಗಿ ಆಗಬೇಕು. ರಸ್ತೆಯ ಬಗ್ಗೆ ಜನರಿಂದ ಯಾವುದೇ ರೀತಿಯ ದೂರುಗಳು ಬಾರದಂತೆ ಸರಿಯಾಗಿ ಕಾಮಗಾರಿ ಕೈಗೊಳ್ಳಬೇಕು.

ಒಂದು ವೇಳೆ ದೂರುಗಳು ಬಂದರೆ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ನಳಿನ ಭಾಂಗೆ, ಮಾಲಬಾ ಉದಾಜಿ, ರಮೇಶ ಬಿರಾದಾರ, ಧೋಂಡಿಬಾ ನರೋಟೆ, ಅನೀಲ್ ಬಿರಾದಾರ, ಶಿವು ವಡೆ, ಶಿವು ಝುಲ್ಪೆ, ಉದಯ ಸೋಲಾಪುರೆ, ಬಂಟಿ ರಾಂಪುರೆ, ರಾಜಕುಮಾರ ಅಲಜಿದೆ ಪಂಚಾಯತ್ ರಾಜ್ ಇಲಾಖೆಯ ಎಇಇ ವೆಂಕಟ್ ಶಿಂಧೆ ಹಾಗೂ ಲೋಕೋಪಯೋಗಿ ಇಲಾಖೆ ಅಧಿಕಾರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಾರ್ವಜನಿಕರು ಹಾಜರಿದರು.

## ಜೀವನಪರಿಶುದ್ಧ ವಾಗಬೇಕಾದರೆ ಸತ್ಸಂಗ ಅತ್ಯವಶ್ಯಕ: ಶಿವಾನಂದ ಶಿವಾಚಾರ್ಯರು



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಏ.28:ಜೀವನದಲ್ಲಿ ಉತ್ತಮ ಬದುಕನ್ನು ಸಾಗಿಸುವುದಾದರೆ ಜೀವನವು ಪಾವನವಾಗಬೇಕು ಪಾವನವಾಗಲು ಅಲ್ಲಿ ಮನಸು ಪರಿಶುದ್ಧವಾಗಬೇಕು ಅದಕ್ಕಿರುವ ಏಕ್ ಮಾತ್ರ ಸಾಧನವೆಂದರೆ ಸತ್ಸಂಗವೇ ಕಾರಣ ಎಂದು ತಮಲೂರಿನ ಶಿವಾನಂದ ಶಿವಾಚಾರ್ಯರು ಮಹಾಸ್ವಾಮಿಗಳು ನುಡಿದರು.

ತಾಲೂಕಿನ ಹೊಳಸಮುದ್ರ ಗ್ರಾಮದಲ್ಲಿ ಪ್ರತಿ ವರ್ಷದಂತೆ ಈ ವರ್ಷ ಕೂಡಾ ಎಪ್ರಿಲ್ 20 ರಿಂದ ಜರಗುತ್ತಿರುವ ಸಪ್ತಾಹ ಕಾರ್ಯಕ್ರಮದ ಆರನೇ ದಿನದ 53ನೇ ವರ್ಷದ ಅಖಂಡ ಹರಿನಾಮ ಸಪ್ತಾಹ ಮತ್ತು ಜ್ಞಾನೇಶ್ವರಿ ಪಾರಾಯಣ ನಿಮಿತ್ತ ಮಂಡಳಿ ವತಿಯಿಂದ ನಡೆಯುವ ಪ್ರವಚನ ಕಾರ್ಯಕ್ರಮವನ್ನು ಉದ್ದೇಶಿಸಿ ಜಗತ್ತು ಶಾಂತಿ ಮತ್ತು ನೆಮ್ಮದಿಯಿಂದ ಬದುಕಬೇಕು ಇದಕ್ಕಾಗಿ ಪರಮಾತ್ಮನಲ್ಲಿ ಭಕ್ತಿ ಆಳವಾಗಿ ಇರಬೇಕು.

ಎಂಬುವಂತೆ ಶಿವನಾಮ ಸ್ಮರಣೆಯಿಂದ ಭಕ್ತಿಯ ಮಾರ್ಗ ನಡೆದುಕೊಂಡ ಶ್ರವಣಕುಮಾರನ ತಂದೆ ತಾಯಿಯ ಬದುಕಿನ ದೃಷ್ಟಾಂತವನ್ನು ಹೇಳಿದರು.

ಈ ಸಂದರ್ಭದಲ್ಲಿ ಭಾಗವಂತ ಹಂಡೆ, ಪ್ರವೀಣ್ ಮಹಾರಾಜ, ಪ್ರಶಾಂತ್ ಬೀರಾದಾರ, ಶಂಕರ್ ವಡಗಾಂವೆ ಶಂಕರ್ ಪೂಜಾರಿ, ಸಂಜು ಪಾಂಡ್ರೆ, ವೈಜಿನಾಥ್ ಕಾರಾಗಿರೆ, ಗೌರಕಮೂಗಳೆ, ದತ್ತ ಕೊಡ್ಲೆ ವಿಲಾಸ್ ರಾವ್ ಜಾಧವ, ನಾರಾಯಣ ಪಾಟೀಲ್, ಸತೀಶ್ ರಾಮಚಂದ್ರ, ಬಾಲಾಜಿ ಕುಡ್ಲೆ ಜ್ಞಾನೋಭಾ ಶಿಂಧೆ, ಕಿಶನ್ ರಾವ್ ಜಾದವ್, ರಾಮರಾವ್ ವಿಠ್ಠಲ್ ರಾವ್ ಪಾಟೀಲ್, ಬಾಳ ಸಾಹೇಬ್ ಶಂಕರರಾವ್ ಪಾಡೊದೆ, ಮನೋಜ ಬೋರ್ಳೆ, ವೇದಾಂತ ಬಿರಾದಾರ್, ಹರಿನಾಥ ಕದಂ, ಹರಿಪ್ರಸಾದ್, ಡಾಕ್ಟರ್ ಪಾಂಡುರಂಗ ರಘೂಜಿ, ರಾಜಕುಮಾರ ವಡಗೀರೆ ರಾಮರಾವ್ ಬಜಾಜ್ ಪಪ್ಪುವಾಡಿಕರ್ ಹಾಗೂ ಹೊಳೆಸಮುದ್ರ ಗ್ರಾಮದ ಸುತ್ತಮುತ್ತಲಿನ ಭಕ್ತರು ಉಪಸ್ಥಿತರಿದ್ದರು.

## ಜಗ್ಗಲ್ಲ-ಬಗ್ಗಲ್ಲ:ಸಿಎಂ

ಇವರ ಹಿಂದೆ ನಿಂತಿರುವ ಮುಖೇಡಿ ನಾಯಕರಿಗೆ ನೇರವಾಗಿ ಎಚ್ಚರಿಕೆ ಕೊಡುತ್ತಿದ್ದೇನೆ. ನಾವು ಬಿಜೆಪಿ - ಆರ್.ಎಸ್.ಎಸ್ ನ ಗೊಡ್ಡು ಬೆದರಿಕೆಗಳಿಗೆ ಜಗ್ಗಲ್ಲ-ಬಗ್ಗಲ್ಲ. ನಿಮ್ಮನ್ನೆಲ್ಲಾ ಸಾರ್ವಜನಿಕವಾಗಿ ಎದುರಿಸುವ ಶಕ್ತಿ ನನಗಿದೆ, ನಮ್ಮ ಕಾರ್ಯಕರ್ತರಿಗೂ ಇದೆ ಎಂದು ಎಚ್ಚರಿಕೆ ನೀಡಿದರು.ಕೇಂದ್ರ ಸರ್ಕಾರ ಕಳೆದ ಹತ್ತು ವರ್ಷಗಳಿಂದ ನಿರಂತರವಾಗಿ ಬೆಲೆ ಏರಿಕೆ ಮಾಡುತ್ತಾ, ಭಾರತೀಯರ ಬದುಕನ್ನು ಬೆಲೆ ಏರಿಕೆಯಲ್ಲಿ ಬೇಯಿಸುತ್ತಾ, ಭಾರತೀಯ ಸಮಾಜವನ್ನು ಛಿದ್ರಗೊಳಿಸುತ್ತಾ, ಜನರ ನಡುವೆ ಬಿರುಕು ಮೂಡಿಸುತ್ತಾ ಜನದ್ರೋಹಿಯಾಗಿ ವರ್ತಿಸುತ್ತಿರುವುದು ಬಿಟ್ಟರೆ ಬೇರೆ ಏನು ಮಾಡಿದೆ? ಭಾರತೀಯರು ಬ್ರಿಟೀಷರ ವಿರುದ್ಧ ಪ್ರಾಣತ್ಯಾಗ ಮಾಡಿ ಹೋರಾಡುತ್ತಿದ್ದಾಗ ನೀವು ಅಂದರೆ ಸಂಘ ಪರಿವಾರದವರು ಏನು ಕಡೆದು ಕಟ್ಟೆ ಹಾಕ್ತಿದ್ರಿ? ಸ್ವಾತಂತ್ರ್ಯ ಹೋರಾಟಕ್ಕೆ ಏಕೆ ಬರಲಿಲ್ಲ ? ಏನ್ ಮಾಡ್ತಾ ಕೂತಿದ್ರಿ? ಎಂದು ಪ್ರಶ್ನಿಸಿದರು.ಮನಮೋಹನ್ ಸಿಂಗ್ ಅವರು ಪ್ರಧಾನಿ ಆಗಿದ್ದಾಗ ಅತ್ಯಂತ ಶ್ರೀಮಂತರ ಮೇಲೆ ಶೇ. 32 ರಷ್ಟು ಟ್ಯಾಕ್ಸ್ ಇತ್ತು. ಮೋದಿ ಬಂದ ಮೇಲೆ ಅತ್ಯಂತ ಶ್ರೀಮಂತರ ಮೇಲಿನ ತೆರಿಗೆಯನ್ನು ಶೇ. 25 ಇಳಿಸಿದ್ದಾರೆ. ಬಡವರು, ಮಧ್ಯಮ ವರ್ಗದವರ ಮೇಲಿನ ತೆರಿಗೆಯನ್ನು ಹೆಚ್ಚಿಸಿದಿರಿ. ನಾಚಿಕೆ ಆಗುತ್ತಿಲ್ಲ ನಿಮಗೆ. ಬಡವರ, ಮಧ್ಯಮ ವರ್ಗದವರ ವಿರೋಧಿ ಬಿಜೆಪಿಯ ಆಡಳಿತವನ್ನು ಪ್ರಶ್ನಿಸಬಾರದಾ? ಭಾರತೀಯರನ್ನು ಇನ್ನೂ ಎಷ್ಟು ವರ್ಷ ಸುಳ್ಳು ಹೇಳಿ ಮರಳು ಮಾಡ್ತೀರಿ. ಸತ್ಯ ಹೇಳಿ ಎಂದು ಒತ್ತಾಯಿಸಿದರು.ಹಾಲಿನ ದರ 4 ರೂ ಹೆಚ್ಚಿಸಿ, ಇಡೀ 4 ರೂಪಾಯಿಯನ್ನು ಪೂರ್ತಿಯಾಗಿ ರೈತರಿಗೆ, ಗೋಪಾಲಕರಿಗೆ, ಗೋ ಸಾಕಾಣಿಕೆದಾರರಿಗೆ ವರ್ಗಾಯಿಸಿದ್ದೀವಿ.

## ಬಸವ ಜಯಂತಿ: ಅದ್ದೂರಿ ಆಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.28: ಬಸವ ಜಯಂತಿಯನ್ನು ಅದ್ದೂ-ರಿಯಾಗಿ ಅಚರಿಸಲು ಎಲ್ಲರ ಸಹಕಾರ ಅಗತ್ಯ' ಎಂದು ಹಿರೇಮಠ ಸಂಸ್ಥಾನದ ಪೀಠಾದಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.

ಪಟ್ಟಣದ ಕುಂಬಾರಗುಂಡಯ್ಯ ಕಲ್ಯಾಣಮಂಟಪದಲ್ಲಿ ಭಾನುವಾರ ನಡೆದ ಬಸವಜಯಂತಿ ಉತ್ಸವದ ಕರಪತ್ರ ಬಿಡುಗಡೆ ಸಮಾರಂಭದಲ್ಲಿ ಅವರು ಮಾತನಾಡಿದರು.

12ನೇ ಶತಮಾನದಲ್ಲಿ ಬಸವಣ್ಣನವರು ಸರ್ವರನ್ನೂ ಸೇರಿಸಿಕೊಂಡು ಅನುಭವ ಮಂಟಪ ಎಂಬ ಸಂಸತ್ತು ನಿರ್ಮಿಸಿ ಎಲ್ಲರಿಗೂ ಸಮಾನತೆ ಕಲ್ಪಿಸಿದ್ದರು. ಬಸವಾದಿ ಶರಣ-ರ ಉದಾತ್ತ ವಿಚಾರಗಳು, ವಚನಗಳು ಹಾಗೂ ಮೌಲಿಕ ಕಾರ್ಯಗಳಿಂದ ಜಗತ್ತು ಇಂದು ನಮ್ಮ ರಾಷ್ಟ್ರದತ್ತ ನೋಡುವಂತಾಗಿದೆ' ಎಂದು ಹೇಳಿದರು.

ಉತ್ಸವ ಸಮಿತಿ ಅಧ್ಯಕ್ಷ ಶಿವು ಲೋಖಂಡೆ ಮಾತನಾಡಿ, 'ಬಸವ ಜಯಂತಿ ಉತ್ಸವ ಸಮಿತಿ ವತಿಯಿಂದ ಏ.28, 29 ಮತ್ತು 30 ರಂದು ಮೂರು ದಿನಗಳವರೆಗೆ ಬಸವ ಜಯಂತಿ ಮಹೋತ್ಸವ ಆಚರಿಸಲಾಗುತ್ತಿದೆ. ಏ. 28, 29 ರಂದು ಸಂಜೆ 6 ಗಂಟೆಗೆ ವಿಶೇಷ ಅನುಭಾವ ಗೋಷ್ಠಿಗಳು ನಡೆಯುತ್ತವೆ. ನಂತರ ವಿವಿಧ ಶಾಲೆ, ಕಾಲೇಜುಗಳ ವಿದ್ಯಾರ್ಥಿಗಳಿಂದ, ಮಕ್ಕಳಿಂದ ಸಂಗೀತ, ವಚನ ನೃತ್ಯ ಸೇರಿದಂತೆ ಹಲವಾರು ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುತ್ತವೆ. ಬಸವ ಜಯಂತಿಯಂದು ಉತ್ಸವ ಸಮಿತಿಯ ವತಿಯಿಂದ ದಿನಪೂರ್ತಿ ಪ್ರಸಾದ ವ್ಯವಸ್ಥೆ ಆಯೋಜಿಸಲಾಗಿದೆ. ಎಲ್ಲಾ ಭಕ್ತರು ಪ್ರಸಾದ ಸ್ವೀಕರಿಸಬೇಕು' ಎಂದು ಹೇಳಿದರು.

ಉದ್ಯಮಿ ಚನ್ನಬಸವಣ್ಣ ಬಳತೆ, ಡಾ.ಅಮಿತ್ ಅಷ್ಟೂರೆ, ಕಿರಣಕುಮಾರ ಖಂಡ್ರೆ, ಜೈರಾಜ ಪಾತ್ರೆ, ಚಂದ್ರಕಾಂತ ಪಾಟೀಲ, ಸುನಿತಾ ಶಿವಶರಣಪ್ಪ, ಶಶಿಧರ ಕೋಸಂಬೆ, ಜಗದೀಶ ಖಂಡ್ರೆ, ಪ್ರಕಾಶ ಮಾಶೆಟ್ಟೆ, ಬಸವರಾಜ ವಂಕೆ, ವಿಲಾಸ ಬಕ್ಕಾ, ಮಹಾಂತೇಶ ದಶಮುಖೆ, ಟಿಂಕು ರಾಜಭವನ, ಮಲ್ಲಮ್ಮಾ ನಾಗನಕೇರೆ ಉಪಸ್ಥಿತರಿದ್ದರು. ದೀಪಕ ಥಮಕೆ ನಿರೂಪಿಸಿದರು.

## ತಾಡಪತ್ರಿ ಸೌಲಭ್ಯಕ್ಕೆ ಅರ್ಜಿ ಆಹ್ವಾನ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.28:ಕೃಷಿಸಂಸ್ಕರಣಾ ಯೋಜನೆಯಡಿ ತಾಡಪತ್ರಿಗಳ ವಿತರಣೆಗಾಗಿ ತಾಲೂಕಿನ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಮೇ 6ರ ವರೆಗೆ ಅರ್ಜಿ ಸಲ್ಲಿಸಲು ಅವಕಾಶ ಇದೆ. ಕಳೆದ ವರ್ಷ ತಾಡಪತ್ರಿ ಪಡೆದ ಫಲಾನುಭವಿಗಳಿಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ಅರ್ಜಿ ಸಲ್ಲಿಸುವವರು ಎಫ್‌ಐಡಿ, ಆಧಾರ ನಕಲು, ಜಾತಿ ಪ್ರಮಾಣಪತ್ರದೊಂದಿಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಆಯಾ ರೈತ ಸಂಪರ್ಕ ಕೇಂದ್ರದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಸಹಾಯಕ ಕೃಷಿ ನಿರ್ದೇಶಕ ಪಿ.ಎಂ.ಮಲ್ಲಿಕಾರ್ಜುನ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮರಾಠಾ ಸಮಾಜವನ್ನು ೩ಬಿ ಯಿಂದ ೨ಎ ಗೆ ಸೇರ್ಪಡೆ ಮಾಡಿ: ನಾರಾಯಣ ಗಣೇಶ




ಮಲ್ಲಮ್ಮ ನುಡಿ ವಾರ್ತೆ

ಬೀದರ.ಏ.28:ರಾಜ್ಯದಲ್ಲಿನ ಮರಾಠಾ ಸಮಾಜವನ್ನು ಪ್ರವರ್ಗ 3ಬಿ ಯಿಂದ 2ಎ ಗೆ ಸೇರ್ಪಡೆ ಮಾಡಬೇಕೆಂದು ಮರಾಠಾ ಕ್ರಾಂತಿ ಮೋರ್ಚಾದ ರಾಜ್ಯ ಸಂಘಟಕರಾದ ನಾರಾಯಣ ಗಣೇಶ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

ನಗರದಲ್ಲಿ ಛತ್ರಪತಿ ಶಿವಾಜಿ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಪಾದಯಾತ್ರೆ ಮೂಲಕ ನಡೆದುಕೊಂಡು ಬಂದು ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರವನ್ನು ಜಿಲ್ಲಾಧಿಕಾರಿಗಳ ಮುಖಾಂತರ ಸಲ್ಲಿಸಿ ಮಾಧ್ಯಮದವರೊಂದಿಗೆ ಮಾತನಾಡಿ ತಿಳಿಸಿದರು. ಮರಾಠಾ ಸಮುದಾಯ ಆರ್ಥಿಕವಾಗಿ, ಶೈಕ್ಷಣಿಕವಾಗಿ, ಸಾಮಾಜಿಕವಾಗಿ, ರಾಜಕೀಯವಾಗಿ ಹಿಂದುಳಿದಿದೆ. ನಮಗಿಂತ ಬಲಿಷ್ಠ ಸಮುದಾಯದವರು 2ಎ ಪ್ರವರ್ಗದಲ್ಲಿದ್ದಾರೆ. ಇದರಿಂದ ಮರಾಠರಿಗೆ ಅನ್ಯಾಯವಾಗುತ್ತಿದೆ. ಈ ಹಿಂದೆ ಜಾತಿಜನಗಣತಿ ಬಳಿಕ ತಮ್ಮ ಬೇಡಿಕೆಗೆ ಗಮನ ಹರಿಸಲಾಗುವುದು ಎಂದು ಆಶ್ವಾಸನೆ ಸರ್ಕಾರ ನೀಡಿತ್ತು. ಈಗಲೂ ಸಹ ಹಿಂದುಳಿದ ಆಯೋಗದ ಜಾತಿಗಣತಿ ವರದಿಯಂತೆ ರಾಜ್ಯದಲ್ಲಿ ಮರಾಠಾ ಸಮುದಾಯ ಕಡಿಮೆ ಸಂಖ್ಯೆಯಲ್ಲಿದ್ದು, ಬಹುತೇಕ ಮರಾಠರು ಕೃಷಿ ಕಾರ್ಮಿಕರಾಗಿ ದುಡಿಯುತ್ತಿದ್ದಾರೆ. ರಾಜ್ಯದಲ್ಲಿ 16 ಲಕ್ಷ ಮರಾಠರ ಸಂಖ್ಯೆ ವರದಿ ಪ್ರಕಾರವಿದೆ. ಆದ್ದರಿಂದ ಈ ಸಮುದಾಯವನ್ನು 2ಎ ಗೆ ಸೇರ್ಪಡೆ ಮಾಡಬೇಕೆಂದು ತಿಳಿಸಿದರು.

2012ರಲ್ಲಿ ಪ್ರಸ್ತುತ ಸರ್ಕಾರ ಮರಾಠರ ಸ್ಥಿತಿಗತಿ ದಯನೀಯವಾಗಿದೆ. ಅವರಿಗೆ 2ಎ ಪ್ರವರ್ಗಕ್ಕೆ ಸೇರ್ಪಡೆ ಮಾಡಬೇಕೆಂದು ಹಿಂದುಳಿದ ವರ್ಗಗಳ ಆಯೋಗಕ್ಕೆ ಶಿಫಾರಸ್ಸು ಮಾಡಿತ್ತು. ಅದರ ನಂತರ ಮರಾಠಾ ಸಮುದಾಯ ಹಲವು ಬಾರಿ ಪ್ರತಿಭಟನೆ, ಹೋರಾಟ, ಸರ್ಕಾರಕ್ಕೆ ಮನವಿ ಸಲ್ಲಿಸಿದರೂ ಇಂದಿಗೂ ಜಾರಿಗೆ ಬಂದಿಲ್ಲ. ಕಾಂತರಾಜು ವರದಿ ಬಂದರೂ ಕೂಡಾ ಸರ್ಕಾರ ಹಿಂದೇಟು ಹಾಕುತ್ತಿದೆ. ಆದ್ದರಿಂದ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಕೂಡಲೇ ಮರಾಠಾ ಸಮಾಜವನ್ನು 2ಎ ಗೆ ಸೇರ್ಪಡೆ ಮಾಡಿ ಮರಾಠರಿಗೆ ನ್ಯಾಯ ಒದಗಿಸಿಕೊಡಬೇಕೆಂದು ಕೋರಿದರು.

ಇದೇ ವೇಳೆ ಮರಾಠ ಕ್ರಾಂತಿ ಮೋರ್ಚಾದ ಪ್ರಮುಖರಾದ ಶಿವಾಜಿರಾವ ಪಾಟೀಲ ಮುಂಗನಾಳ,

ಬಾಲಾಜಿ ಬಿರಾದಾರ ಗಣೇಶಪುರ, ವೆಂಕಟ ಚಿದ್ರೆ, ಪ್ರದೀಪ ಬಿರಾದಾರ, ರಂಜೀತ್ ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಇಂದಿನಿಂದ ಬಸವಾದಿ ಶರಣರ ವೈಭವ

# ಸಾಂಸ್ಕೃತಿಕ ವೈಭವಕ್ಕೆ ಕೂಡಲಸಂಗಮ ಸಜ್ಜು : ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.28- ಕೂಡಲಸಂಗಮದಲ್ಲಿ ಎಪ್ರೀಲ್ 29 ಮತ್ತು 30 ರಂದು ಜರುಗುವ ಅನುಭವ ಮಂಟಪ-ಬಸವಾದಿ ಶರಣರ ವೈಭವ ಕಾರ್ಯಕ್ರಮಕ್ಕೆ ಕೂಡಲಸಂಗಮ ಸಕಲ ರೀತಿಯಿಂದ ಸಜ್ಜುಗೊಂಡಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದರು.

ಕೂಡಲಸಂಗಮಕ್ಕೆ ಸೋಮವಾರ ಭೇಟಿ ನೀಡಿದ ಸಂದರ್ಭದಲ್ಲಿ ಸಾಂಸ್ಕೃತಿಕ ವೈಭವ ಕಾರ್ಯಕ್ರಮದ ಸಿದ್ದತೆ ಕುರಿತು ಮಾತನಾಡಿದ ಅವರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾಡಳಿತ ಹಾಗೂ ಕೂಡಲಸಂಗಮ ಅಭಿವೃದ್ಧಿ ಪ್ರಾಧಿಕಾರದ ಸಹಯೋಗದಲ್ಲಿ ವಿಶ್ವಗುರು ಬಸವಣ್ಣನವರ ಜಯಂತಿ ಅಂಗವಾಗಿ ಎರಡು ದಿನಗಳ ಕಾಲ ಸಾಂಸ್ಕೃತಿಕ ವೈಭವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಅನುಭವ ಮಂಟದಲ್ಲಿ ವೇದಿಕೆ ಕಾರ್ಯಕ್ರಮ ಸಜ್ಜುಗೊಳಿಸಲಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ನಡೆಸುವ ನಿಟ್ಟಿನಲ್ಲಿ ಸ್ವಾಗತ ಮತ್ತು ಶಿಷ್ಟಾಚಾರ ಸಮಿತಿ, ಹಣಕಾಸು, ಸಾರಿಗೆ, ವಸತಿ, ಆಹಾರ, ಮೂಲಭೂತ ಸೌಲಭ್ಯ ಹಾಗೂ ಕುಡಿಯುವ ನೀರಿನ ವ್ಯವಸ್ಥೆ, ಆರೋಗ್ಯ ಮತ್ತು ನೈರ್ಮಲೀಕರಣ, ಕಾನೂನು ಸುವ್ಯವಸ್ಥೆ, ವೇದಿಕೆ ಸಮಿತಿ ಸೇರಿದಂತೆ ಒಟ್ಟು 11 ಸಮಿತಿಗಳನ್ನು ರಚಿಸಲಾಗಿದೆ. ವೇದಿಕೆ ಕಾರ್ಯಕ್ರಮ ನಡೆಯುವ ಬಸವ ಮಂಟಪದದ ಹೊರಗಡೆ ಶಾಮಿಯಾನ ಹಾಕಿ ಎಲ್ಇಡಿ ಪರದೆಯ ಮೂಲಕ ಕಾರ್ಯಕ್ರಮ ವೀಕ್ಷಣೆಗೆ ವ್ಯವಸ್ಥೆ ಮಾಡಲಾಗಿದೆ. ಕಾರ್ಯಕ್ರಮದ ವೀಕ್ಷಣೆಗೆ ಬರುವ ಜನರಿಗೆ ದಾಸೋಹ ಭವನದಲ್ಲಿ ಊಟದ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು.

ಎಪ್ರೀಲ್ 29 ರಂದು ಬೆಳಿಗ್ಗೆ 10 ರಿಂದ ಸಂಜೆ 5.30 ವರೆಗೆ ವಚನ ಸಾಹಿತ್ಯ ಸಮಕಾಲಿನ ಸಂವೇದನೆ ಕುರಿತು ವಿಚಾರಗೋಷ್ಠಿ ನಡೆಯಲಿದ್ದು, ವಿಚಾರಗೋಷ್ಠಿಗೆ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಚಾಲನೆ ನೀಡಲಿದ್ದಾರೆ. ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಬಸವಣ್ಣನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಿದ್ದಾರೆ. ಸಂಜೆ ಸಂಗೀತ, ಸಮೂಹ ನೃತ್ಯ, ಭರತನಾಟ್ಯ, ವಚನಗಾಯನ, ನೃತ್ಯ ರೂಪಕ, 3ಡಿ ಬಸವನೃತ್ಯ ಹಾಗೂ ನಾಟಕ ಪ್ರದರ್ಶನಗೊಳ್ಳಲಿವೆ ಎಂದರು.

ಬಸವ ಜಯಂತಿ ಎಪ್ರೀಲ್ 30 ರಂದು ಮುಖ್ಯಮಂತ್ರಿಗಳು ಕಾರ್ಯಕ್ರಮವನ್ನು ಉದ್ಘಾಟಿಸಿ ಬಸವ ರಾಷ್ಟ್ರೀಯ ಪುರಸ್ಕಾರ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಸಂಜೆ ಹಂಸಲೇಖ ತಂಡದಿಂದ ಸಂಗೀತ ಸಂಜೆ ಕಾರ್ಯಕ್ರಮ ಜರುಗಲಿದೆ. ಅಲ್ಲದೇ ಡಾಲಿ ಧನಂಜಯ ಮತ್ತು ಎಂ.ಡಿ.ಪಲ್ಲವಿ ಅವರಿಂದ ಸಂಗೀತ ಕಾರ್ಯಕ್ರಮ ಸಹ ನಡೆಯಲಿದೆ.

ಕಾರ್ಯಕ್ರಮದಲ್ಲಿ ಸಾಹಿತಿಗಳು, ಕಲಾಸಕ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಪ್ರಮಾಣದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿಗಳು ಮನವಿ ಮಾಡಿಕೊಂಡರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಸೇರಿದಂತೆ ವಿವಿಧ ಸಮಿತಿಗಳ ಅಧ್ಯಕ್ಷರು, ಸದಸ್ಯರು ಇದ್ದರು.

# ಬಾಲ್ಯವಿವಾಹ ಮುಕ್ತ ಭಾರತ ಅಭಿಯಾನಕ್ಕೆ ಕೈಜೋಡಿಸಿ; ಶಂಕರ್



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯಲ್ಲಿ ಅಕ್ಷಯ ತೃತೀಯ ಹಾಗೂ ಮದುವೆಗಳು ನಡೆಯುವ ಸಮಯದಲ್ಲಿ ಬಾಲ್ಯ ವಿವಾಹ ತಡೆಯುವ ಉದ್ದೇಶದಿಂದ ವಿವಿಧ ಧರ್ಮಗಳ ಪುರೋಹಿತರ ನಡುವೆ ಜಾಗೃತಿಯ ಅಭಿಯಾನ ನಡೆಸಲಾಗುತ್ತಿದೆ. ದೇಶದಲ್ಲಿ ಬಾಲ್ಯ ವಿವಾಹ ಮುಕ್ತ ಭಾರತ ಮಾಡಲು ಸಾರ್ವಜನಿಕರು ಕೈಜೋಡಿಸಬೇಕು ಎಂದು ಶಂಕರ್ ಮನವಿ ಮಾಡಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ಸ್ಪಂದನ ಸಂಸ್ಥೆಯ ಯೋಜನಾ ಸಂಯೋಜಕ ಶಂಕರ್ ಡಿ ಸುರಳ್ ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ಸ್ಪಂದನ ಸಂಸ್ಥೆಯು ಸುಮಾರು ಕಳೆದ 25 ವರ್ಷದಿಂದ ಮಕ್ಕಳಿಗೆ ಕಾನೂನಿನ ನ್ಯಾಯವನ್ನು ಒದಗಿಸುವಲ್ಲಿ ಹೊಸ ಹೊಸ ವಿಧಾನದ ಮೂಲಕ ನ್ಯಾಯವನ್ನು ಕೊಡಿಸುವಲ್ಲಿ ಕಾರ್ಯ ನಿರ್ವಹಿಸುತ್ತಾ ಬಂದಿದೆ. ದಲಿತರು, ಆದಿವಾಸಿಗಳು, ದಮನಿತರು, ಅಧಿಕಾರಹೀನರು, ಬುಡಕಟ್ಟು ಹಾಗೂ ತಳಮಟ್ಟದ ಸಮುದಾಯಗಳ ಅದರಲ್ಲೂ ಮಹಿಳೆಯರು ಮತ್ತು ಮಕ್ಕಳ ಸುಸ್ಥಿರ ಅಭಿವೃದ್ಧಿಗಾಗಿ ಕೆಲಸ ಮಾಡುತ್ತಾ ಬಂದಿದೆ. ಕಳೆದ ವರ್ಷ 2024 ರಿಂದ 2025 ಮಾರ್ಚ್ ವರೆಗೆ ಬೆಳಗಾವಿ ಮತ್ತು ಕೊಪ್ಪಳ ಜಿಲ್ಲೆಯಲ್ಲಿ Just Rights for children ಮಕ್ಕಳಿಗಾಗಿ ನ್ಯಾಯದ ಪ್ರವೇಶ ಎಂಬ ಕಾರ್ಯಕ್ರಮದ ಮೂಲಕ ಬಾಲ್ಯ ವಿವಾಹ ಮತ್ತು ಬಾಲ ಕಾರ್ಮಿಕರು ಮಾನವ ಕಳ್ಳ ಸಾಗಾಣಿಕೆ ತಡೆಗಟ್ಟುವಲ್ಲಿ ವ್ಯಾಪಕ ಅರಿವು ಮತ್ತು ಕಾನೂನು ಹಸ್ತಕ್ಷೇಪದ ಮೂಲಕ ಕಾರ್ಯನಿಹಿಸುತ್ತಾ ಬಾಲ್ಯ ವಿವಾಹವನ್ನು ತಡೆಯಲು ನೇರವಾಗಿ ಕಾನೂನಿನ ಒಳಗೆ ಇಳಿದು ಇಲಾಖೆಗಳ ಜೊತೆಗೆ ಕೈಜೋಡಿಸಿ ಕೆಲಸ ಮಾಡುತ್ತಿದೆ. ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ, ಪಂಚಾಯತ್ ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಕಂದಾಯ ಇಲಾಖೆ, ನಗರ ಹಾಗೂ ಪುರಸಭೆ ಸಹಯೋಗದೊಂದಿಗೆ ಮಕ್ಕಳ ರಕ್ಷಣೆ ಒಳಪಡುವ ಅಧಿಕಾರಿಗಳು ಮತ್ತು ಬಾಲ್ಯ ವಿವಾಹ ನಿಷೇಧ ಅಧಿಕಾರಿಗಳನ್ನು ಒಳಗೊಂಡು ಕಾರ್ಯ ನಿರ್ವಹಿಸುತ್ತದೆ. ಇಲ್ಲಿಯವರೆಗೆ ಸುಮಾರು 6000 ಜನರಿಗೆ ಬಾಲ್ಯ ವಿವಾಹ ತಡೆಗಟ್ಟುವಲ್ಲಿ ಪ್ರತಿಜ್ಞೆ ಮಾಡಿಸಲಾಗಿದೆ ಮತ್ತು ಶಾಲೆ ಕಾಲೇಜು ಸಮುದಾಯದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳ ಬೆಂಬಲದೊಂದಿಗೆ ಬಾಲ್ಯ ವಿವಾಹ ಮುಕ್ತ ಭಾರತ ಅಭಿಯಾನವನ್ನು ಕೊಪ್ಪಳ ಜಿಲ್ಲೆಯಲ್ಲಿ ಯಶಸ್ವಿಯಾಗಿ ನಡೆಸಲಾಗಿದೆ. ಸಂಪೂರ್ಣ ಬಾಲ್ಯವಿವಾಹ ಮುಕ್ತ ಭಾರತ ಮಾಡಲು ಸಾರ್ವಜನಿಕರು ನಮ್ಮೊಂದಿಗೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು. ನಂತರ ಸ್ಪಂದನ ಸಂಸ್ಥೆಯ ಸಹಾಯಕಿ ಸಲ್ಮಾ ಮಾತನಾಡಿ, ಬಾಲ್ಯದಲ್ಲಿಯೇ ಮದುವೆ ಮಾಡಿದರೆ ಅಂತ ಬಾಲಕಿಯರ ಆರೋಗ್ಯ ಮೇಲೆ ದುಷ್ಪರಿಣಾಮ ಉಂಟಾಗುತ್ತದೆ. ಬಾಲಕಿಯರಿಗೆ ಸಂಪೂರ್ಣ 18 ವರ್ಷ ಪೂರೈಸಿದ ಮೇಲೆ ಪೋಷಕರು ಮದುವೆ ಮಾಡಬೇಕು. ಕೊಪ್ಪಳ ಜಿಲ್ಲೆಯಲ್ಲಿ ನಡೆಯುವ ಸಾಮೂಹಿಕ ಮದುವೆಗಳು ಹಾಗೂ ಜಾತ್ರೆಗಳಲ್ಲಿ ಬಾಲ್ಯ ವಿವಾಹ ಮುಕ್ತ ಭಾರತದ ಅಭಿಯಾನ ಕಾರ್ಯಕ್ರಮ ಮಾಡುವ ಮೂಲಕ ಜಾಗೃತಿಯನ್ನು ಮೂಡಿಸಲಾಗುತ್ತದೆ. ನಾವೆಲ್ಲರೂ ನಮ್ಮ ದೇಶದಲ್ಲಿ ಬಾಲ್ಯ ವಿವಾಹ ಮುಕ್ತ ಭಾರತವನ್ನ ನಿರ್ಮಾಣ ಮಾಡಬೇಕಾದರೆ ಎಲ್ಲಾ ಸಾರ್ವಜನಿಕರು ಸ್ಪಂದನ ಸಂಸ್ಥೆಗೆ ಕೈಜೋಡಿಸುವ ಮೂಲಕ ಬಾಲ್ಯ ವಿವಾಹ ತಡೆಗೋಟ್ಟೋಣ ಎಂದರು.

ಅದ್ದೂರಿಯಾಗಿ ಜರುಗಿದ ರೇವಣಸಿದ್ದೇಶ್ವರ ರಥೋತ್ಸವ

# ಸರ್ವರಿಗೂ ಒಳ್ಳೆಯದಾಗಲಿ ಎಂದು ಸಂಕಲ್ಪ ಮಾಡಿ:- ಶರಣ ಶಂಕರಲಿಂಗ ಮಹಾರಾಜರು



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ತಾಲೂಕಿನ ಕೋಡಂಬಲ್ ಮತ್ತು ಮುದ್ನಾಳ ಗ್ರಾಮದ ಮಧ್ಯ ಭಾಗದಲ್ಲಿರುವ ಶ್ರೀ ರೇವಣಸಿದ್ದೇಶ್ವರರ ನೂತನ ರಥೋತ್ಸವಕ್ಕೆ ಬಾಲಯೋಗಿ ಅಭಿನವ ಶರಣ ಶಂಕರಲಿಂಗ ಮಹಾರಾಜರು, ಡಾ. ಹವಾ ಮಲ್ಲಿನಾಥ ಮಹಾರಾಜರು, ಸಿದ್ದಾನಂದ ಶಿವಯೋಗಿಗಳು, ಡಾ. ವೀರ ಪ್ರಭು ಪಂಡಿತ್ಯಚಾರ್ಯ ಶಿವಾಚಾರ್ಯರು, ಪ್ರಯಾಗರಾಜನ ನಾಗಾ ಸಾಧುಗಳು, ಚಾಲನೆ ನೀಡಿದರು. ನಂತರ ಸೊಂತ ಆಶ್ರಮದ ಪೂಜ್ಯ ಬಾಲಯೋಗಿ ಅಭಿನವ ಶರಣ ಶಂಕರಲಿಂಗ ಮಹಾರಾಜರು ಮಾತನಾಡಿ, ಸರ್ವರಿಗೂ ಒಳ್ಳೆಯದಾಗಲಿ ಎಂದು ಪ್ರತಿಯೊಬ್ಬರು ಸಂಕಲ್ಪ ಮಾಡಬೇಕು ಎಂದು ಆಶೀರ್ವಚನ ನೀಡಿದರು. ಈ ಸಂದರ್ಭದಲ್ಲಿ ಡಾ. ಹವಾ ಮಲ್ಲಿನಾಥ ಮಹಾರಾಜರು, ಡಾ. ಪಾಂಡಿತ್ಯ ಪ್ರಯಾಗರಾಜ್ ನಾಗಾ ಸಾಧುಗಳು, ಅಮೃತ ರೆಡ್ಡಿ, ಡಾ. ಶ್ರೀನಿವಾಸ ರೆಡ್ಡಿ, ಗೋಪಾಲ್ ರೆಡ್ಡಿ, ಕೃಷ್ಣರೆಡ್ಡಿ, ಮಹಮ್ಮದ್ ಅಸ್ಲಾಂಮಿಯಾ ಸೇರಿದಂತೆ ಅಪಾರ ಭಕ್ತಾಧಿಗಳು ಪಾಲ್ಗೊಂಡು ದೇವರ ದರ್ಶನ ಪಡೆದರು. ಮುತ್ತೈದಿಯರಿಗೆ ಊಡಿ ತುಂಬುವ ಕಾರ್ಯಕ್ರಮ ಜರುಗಿತ್ತು.

# ಅಖಂಡ ಹರಿನಾಮ ಸಪ್ತಾಹ.



ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ :- ಏ 28 ತಾಲೂಕಿನ ಸೈದಾಪೂರ ಗ್ರಾಮದಲ್ಲಿ ಅಖಂಡ ಹರಿನಾಮ ಸಪ್ತಾಹ ನಿಮಿತ್ಯ ಜರುಗಿದ ಕಾಲಾ ಕಾರ್ಯಕ್ರಮಕ್ಕೆ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ತಮ್ಮ ಅಮೃತ ಹಸ್ತದಿಂದ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ದಗಡು ಬಿರಾದಾರ, ಅಪ್ಪಣ್ಣ ಜನವಾಡ, ಪಾಂಡುರಂಗ ಬಿರಾದಾರ ಗ್ರಾಮದ ಪ್ರಮುಖರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಆದಿತ್ಯ ಎ. ಹಡಪದ ಜನ್ಮದಿನ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪತ್ರಕರ್ತ ರಾಜಕುಮಾರ ಆರ್. ಹಡಪದ ಅವರ ಸೊಹೋದರ ಸುಪುತ್ರ ಕು. ಆದಿತ್ಯ ಎ. ಹಡಪದ ಇವರ 10ನೇ ವರ್ಷದ ಹುಟ್ಟು ಹಬ್ಬ ಕೇಕ್ ಕತ್ತರಿಸುವ ಮೂಲಕ ಆಚರಣೆ ಮಾಡಿದರು.

ಆದಿತ್ಯನಿಗೆ ಸತತ ಪ್ರಯತ್ನಪಟ್ಟು, ಉತ್ತಮವಾಗಿ ಅಭ್ಯಾಸ ಮಾಡಿ, ಸ್ಪರ್ಧಾತ್ಮಕ ಯುಗದಲ್ಲಿ ಮುಂದೆ ಬರಬೇಕು. ನಾನು ಮಾಡುತ್ತೇನೆ, ನಾನು ಗೆಲ್ಲತ್ತೇನೆ ಎನ್ನುವ ಆತ್ಮವಿಶ್ವಾಸ ಇರಬೇಕು. ಆತ್ಮವಿಶ್ವಾಸ ಅಲಗಾಡಿಸುತ್ತದೆ. ಹಾಗಾಗಿ, ಆತ್ಮವಿಶ್ವಾಸದಿಂದ ಅಭ್ಯಾಸ ಮಾಡಿ ಯಶಸ್ಸು ಕಂಡುಕೊಳ್ಳಬೇಕು ಎಂದು ತಿಳಿ ಹೇಳಿದರು. ಅವರಿಗೆ ಸುಖ, ಶಾಂತಿ, ನೆಮ್ಮದಿ, ಅಯುಷ್ಯ, ಆರೋಗ್ಯ, ಭಾಗ್ಯ ಮತ್ತು ಒಳ್ಳೆಯ ಶಿಕ್ಷಣ ಪಡೆದು ಉನ್ನತ ಸ್ಥಾನಕ್ಕೆರಲ್ಲಿ ಎಂದು ಅವರ ಅಜ್ಜಿ ನಾಗಮ್ಮ ಹಡಪದ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ರಾಜಕುಮಾರ ಆರ್. ಹಡಪದ, ಅಭಿಷೇಕ ಎಚ್. ಹಡಪದ, ನವೀನ್ ಹಡಪದ, ಆಯುಷ್ ಎ. ಹಡಪದ, ಅಭಿಷೇಕ ಹಡಪದ ಸಸ್ತಾಪೂರ್, ಸೇರಿದಂತೆ ಪರಿವಾರದವರು ಮತ್ತು ಸ್ನೇಹಿತರು ಶುಭ ಕೋರಿದರು.

# ಎಂಸಿಎನ್ ರಾಮು ನಿಧನ

ಮಲ್ಲಮ್ಮ ನುಡಿ ವಾರ್ತೆ



ಬಳ್ಳಾರಿ: ನಗರದ ವಿನಾಯಕ ಸೆಟಲೈಟ್ಸ್ ಸರ್ವೀಸಸ್ ನ ಪಾಲುದಾರರಾದ ಎಂಸಿ ಎನ್ ರಾಮು ಎಂದೆ ಕರೆಯಲ್ಪಡುತ್ತಿದ್ದ ಡಿ.ರಾಮ ಮಹೋನಗೌಡ್ ಅವರು ಸೋಮವಾರ ಬೆಳಿಗ್ಗೆ 6 ಗಂಟೆಗೆ ಬೆಂಗಳೂರಿನಲ್ಲಿ ದೈವಾಧೀನರಾಗಿದ್ದಾರೆ.

ಮೃತರಿಗೆ 52 ವರ್ಷಗಳಾಗಿತ್ತು. ಇಲ್ಲಿನ ಪಟೇಲ ನಗರದ ಸಣ್ಣ ದುರ್ಗಮ್ಮ ದೇವಸ್ಥಾನ ಟ್ರಸ್ಟ್ ನ ಖಜಾಂಚಿಯಾಗಿದ್ದರು. ಪತ್ನಿ ಸಂಗೀತ, ಪುತ್ರ ಹಸನ್ಮುಖ್, ಪುತ್ರಿ ಸಹನಶ್ರೀ ಮತ್ತು ಅಪಾರ ಸ್ನೇಹಿತರನ್ನು ಅಗಲಿದ್ದಾರೆ.

ಇಂದು ಸಂಜೆ ಮೃತದೇಹ ಬಳ್ಳಾರಿಯ ಅವರ ನಿವಾಸಕ್ಕೆ ಬರಲಿದೆ. ಇಂದು ಬೆಳಿಗ್ಗೆ 10 ಕ್ಕೆ ವರಬಸಪ್ಪನಗುಡಿ ಬಳಿ ಇರುವ ಹರಿಶ್ಚಂದ್ರ ಘಾಟ್ ನಲ್ಲಿ ಅಂತ್ಯಕ್ರಿಯೆ ನಡೆಯಲಿದೆಂದು ಕುಟುಂದ ಮೂಲಗಳು ತಿಳಿಸಿವೆ.

# ಸೃಜನಶೀಲ ಕಟ್ಟುವಿಕೆಯಿಂದ ಲೋಕದ ಕ್ರೀಯಾಶೀಲತೆ : ಬಿರಾದಾರ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: - ಏ 28 ಸಮಾಜದ ಹಾಗೂ ಲೋಕದ ಕ್ರೀಯಾಶೀಲತೆ ಸೃಜನಶೀಲ ಕೆಲಸಗಳ ಕಟ್ಟುವಿಕೆಯಲ್ಲಿ ಅಡಗಿದೆ. ಏಕಾಂತವೂ ಲೋಕಾಂತದ ಅರಿವಿಗೆ ದಾರಿಯಾಗಿದೆ ಎಂದು ಶ್ರೀ ಬಸವೇಶ್ವರ ಪದವಿ ಕಾಲೇಜು ಅಧ್ಯಾಪಕ ಡಾ. ಭೀಮಾಶಂಕರ ಬಿರಾದಾರ ಹೇಳಿದರು.

ನಗರದ ಬೀದರ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಎಸ್.ಎಸ್ ಕೆಬಿ ಪದವಿ, ದೊಡ್ಡಪ್ಪ ಅಪ್ಪ ಬಿಸಿಎ ಕಾಲೇಜು ವತಿಯಿಂದ ಎಸ್. ಎಸ್ ಕೆಬಿ ಕಾಲೇಜಿನಲ್ಲಿ ನಡೆದ ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ವಿಶೇಷ ಶಿಬಿರದಲ್ಲಿ ಭಾರತ ನಿರ್ಮಾಣದಲ್ಲಿ ಯುವಕರ ಪಾತ್ರ ಕುರಿತು ಮಾತನಾಡಿದ ಅವರು, ಮೊಬೈಲ್ ಗೇಮಿಂಗ್ ನಂಥ ಆಧುನಿಕತೆ ಸೃಷ್ಟಿಸಿದ ಮೌಢ್ಯಗಳಿಗೆ ಯುವ ಜನತೆ ಬಲಿಯಾಗದಿರಲಿ ಎಂದರು.

ನಮ್ಮ ಓದು ಅಧ್ಯಯನಗಳು ನಮ್ಮೊಳಗೆ ಸೂಕ್ಷ್ಮತೆ ಬೆಳೆಸುತ್ತವೆ. ಆತ್ಮವಿಶ್ವಾಸ ಮೂಡಿಸುತ್ತವೆ. ಸ್ವವಿಮರ್ಶೆ ಹಾಗೂ ಲೋಕ ವಿಮರ್ಶೆಯ ಗುಣ ಸೃಷ್ಟಿಸುತ್ತವೆ. ಸಾಮಾಜಿಕ ಜಾಲತಾಣ, ಮೊಬೈಲ್ ಗೇಮಿಂಗ್ ಗೀಳು ರೋಗ-ಕ್ಕೆ, ಖಿನ್ನತೆ ಉಂಟುಮಾಡಿ ಆತ್ಮಹತ್ಯೆಗೆ ಕಾರಣವಾಗಿವೆ. ಯುವ ಸಮುದಾಯ ನಿತ್ಯ ಕ್ರೀಯಾಶೀಲರಾಗಿರುವ ದಾರಿ ಕಂಡುಕೊಳ್ಳಬೇಕು ಎಂದರು.

ಬುದ್ಧ, ವಚನಕಾರರು, ಸಾಹಿತಿಗಳು ಈ ದೇಶವನ್ನು ವೈಚಾರಿಕವಾಗಿ ಕಟ್ಟಿದ್ದಾರೆ. ಗಾಂಧಿ, ವಿವೇಕಾನಂದರು, ಅಂಬೇಡ್ಕರ್, ಲೋಹಿಯಾ ಮೊದಲಾದವರು ಜಾತ್ಯತೀತ ಮತ್ತು ಪ್ರಜಾಪ್ರಭುತ್ವದ ನಾಡು ಕಟ್ಟಿದ್ದಾರೆ. ಹಲವಾರು ವಿಜ್ಞಾನಿಗಳು ವೈಜ್ಞಾನಿಕವಾಗಿ ವಿಶ್ವವನ್ನು ಕಟ್ಟಿಕೊಟ್ಟಿದ್ದಾರೆ ಈ ಎಲ್ಲವನ್ನೂ ಅರಿಯುವ ವ್ಯವಧಾನ ಮತ್ತು ಸಹನೆ ಯುವಶಕ್ತಿಯಲ್ಲಿ ಇರಬೇಕು ಎಂದರು.

ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಕೊರಾಳೆ ಮಾತನಾಡಿ, ಆಡಳಿತಾತ್ಮಕ ಹಾಗೂ ಸ್ಪರ್ಧಾತ್ಮಕ ಪರೀಕ್ಷೆ ಬರೆಯಲು ಯುವ ಸಮುದಾಯ ಸಿದ್ಧತೆ ನಡೆಸಬೇಕು. ಯುಪಿಎಸ್ಸಿ ಹಾಗೂ ಕೆಎಎಸ್ ಪರೀಕ್ಷೆ ಹೆಚ್ಚಾಗಿ ಬರೆಯುವುದು ಬಿಎ, ಬಿಎಸ್ಸಿ, ಬಿಕಾಂ ಪದವಿ ವಿದ್ಯಾರ್ಥಿಗಳು. ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗದ ವಿದ್ಯಾರ್ಥಿಗಳು ಕೀಳರಿಮೆ ಬಿಟ್ಟರೆ ಯಶಸ್ಸು ಸಾಧ್ಯ ಎಂದರು.

ಜೇನು ಹುಳುಗಳು ಇರದಿದ್ದರೆ ಮನುಷ್ಯನ ವಿನಾಶವಾಗುತ್ತದೆ. ಹೆಜ್ಜೇನು ಕಚ್ಚಿದರೆ ಹೃದಯ ಸ್ತಂಭನ ನಿಂತು ಸಾವು ಸಂಭವಿಸುತ್ತದೆ. ಜೇನು ಹುಳುಗಳ ಹಲವು ವಿಧ ಎಂದು ಜೇನು ಸಾಕಾಣಿಕೆ ಬಗ್ಗೆ ಮಾಹಿತಿ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಕಲ್ಯಾಣಪ್ಪಾ ನಾವದಗಿ ಮಾತನಾಡಿ, ತಂತ್ರಜ್ಞಾನದ ದುರುಪಯೋಗ ದೇಶಕ್ಕೆ ಅಪಾಯ ತರುತ್ತದೆ. ಅದರ ಸದ್ಬಳಕೆಗೆ ಯುವ ಸಮುದಾಯ ಕಾಳಜಿ ತೋರಬೇಕು. ಸಮಾಜಕ್ಕೆ ಒಳ್ಳೆಯದನ್ನು ಮಾಡುವ ಮೂಲಕ ಯುವಕರು ದೇಶದ ಭವಿಷ್ಯ ರೂಪಿಸಬೇಕು ಎಂದರು.

ಎಸ್.ಎಸ್ ಕೆಬಿ ಕಾಲೇಜು ಪ್ರಾಚಾರ್ಯ ಡಾ. ಬಸವರಾಜ ಎವಲೆ, ದೊಡ್ಡಪ್ಪ ಅಪ್ಪ ಬಿಸಿಎ ಕಾಲೇಜು ಪ್ರಾಚಾರ್ಯ ಲೋಕೇಶ ಮನ್ನಾಳೆ

ಎನ್ನೆಸ್ಸೆಸ್ ಅಧಿಕಾರಿಗಳಾದ ಡಾ. ಸುರೇಶ ಎಚ್. ಆರ್, ಮಹಾದೇವ ದೇಗಾಂವ್, ಶಾಂತಕುಮಾರ ಭೂರೆ, ಪ್ರಾಧ್ಯಾಪಕರಾದ ಪ್ರೊ. ವಿಠೋಬಾ ಡೊಣ್ಣೇಗೌಡರು, ಡಾ. ರಮೇಶ ಕೆ. ಬಿ, ಭೀಮಾಶಂಕರ ಪೂಜಾರಿ, ವಿನಾಯಕ ಮುಳ್ಳೂರು, ಶಿಲ್ಪಾರಾಣಿ ಮಠಪತಿ ಸೇರಿದಂತೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಅಶ್ವಿನಿ ನಾಗರಾಳೆ ಅತಿಥಿ ಪರಿಚಯ ಮಾಡಿದರು.

ಪ್ರೀತಿ ಪವಾರ್ ಸ್ವಾಗತಿಸಿದರು. ಜ್ಯೋತಿ ಪೂಜಾರಿ ನಿರೂಪಿಸಿದರು. ರಾಮಲಿಂಗ ವಂದಿಸಿದರು.

ಮೇ.4 ರಂದು ನೀಟ್ (ಯುಜಿ) ಪರೀಕ್ಷೆ ನಿಗಧಿ:

# ಪರೀಕ್ಷೆಯನ್ನು ಸುವ್ಯವಸ್ಥಿತವಾಗಿ ನಡೆಸಲು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸೂಚನೆ.



ಮಲ್ಲಮ್ಮ ನುಡಿ ವಾರ್ತೆ

ಬೀದರ:ಏಪ್ರಿಲ್.28:-ವೈದ್ಯಕೀಯ, ದಂತವೈದ್ಯಕೀಯ ಕೋರ್ಸುಗಳಿಗೆ ಹೋಗಬಯಸುವವರಿಗೆ ನೀಟ್ (ಯುಜಿ) ಪರೀಕ್ಷೆ ಮೇ.4 ರಂದು ನಿಗದಿಪಡಿಸಲಾಗಿದ್ದು, ಜಿಲ್ಲೆಯಲ್ಲಿ ನಡೆಯುವ ನೀಟ್ (ಯುಜಿ) ಪರೀಕ್ಷೆಯನ್ನು ಅತ್ಯಂತ ಸುವ್ಯವಸ್ಥಿತವಾಗಿ ನಡೆಸಬೇಕೆಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಸೂಚನೆ ನೀಡಿದರು.

ಅವರು ಸೋಮವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ನೀಟ್ (ಯುಜಿ) ಪರಿಕ್ಷಾ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಬೀದರ ಜಿಲ್ಲೆಯಲ್ಲಿ ಒಟ್ಟು 24 ಪರೀಕ್ಷಾ ಕೇಂದ್ರಗಳಿದ್ದು, ಒಟ್ಟು 7653 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಈ ಪರೀಕ್ಷೆಯನ್ನು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಒಖಿಂ) ಆಯೋಜಿಸಿದೆ. ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲೂ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ಹಾಗೂ ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಮುಂಜಾಗ್ರತಾ ಕ್ರಮವಾಗಿ ನಿಷೇಧಾಜ್ಞೆ ಜಾರಿಗೊಳಿಸಲಾಗುವುದು ಹಾಗೂ ಪರೀಕ್ಷಾ ಕೇಂದ್ರದ 200 ಮೀಟರ್ ವ್ಯಾಪ್ತಿಯಲ್ಲಿ ಸ್ಕ್ಯಾನಿಂಗ್, ಜೆರಾಕ್ಸ್, ಕಂಪ್ಯೂಟರ್ ಅಂಗಡಿಗಳನ್ನು ಪರೀಕ್ಷಾ ಸಮಯದಲ್ಲಿ ಬಂದ್ ಇಡುವುದು ಮತ್ತು ಪರೀಕ್ಷಾ ಸಮಯದಲ್ಲಿ ಪರೀಕ್ಷಾ ಕೇಂದ್ರದಲ್ಲಿ ಪತ್ರಿಕೆ ಮತ್ತು ಮಾಧ್ಯಮಗಳ ಪ್ರವೇಶ ನಿಬರ್ಂಧಿಸಲಾಗುವುದು. ಪರೀಕ್ಷಾ ಕೇಂದ್ರಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ಪರೀಕ್ಷಾ ಕೊಠಡಿ ಸ್ವಚ್ಛತೆಯಿಂದ ಇರಿಸುವುದು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗೆ ಯಾವುದೇ ತೆ-ಯಾಂದರೆ ಆಗದಂತೆ ನೋಡಿಕೊಳ್ಳಬೇಕು. ಕೆಎಸ್ಆರ್ಟಿಸಿ ಕಡೆಯಿಂದ ವಿಶೇಷ ಬಸ್ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ತಿಳಿಸಿದರು. ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ, ಡಿ.ವಾಯ್.ಎಸ್.ಪಿ. ಶಿವನಗೊಡ ಪಾಟೀಲ್, ಬೀದರ ವಿಶ್ವವಿದ್ಯಾಲಯದ ಕುಲಸಚಿವರಾದ ಸುರೇಖಾ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಚಂದ್ರಕಾಂತ ಶಹಾಬಾದಕರ್, ನೀಟ್ ಸಿಟಿ ಸಂಯೋಜಕರಾದ ಮಂಜುನಾಥ ಮಠಪತಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಿಂದೋಲ್ ನಲ್ಲಿ ರಾಚೋಟೇಶ್ವರ ಶಿವಾಚಾರ್ಯರ ಪುಣ್ಯ ಸ್ಮರಣೋತ್ಸವ ನಾಳೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 28 : ಈ ತಿಂಗಳ 29ರಂದು ತಾಲೂಕಿನ ಸಿಂದೋಲ್ ಗ್ರಾಮದಲ್ಲಿ ಅಲ್ಲಿಯ ಹಿರೇಮಠ ಸಂಸ್ಥಾನದ ಆವರಣದಲ್ಲಿ ಪೂಜ್ಯ ಷ.ಬ್ರ ರಚೋಟೇಶ್ವರ ಶಿವಾಚಾರ್ಯರ ಪುಣ್ಯಸ್ಮರಣೋತ್ಸವ ಹಾಗೂ ಮಾತೋಃ ಶ್ರೀ ರತ್ನಮ್ಮ ತಾಯಿಯವರ ತುಲಾಭಾರ ಕಾರ್ಯಕ್ರಮ ಜರುಗಲಿದೆ.



ಓಂ ಶಿವಶಕ್ತಿ ಸತ್ಸಂಗ ಬಳಗ ಕೇಂದ್ರ ಸಮಿತಿ ವತಿಯಿಂದ ಆಯೋಜಿಸಲಾದ ಈ ಕಾರ್ಯಕ್ರಮದಲ್ಲಿ ಅಂದು ಬೆಳಿಗ್ಗೆ 8 ಗಂಟೆಯಿಂದ ಸಂಗೀತ, ರುದ್ರಾಭಿಷೇಕ ಹಾಗೂ ಸರ್ವ ಶರಣರ ಸ್ಮರಣೋತ್ಸವ ಜೊತೆಗೆ ಭಜನೆ ಹಾಗೂ ಧಾರ್ಮಿಕ ಸಮಾರಂಭ ಜರುಗಲಿದೆ. ನಂತರ ಬೆಳಿಗ್ಗೆ 10.35 ಗಂಟೆಗೆ ವೇದಿಕೆ ಕಾರ್ಯಕ್ರಮ ಜರುಗಲಿದೆ.

ಸಮಾರಂಭದ ದಿವ್ಯ ಸಾನಿಧ್ಯವನ್ನು ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲೂಕಿನ ಗುಂಡಗುರ್ತಿಯ ಶ್ರೀ ರೇವಣಸಿದ್ದೇಶ್ವರ ಮಠದ ಪೂಜ್ಯ ಷ.ಬ್ರ ಸದ್ಯೋಜಾತ ಶಿವಾಚಾರ್ಯರು ವಹಿಸಲಿದ್ದು, ಲಾಡಗೇರಿಯ ವೇದಮೂರ್ತಿ ಶಿವಶಂಕರಯ್ಯಸ್ವಾಮಿ ಹಾಗೂ ವೀರಭದ್ರಪ್ಪ ಶರಣರು ಸಮ್ಮುಖ ವಹಿಸುವರು. ಬೀದರ್ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಕಾರ್ಯಕ್ರಮ ಉದ್ಘಾಟಿಸಲಿದ್ದು, ಭಂಗೂರಿನ ಸೋಮಯ್ಯಸ್ವಾಮಿ ಹಿರೇಮಠ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಭಾರತೀಯ ಜನತಾ ಪಕ್ಷದ ಬೀದರ್ ದಕ್ಷಿಣ ಮಂಡಲದ ಅಧ್ಯಕ್ಷ ಗುರುನಾಥ ರಾಜಗೀರಾ, ಕಾರ್ಯದರ್ಶಿ ಚಂದ್ರಯ್ಯಸ್ವಾಮಿ, ಮನ್ನಾಯಿಖೆಳ್ಳಿಯ ಹಿರಿಯ ಪಶು ವೈದ್ಯಾಧಿಕಾರಿ ಡಾ ವಿ ಎಸ್ ಕೋರಿ, ಸಂಗಪ್ಪ ಬಳತೆ ಹಿಪ್ಪಳಗಾಂವ ಭಾಗವಹಿಸುವರು. ಖ್ಯಾತ ಸಾಹಿತಿಗಳು ಹಾಗೂ ಆಕಾಶವಾಣಿ ದೂರದರ್ಶನ ಕಲಾವಿದರಾದ ಮಾಣಿಕ್ ನೇಳಗಿ, ಖ್ಯಾತ ನ್ಯಾಯವಾದಿ ವಿಜಯರೆಡ್ಡಿ, ಅಖಿಲ ಭಾರತ ವೀರಶೈವ ಮಹಾಸಭೆಯ ರಾಜ್ಯ ಕಾರ್ಯಕಾರಿಣಿ ಸದಸ್ಯೆ ಕೋಕಿಲಾ ಮಹದೇವಪ್ಪ ಬಿರಾದಾರ ಅನುಭಾವ ನಿವೇದಿಸುವರು. ಓಂ ಶಿವಶಕ್ತಿ ಸತ್ಸಂಗ ಬಳಗ ಹಾಗೂ ಬೀದರನ ಖ್ಯಾತ ಸಂಗೀತ ಕಲಾವಿದರಿಂದ ಸಂಗೀತ ದರ್ಬಾರ ಕಾರ್ಯಕ್ರಮ ಜರುಗಲಿದೆ. ಹಾಗೆ ಅವರಿಗೆ ವಿಶೇಷ ಸನ್ಮಾನ ಸಹ ಈ ಸಂದರ್ಭದಲ್ಲಿ ಜರುಗುವುದು. ಓಂ ಶಿವಶಕ್ತಿ ಸತ್ಸಂಗ ಬಳಗದ ಅಧ್ಯಕ್ಷರಾದ ಸಿದ್ರಾಮಯ್ಯ ಸ್ವಾಮಿ ಹಿರೇಮಠ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡುವರು. ವಿರುಪಾಕ್ಷದೇವರು ಕಾರ್ಯಕ್ರಮ ನಿರೂಪಿಸುವರು. ನಿವೃತ್ತ ಎ ಎಸ್ ಐ ಕಲ್ಲಪ್ಪ ಮಡಿವಾಳ ವಂದಿಸುವರು. ಆದ ಕಾರಣ ಈ ಸುಂದರ ಧಾರ್ಮಿಕ ಕಾರ್ಯಕ್ರಮದಲ್ಲಿ ಸ್ಥಳೀಯ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಓಂ ಶಿವಶಕ್ತಿ ಸತ್ಸಂಗ ಬಳಗದ ಕೇಂದ್ರ ಸಮಿತಿಯ ಅಧ್ಯಕ್ಷರಾದ ಸಿದ್ರಾಮಯ್ಯಸ್ವಾಮಿ ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಸವಣ್ಣನವರ ೮೯೨ನೇ ಜಯಂತ್ಯೋತ್ಸವ ಅರ್ಥಪೂರ್ಣ ಆಚರಣೆ: ಜೈರಾಜ ಖಂಡ್ರೆ

ಬೀದರ. ಏ. 28: ನಾಳೆ ಹಾಗೂ ಏ.30ರಂದು ನಗರದಲ್ಲಿ ವಿಶ್ವಗುರು ಬಸವಣ್ಣನವರ 892ನೇ ಜಯಂತ್ಯೋತ್ಸವ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಬಸವ ಜಯಂತಿ ಉತ್ಸವ ಸಮಿತಿ ಅಧ್ಯಕ್ಷ ಜೈರಾಜ ಖಂಡ್ರೆ ಹೇಳಿದರು. ಭಾನುವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ನಾಳೆ ಮಂಗಳವಾರ ಬೆಳಗ್ಗೆ 6 ಗಂಟೆಗೆ ಶರಣ ಉದ್ಯಾನದಲ್ಲಿ ಡಾ.ಗಂಗಾಂಬಿಕೆ ಅಕ್ಕನವರ ಸಾನಿಧ್ಯದಲ್ಲಿ ವಚನ ಪಾರಾಯಣ ಜರುಗುವುದು. ವಿಜಯಲಕ್ಷ್ಮಿ ಕೌಟಗೆ ಅಧ್ಯಕ್ಷತೆ ವಹಿಸಲಿದ್ದು, ಸಪ್ನಾ ಚಂದ್ರಶೇಖರ ಪಾಟೀಲ ಗಾದಗಿ, ಡಾ.ದೇವಕಿ ನಾಗೂರೆ, ಶೀಲಾ ಸೋಮಶೇಖರ ಪಾಟೀಲ ಗಾದಗಿ, ಸುವರ್ಣಾ ಧನ್ನೂರ್, ಭಾರತಿ ವಸ್ತ್ರದ್ ಹಾಗೂ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.



ನಂತರ ವೈಜಿನಾಥ ಸಜ್ಜನಶೆಟ್ಟಿ ಹಾಗೂ ಸಂಗಡಿಗರಿಂದ ವಚನ ಸಂಗೀತ ಕಾರ್ಯಕ್ರಮ ಜರುಗಲಿದೆ.

ನಾಳೆ ಮಂಗಳವಾರ ಸಂಜೆ 6 ಗಂಟೆಗೆ ಡಾ.ಚನ್ನಬಸವ ಪಟ್ಟದ್ದೇವರ ರಂಗಮಂದಿರದಲ್ಲಿ ವಚನ ಸಂಗೀತ ಕಾರ್ಯಕ್ರಮ ಜರುಗುವುದು. ಕಾರ್ಯಕ್ರಮದ ಸಾನಿಧ್ಯವನ್ನು ಪೂಜ್ಯ ಗುರುಬಸವ ಪಟ್ಟದ್ದೇವರು ವಹಿಸಲಿದ್ದು, ಪೂಜ್ಯ ಸಿದ್ರಾಮೇಶ್ವರ ಸ್ವಾಮಿಗಳು, ಪೂಜ್ಯ ಸಿದ್ಧರಾಮ ಶರಣರು ಬೆಲ್ದಾಳ, ಪೂಜ್ಯ ಜ್ಯೋತಿರ್ಮಯಾನಂದ ಸ್ವಾಮಿಜಿ, ಮಾತೆ ಮೈತ್ರಾದೇವಿ ತಾಯಿಯವರು ಸಮ್ಮುಖ ವಹಿಸಲಿದ್ದು, ಬಸವರಾಜ ಬುಳ್ಳಾ ಸಮಾರಂಭ ಉದ್ಘಾಟಿಸುವರು. ಬಸವರಾಜ ಧನ್ನೂರ್, ಮಡಿವಾಳಪ್ಪ ಮಂಗಲಗಿ, ಚಂದ್ರಶೇಖರ ಹೆಬ್ಬಾಳೆ, ಆನಂದ ದೇವಪ್ಪ ಹಾಗೂ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಈ ಸಂದರ್ಭದಲ್ಲಿ ಮಹೇಶ್ವರಿ ಪಾಂಚಾಳ ಹಾಗೂ ಪ್ರಿಯಂಕಾ ಗುರುದೇವ ಅವರಿಂದ ದೇಶಭಕ್ತಿ ಗೀತೆ ಗಾಯನ ಜರುಗಲಿದೆ. ನಂತರ ಗುರು ಚನ್ನಬಸವ ಸಾಂಸ್ಕೃತಿಕ ಕ್ರೀಡಾ ಕಲಾ ವೇದಿಕೆ ವತಿಯಿಂದ ಜೈ ಜವಾನ ನಾಟಕ ಕಾರ್ಯಕ್ರಮ ಜರುಗುವುದು.

ಏ.30 ಬುಧುವಾರದಂದು ಸಂಜೆ 5.30 ಗಂಟೆಗೆ ನಗರದ ಬಸವೇಶ್ವರ ವೃತ್ತದಿಂದ ವಿಶ್ವಗುರು ಬಸವಣ್ಣನವರ ಭಾವಚಿತ್ರ ಹಾಗೂ ವಚನ ಸಾಹಿತ್ಯದ ಭವ್ಯ ಮೆರವಣಿಗೆ ಜರುಗಲಿದೆ. ಪೂಜ್ಯ ಡಾ.ಬಸವಲಿಂಗ ಪಟ್ಟದ್ದೇವರು ಸಾನಿಧ್ಯ ವಹಿಸಲಿದ್ದು, ಪೂಜ್ಯ ಡಾ.ಶಿವಕುಮಾರ ಮಹಾಸ್ವಾಮಿಗಳು, ಡಾ.ಗಂಗಾಂಬಿಕೆ ಅಕ್ಕನವರು, ಪೂಜ್ಯ ಪ್ರಭುದೇವರು ನೇತೃತ್ವ ವಹಿಸುವರು. ಈಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮೆರವಣಿಗೆಗೆ ಚಾಲನೆ ನೀಡುವರು. ಪೌರಾಡಳಿತ ಸಚಿವ ರಹಿಮ್ ಖಾನ್, ಬೀದರ್ ದಕ್ಷಿಣ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ, ಬೂಡಾ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ನಗರ ಸಭೆ ಅಧ್ಯಕ್ಷ ಮಹಮ್ಮದ್ ಗೌಸೋದ್ದಿನ್, ಗ್ಯಾರಂಟಿ ಯೋಜನೆ ಜಿಲ್ಲಾಧ್ಯಕ್ಷ ಅಮೃತರಾವ ಚಿಮಕೊಡೆ, ಜಿ.ಪಂ ಸಿ.ಇ.ಓ ಗಿರೀಶ ಬದೋಲೆ, ಎಸ್.ಪಿ ಪ್ರದೀಪ ಗುಂಟಿ, ಮಾಜಿ ವಿಧಾನ ಪರಿಷತ್ ಸಭಾಪತಿ ರಘುನಾಥರಾವ ಮಲ್ಕಾಪುರೆ, ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ, ಮಾಜಿ ಶಾಸಕ ಅಶೋಕ ಖೇಣಿ, ಉದ್ಯಮಿ ಗುರುನಾಥ ಕೊಳ್ಳೂರ್ ಹಾಗೂ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ತಾನು ಅಧ್ಯಕ್ಷತೆ ವಹಿಸುವುದಾಗಿ ಜೈರಾಜ ಖಂಡ್ರೆ ಮೂರು ದಿವಸಗಳ ಕಾರ್ಯಕ್ರಮ ವಿವರಿಸಿದರು.

ಉತ್ಸವ ಸಮಿತಿಯ ಗೌರವ ಸಲಹೆಗಾರರಾದ ಶಿವಶರಣಪ್ಪ ವಾಲಿ ಹಾಗೂ ಬಾಬು ವಾಲಿ ಮಾತನಾಡಿದರು. ಪ್ರಧಾನ ಕಾರ್ಯದರ್ಶಿ ಸಂಜುಕುಮಾರ ಪಾಟೀಲ, ಕೋಶಾಧ್ಯಕ್ಷ ಡಾ.ರಜನೀಶ ವಾಲಿ, ಉಪಾಧ್ಯಕ್ಷ ದೀಪಕ ವಾಲಿ, ಮಹಿಳಾ ಘಟಕದ ಅಧ್ಯಕ್ಷೆ ಜಯಶ್ರೀ ಬಚ್ಚೆಟ್ಟಿ, ಶಕುಂತಲಾ ಬೆಲ್ದಾಳೆ, ಗೌರವ ಸಲಹೆಗಾರರಾದ ಸೋಮಶೇಖರ ಪಾಟೀಲ ಗಾದಗಿ, ಗುರುನಾಥ ಕೊಳ್ಳೂರ, ಧನರಾಜ ಹಂಗರಗಿ, ಬಸವರಾಜ ಧನ್ನೂರ್, ಪ್ರಚಾರ ಸಮಿತಿ ಅಧ್ಯಕ್ಷ ಡಿ.ಕೆ ಗಣಪತಿ ಸೇರಿದಂತೆ ಇತರರು ಪತ್ರಿಕಾ ಗೋಷ್ಠಿಯಲ್ಲಿದ್ದರು.

# ಪತ್ರಕರ್ತ ರವಿ ಮೇಲಿನ ಹಲ್ಲೆ ಖಂಡಿಸಿ ಇಂದಿನಿಂದ ಅನಿರ್ದಿಷ್ಟಾವಧಿ ಧರಣಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 28: ಪತ್ರಕರ್ತ ರವಿ ಭೂಸಂಡೆ ಅವರ ಮೇಲೆ ಹಲ್ಲೆಮಾಡಿದ ಅರಣ್ಯ ಇಲಾಖೆಯ ಸಿಬ್ಬಂದಿಗಳ ಪೈಕಿ ಒಬ್ಬರನ್ನು ಮಾತ್ರ ಅಮಾನತು ಮಾಡಿದ್ದು ಇನ್ನುಳಿದ ಮೂವರನ್ನು ಸಹ ಅಮಾನತು ಮಾಡಿ, ನಾಲ್ವರನ್ನು ಬಂಧಿಸಿ ಕಾನೂನಿನಡಿ ಬಂಧಿಸಿ ಶಿಕ್ಷೆಗೊಳಪಡಿಸಬೇಕು ಹಾಗೂ ರವಿ ಮೇಲೆ ಸುಳ್ಳು ಕೇಸ್ ದಾಖಲಿಸಿರುವುದನ್ನು ವಾಪಸ್ಸು ಪಡೆದು ಬಿ ರಿಪೋರ್ಟ್ ಸಲ್ಲಿಸಬೇಕೆಂದು ಒತ್ತಾಯಿಸಿ ನಾಳೆ ಮಂಗಳವಾರದಿಂದ ಜಿಲ್ಲಾಧಿಕಾರಿ ಕಚೇರಿ ಮುಂದೆ ಕರ್ನಾಟಕ ಭೀಮ ಸೇನೆ ಅನಿರ್ದಿಷ್ಟಾವಧಿ ಧರಣಿ



ಹಮ್ಮಿಕೊಂಡಿದೆ. ಈ ಕುರಿತು ಪ್ರಕಟಣೆ ಹೇಳಿಕೆ ನೀಡಿರುವ ಸಂಘಟನೆಯ ರಾಜ್ಯ ಕಾರ್ಯದರ್ಶಿ ವಿಷ್ಣುವರ್ಧನ ವಾಲದೊಡ್ಡಿ ಅವರು, ಉಲ್ಟಾ ಚೋರ್ ಕೊತವಾಲ್ ಕೊ ಡಾಟೆ ಎನ್ನುವಂತೆ ರವಿ ಮೇಲೆ ಹಲ್ಲೆಮಾಡಿದ್ದಲ್ಲದೆ, ಪರ್ತಕರ್ತ ರವಿ ಮೇಲೆಯೇ ನಾಲ್ಕೈದು ಸುಳ್ಳು ಕೇಸ್ ದಾಖಲಿಸಿರುವುದು ದೊಡ್ಡದುರಂತ. ಪತ್ರಕರ್ತರು ಬೀದಿಗಿಳಿದ ಬಳಿಕ ಕಣ್ಣೊರೆಸುವ ತಂತ್ರವೆಂಬಂತೆ ದಸ್ತಗಿರ್ ಎಂಬುವವರನ್ನು ಮಾತ್ರ ಅಮಾನತ್ತಿನಲ್ಲಿಡಲಾಗಿದೆ. ಹಲ್ಲೆ ಮಾಡಿದವರ ಪೈಕಿ ಇನ್ನು ಮೂರು ಸಿಬ್ಬಂದಿಗಳಾದ ಗಜಾನಂದ, ಶಾಂತಕುಮಾರ ಹಾಗೂ ಸಂಗಮೇಶ ಈ ಮೂವರನ್ನು ಸಹ ಈ ಕೂಡಲೇ ಅಮಾನತುಗೊಳಿಸಬೇಕು. ಹಾಗೂ ರವಿ ಮೇಲೆ ಹಾಕಿದ ಸುಳ್ಳು ಕೇಸ್‌ಗಳನ್ನು ಕೂಡಲೇ ವಾಪಸ್ಸು ಪಡೆಯಬೇಕು. ಇಲ್ಲವಾದಲ್ಲಿ ಮಂಗಳವಾರದಿಂದ ಡಿ.ಸಿ ಕಚೇರಿ ಮುಂದೆ ನಮ್ಮ ಹೋರಾಟ ನಿರಂತರವಾಗಿರುತ್ತದೆ ಎಂದು ವಾಲದೊಡ್ಡಿ ಎಚ್ಚರಿಸಿದ್ದಾರೆ.

# ಶರಣ ಉದ್ಯಾನದಲ್ಲಿ ಸಾಮೂಹಿಕ ಇಷ್ಟಲಿಂಗ ಪೂಜೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 28 : ಬಸವ ಜಯಂತಿ ಉತ್ಸವ ನಿಮಿತ್ತ ಬಸವ ಜಯಂತಿ ಉತ್ಸವ ಸಮಿತಿ ವತಿಯಿಂದ ಇಲ್ಲಿಯ ಶರಣ ಉದ್ಯಾನದಲ್ಲಿ ಸೋಮವಾರ ಸಾಮೂಹಿಕ ಇಷ್ಟಲಿಂಗ ಪೂಜೆ ಜರುಗಿತು.

ಬಸವ ಸೇವಾ ಪ್ರತಿಷ್ಠಾನದ ಡಾ. ಗಂಗಾಂಬಿಕೆ ಅಕ್ಕ ಇಷ್ಟಲಿಂಗ ಪೂಜೆ ಪ್ರಾತ್ಯಕ್ಷಿಕೆ ನಡೆಸಿಕೊಟ್ಟರು.

ಇಷ್ಟಲಿಂಗ ಪೂಜೆ ಲಿಂಗಾಯತ ಧರ್ಮದ ಜೀವಾಳ. ನಿತ್ಯ ಇಷ್ಟಲಿಂಗ ಪೂಜೆ ಮಾಡುವುದರಿಂದ ಸಕಾರಾತ್ಮಕ ವಿಚಾರಗಳು ಬರುತ್ತವೆ ಎಂದು ಅವರು ಹೇಳಿದರು.

ಬಸವ ಜಯಂತಿ ಉತ್ಸವ ಸಮಿತಿಯ ಅಧ್ಯಕ್ಷ ಜೈರಾಜ ಖಂಡ್ರೆ ಮಾತನಾಡಿ, ಬಸವ ಜಯಂತಿ ಅಂಗವಾಗಿ ಈ ಬಾರಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸಮಿತಿಯ ಪದಾಧಿಕಾರಿಗಳು ಹಾಗೂ ಬಸವಾನುಯಾಯಿಗಳು ಉತ್ಸವವನ್ನು ಸರ್ವ ರೀತಿಯಿಂದಲೂ ಯಶಸ್ವಿಗೊಳಿಸಲು ಹಗಲಿರುಳು ಶ್ರಮಿಸುತ್ತಿದ್ದಾರೆ. ಎಂದು ತಿಳಿಸಿದರು.

ಸುವರ್ಣಾ ಚಿಮಕೋಡೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಲಾವಿದ ಶಿವಕುಮಾರ ಪಾಂಚಾಳ ಹಾಗೂ ತಂಡದವರು ವಚನ ಗಾಯನ ನಡೆಸಿಕೊಟ್ಟರು.

ಬಸವ ಜಯಂತಿ ಉತ್ಸವ ಸಮಿತಿಯ ಮಹಿಳಾ ಘಟಕದ ಅಧ್ಯಕ್ಷೆ ಡಾ. ವಿಜಯಶ್ರೀ ಬಚ್ಚೆಟ್ಟಿ ಅಧ್ಯಕ್ಷತೆ ವಹಿಸಿದ್ದರು. ಡಿಸಿಸಿ ಬ್ಯಾಂಕ್ ನಿರ್ದೇಶಕಿ ಶಕುಂತಲಾ ಬೆಲ್ದಾಳೆ, ಸಮಿತಿಯ ಪ್ರಧಾನ ಕಾರ್ಯದರ್ಶಿ ಸಂಜುಕುಮಾರ ಪಾಟೀಲ, ವೇದಿಕೆ ಸಮಿತಿಯ ಅಧ್ಯಕ್ಷ ಸುರೇಶ ಸ್ವಾಮಿ, ಪ್ರಧಾನ ಕಾರ್ಯದರ್ಶಿ ರಾಚಪ್ಪ ಪಾಟೀಲ, ವಿವೇಕಾನಂದ ಧನ್ನೂರ, ಶಿವರಾಜ ಮದಕಟ್ಟಿ, ಬಸವರಾಜ ಬಿರಾದಾರ, ಕರುಣಾ ಶೆಟಕಾರ್, ಪಂಪಾವತಿ ಪಾಟೀಲ, ನೀಲಮ್ಮ ರೂಗನ್, ವಿದ್ಯಾವತಿ ಬಲ್ಲೂರ, ಲಕ್ಷ್ಮಿ ಬಿರಾದಾರ, ಸುನಂದಾ ಗಂದಗೆ, ಉಲ್ಲಾಸಿನಿ ಮುದಾಳೆ, ಡಾ. ಶಾರದಾ ಗುದಗೆ, ಜಗದೇವಿ ಮದಕಟ್ಟಿ, ಜ್ಯೋತ್ಸ್ನಾ ದೇಶಮುಖ, ವಿಜಯಲಕ್ಷ್ಮಿ ಪಾಟೀಲ ಮತ್ತಿತರರು ಇದ್ದರು.

ಶಾಂತಾ ಖಂಡ್ರೆ ಸ್ವಾಗತಿಸಿದರು. ಮಲ್ಲಮ್ಮ ಆರ್. ಪಾಟೀಲ ನಿರೂಪಿಸಿದರು. ಜ್ಞಾನದೇವಿ ಬಬಚಡೆ ವಂದಿಸಿದರು.

ನೂರಾರು ಶರಣ, ಶರಣೆಯರು ಶ್ರದ್ಧೆ, ಭಕ್ತಿಯಿಂದ ಪಾಲ್ಗೊಂಡರು.

# ಸಾಮ್ರಾಟ್ ಅಶೋಕ ಸ್ತೂಪ ನಿರ್ಮಾಣಕ್ಕೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 28 : ತಾಲ್ಲೂಕಿನ ಹಮಿಲಾಪುರದಲ್ಲಿ ಮಾತೋಶ್ರೀ ರಮಾಬಾಯಿ ಅಂಬೇಡ್ಕರ್ ಮಹಿಳಾ ಸ್ವ ಸಹಾಯ ಸಂಘದಿಂದ ಸಾಮ್ರಾಟ್ ಅಶೋಕ ಸ್ತೂಪ ನಿರ್ಮಾಣಕ್ಕೆ ಭಾನುವಾರ ಚಾಲನೆ ನೀಡಲಾಯಿತು.

ಕರ್ನಾಟಕ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಂಘಟನಾ ಸಂಚಾಲಕ ಮಾರುತಿ ಬೌದ್ಧೆ ಅವರು ಗುದ್ದಲಿ ಪೂಜೆ ನೆರವೇರಿಸಿದರು.

ಸಂಘದಿಂದ 22 ಅಡಿ ಎತ್ತರದ ಸುಂದರ ಸ್ತೂಪ ನಿರ್ಮಿಸಲಾಗುತ್ತಿದೆ ಎಂದು ಸಂಘದ ಅಧ್ಯಕ್ಷೆ ಈರಮ್ಮ ರಾಂಪುರೆ ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಗೌರವ ಕಾರ್ಯದರ್ಶಿ ಎಂ.ಎಸ್. ಮನೋಹರ, ವಿ.ಎಂ.ರಾಂಪುರೆ ಪಬ್ಲಿಕ್ ಸ್ಕೂಲ್ ಅಧ್ಯಕ್ಷ ಮಹೇಶ ರಾಂಪುರೆ, ಫಾಳೆಮ್ಮ ರಾಂಪುರೆ, ಶ್ರೀದೇವಿ, ಕಸ್ತೂರಿ ಭೋಸ್ಲೆ, ಲಲಿತಮ್ಮ, ಲಕ್ಷ್ಮಿ ರಾಂಪುರೆ, ಶಾರದಾಬಾಯಿ ರಾಂಪುರೆ, ಶೋಭಿತ್, ಪ್ರಕಾಶ ರಾಂಪುರೆ, ಗೌತಮ, ಮಂಜುನಾಥ, ನರಸಿಂಗ್ ಭೋಸ್ಲೆ, ಅಶೋಕ್ ಶರ್ಮಾ, ರವಿ ಭೋಸ್ಲೆ, ಕಿಶೋರ ರಾಂಪುರೆ, ಸತೀಶ, ಸುನಿಲ್ ರಾಂಪುರೆ, ಮತ್ತಿತರರು ಇದ್ದರು.

# ಹೇಮರೆಡ್ಡಿ ಮಲ್ಲಮ್ಮ ಜಯಂತಿ ಅದ್ದೂರಿ ಆಚರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಏ.28: ಜಿಲ್ಲಾ ರೆಡ್ಡಿ ಸಮಾಜವು ನಗರದಲ್ಲಿ ಮೇ 10 ರಂದು ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲು ತೀರ್ಮಾನಿಸಿದೆ.



ನಗರದ ಅಮಲಾಪುರ ರಸ್ತೆಯಲ್ಲಿ ಇರುವ ಹೇಮರೆಡ್ಡಿ ಮಲ್ಲಮ್ಮ ಮಂದಿರದಲ್ಲಿ ನಡೆದ ಜಯಂತಿ ಆಚರಣೆ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಸಮಾಜದ ಅಧ್ಯಕ್ಷ ಶಂಕರ ರೆಡ್ಡಿ ಚಿಟ್ಟಾ ಈ ಮಾಹಿತಿ ನೀಡಿದರು.

ಅಂದು ಬೆಳಿಗ್ಗೆ 7.35ಕ್ಕೆ ಪಾಪನಾಶ ಮಂದಿರದಿಂದ ಹೇಮರೆಡ್ಡಿ ಮಲ್ಲಮ್ಮ ಮಂದಿರದ ವರೆಗೆ ಬೈಕ್ ರ್ಯಾಲಿ ಹಮ್ಮಿಕೊಳ್ಳಲಾಗಿದೆ. ರ್ಯಾಲಿ ಕೇಂದ್ರ ಬಸ್ ನಿಲ್ದಾಣ, ಮಡಿವಾಳ ಮಾಚಿದೇವ ವೃತ್ತ, ನೆಹರೂ ಕ್ರೀಡಾಂಗಣ, ಜಿಲ್ಲಾ ಆಸ್ಪತ್ರೆ ಕ್ರಾಸ್, ಹರಳಯ್ಯ ವೃತ್ತದ ಮಾರ್ಗವಾಗಿ ಜಿಲ್ಲಾಧಿಕಾರಿ ಕಚೇರಿಗೆ ತಲುಪಲಿದೆ. ಅಲ್ಲಿ ಜಿಲ್ಲಾಡಳಿತದ ವತಿಯಿಂದ ಹಮ್ಮಿಕೊಂಡ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಪೂಜೆ ಕಾರ್ಯಕ್ರಮದ ನಂತರ ಹೇಮರೆಡ್ಡಿ ಮಲ್ಲಮ್ಮ ಮಂದಿರಕ್ಕೆ ತೆರಳಲಿದೆ. ಮಂದಿರದಲ್ಲಿ ಮಧ್ಯಾಹ್ನ 12.30ಕ್ಕೆ ಜಿಲ್ಲಾಡಳಿತದಿಂದ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದು ಹೇಳಿದ್ದಾರೆ.

ಮೇ 9 ರಂದು ಸಂಜೆ 5.45ಕ್ಕೆ ಸಿದ್ಧಾರೂಢ ಮಂದಿರದಿಂದ ಮಲ್ಲಮ್ಮ ಮಂದಿರದ ವರೆಗೆ ಕುಂಭ ಕಳಸ ಹೊತ್ತ ಮಹಿಳೆಯರ ಮೆರವಣಿಗೆ ಜರುಗಲಿದೆ. ರಾತ್ರಿ 8.15ಕ್ಕೆ ದೀಪೋತ್ಸವ ನಡೆಯಲಿದೆ ಎಂದು ತಿಳಿಸಿದರು.

ಸಮಾಜದ ಗೌರವಾಧ್ಯಕ್ಷ ಸಂಗ್ರಾಮ ರೆಡ್ಡಿ, ಉಪಾಧ್ಯಕ್ಷ ರಾಜರೆಡ್ಡಿ ಶೇರಿಕಾರ್, ನಗರಸಭೆ ಸದಸ್ಯ ರಾಜು ಚಿಂತಾಮಣಿ, ಪ್ರಮುಖರಾದ ಗೋಪಾಲ್ ರೆಡ್ಡಿ, ಸಂಜುರೆಡ್ಡಿ, ಪಂಟಾರೆಡ್ಡಿ, ಬಸವರಾಜ ಕೊಡಂಬಲ್, ವೆಂಕಟರೆಡ್ಡಿ, ವಿಜಯಕುಮಾರ ರೆಡ್ಡಿ, ಅಶೋಕರೆಡ್ಡಿ, ಕೃಷ್ಣಾರೆಡ್ಡಿ, ರವಿ ರೆಡ್ಡಿ, ಜಗನ್ನಾಥ ರೆಡ್ಡಿ ಮತ್ತಿತರರು ಇದ್ದರು.

# ಬಸವೇಶ್ವರ ದೇವಸ್ಥಾನದಲ್ಲಿ ವಿವಿಧ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 28 : ಬಸವ ಜಯಂತಿ ಅಂಗವಾಗಿ ನಗರದ ಹಾರೂರಗೇರಿಯ ಬಸವೇಶ್ವರ ದೇವಸ್ಥಾನದಲ್ಲಿ ಏಪ್ರಿಲ್ 30 ರವರೆಗೆ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹಾರೂರಗೇರಿ ಬಸವ ಸಮಿತಿಯ ಅಧ್ಯಕ್ಷ ಬಸವರಾಜ ಪಾಟೀಲ ಹಾರೂರಗೇರಿ ತಿಳಿಸಿದ್ದಾರೆ.



ಏಪ್ರಿಲ್ 29 ರಂದು ಮಧ್ಯಾಹ್ನ 1ಕ್ಕೆ ಮಹಾ ಪ್ರಸಾದ ವಿತರಣೆ, ಸಂಜೆ 7ಕ್ಕೆ ವಚನ ಗಾಯನ ಜರುಗಲಿದೆ. ಏಪ್ರಿಲ್ 30 ರಂದು ಬೆಳಿಗ್ಗೆ 7ಕ್ಕೆ ಬಸವೇಶ್ವರ ತೊಟ್ಟಿಲು, ಬೆಳಿಗ್ಗೆ 8ಕ್ಕೆ ಕಾಲೋನಿಯಿಂದ ಬಸವೇಶ್ವರ ವೃತ್ತದ ವರೆಗೆ ಬಸವೇಶ್ವರ ಭಾವಚಿತ್ರ, ಧರ್ಮ ಗ್ರಂಥ ಹಾಗೂ ಪಲ್ಲಕ್ಕಿ ಮೆರವಣಿಗೆ ನಡೆಯಲಿದೆ ಎಂದು ತಿಳಿಸಿದ್ದಾರೆ.

ಬಸವ ಭಕ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಕೋರಿದ್ದಾರೆ.

# ಉಚಿತ ಆರೋಗ್ಯ ತಪಾಸಣೆ ಶಿಬಿರ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 28 : ಲಘು ಉದ್ಯೋಗ ಭಾರತಿ ಬೀದರ್ ಘಟಕ ಹಾಗೂ ಬೀದರ್ ಹಾರ್ಟಿಕಲ್ಚರ್ ಫಾರ್ಮರ್ಸ್ ಪ್ರೊಡ್ಯೂಸರ್ ಕಂಪನಿ ವತಿಯಿಂದ ಲಘು ಉದ್ಯೋಗ ಭಾರತಿ ಸ್ಥಾಪನಾ ದಿನದ ಅಂಗವಾಗಿ ತಾಲ್ಲೂಕಿನ ಮಂದಕನಳ್ಳಿ ಗ್ರಾಮದಲ್ಲಿ ಭಾನುವಾರ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಯಿತು.

150 ರೈತರು ಹಾಗೂ 50 ಸಾರ್ವಜನಿಕರು ಸೇರಿ 200 ಮಂದಿಯ ಉಚಿತ ತಪಾಸಣೆ ಮಾಡಲಾಯಿತು.

ಡಾ. ಪೂಜಾ ಶಿಂಧೆ, ಡಾ. ಶೈಲೇಶ್ ದಾಬಕೆ, ಡಾ. ಶೈಲೇಶ್ ಮಠ, ಡಾ. ಸಂಗಮೇಶ ವಡಗಾವೆ, ಬ್ರಿಮ್ಸ್ ವೈದ್ಯ ವಿದ್ಯಾರ್ಥಿಗಳಾದ ಅನಿಲಕುಮಾರ ಸಜ್ಜನ್, ಆರ್ಯನ್ ಕಲ್ಲೂರಕರ್, ಅನ್ನಪೂರ್ಣ, ಅರುಣಕುಮಾರ ಪಾಟೀಲ ಹಾಗೂ ಮೋಹಿನಿ ಅವರು ನೇತ್ರ, ದಂತ, ನರ ಹಾಗೂ ಸಾಮಾನ್ಯ ರೋಗಗಳ ತಪಾಸಣೆ ಮಾಡಿದರು. ರೋಗಿಗಳಿಗೆ ಉಚಿತ ಔಷಧ ಸಹ ವಿತರಿಸಲಾಯಿತು.

ಶಿಬಿರದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಲಘು ಉದ್ಯೋಗ ಭಾರತಿ ಬೀದರ್ ಘಟಕದ ಅಧ್ಯಕ್ಷ ಸಚ್ಚಿದಾನಂದ ಚಿದ್ರೆ ಅವರು, ದೇಶದಲ್ಲಿ ಲಘು ಉದ್ಯೋಗ ಭಾರತಿಯಲ್ಲಿ 53 ಸಾವಿರ ಮೈಕ್ರೊಸ್ಮಾಲ್ ಮ್ಯಾಕ್ರೊ ಎಂಟರ್‌ಪ್ರೈಸೆಸ್ ಸದಸ್ಯರಿದ್ದಾರೆ. 500ಕ್ಕೂ ಹೆಚ್ಚು ಘಟಕಗಳು ಇವೆ ಎಂದು ತಿಳಿಸಿದರು.

ಲಘು ಉದ್ಯಮಗಳು ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸುತ್ತಿವೆ. ದೇಶದ ಅಭಿವೃದ್ಧಿಗೂ ಕೊಡುಗೆ ನೀಡುತ್ತಿವೆ ಎಂದು ಹೇಳಿದರು.

ಉದ್ಘಾಟನೆ ನೆರವೇರಿಸಿದ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಕಲಬುರಗಿ ವಿಭಾಗದ ಮಾನ್ಯ ಸಂಘ ಚಾಲಕ ಹನುಮಂತರಾವ್ ಪಾಟೀಲ ಅವರು, ರಾಷ್ಟ್ರೀಯ ಸ್ವಯಂ ಸೇವಕ ಸಂಘವು ರಾಷ್ಟ್ರ ಸೇವೆಗೈಯ್ಯುವ ವ್ಯಕ್ತಿಗಳನ್ನು ತಯಾರು ಮಾಡುತ್ತಿದೆ. ಕೋವಿಡ್ ಹಾಗೂ ಪ್ರಕೃತಿ ವಿಕೋಪಗಳ ಸಂದರ್ಭಗಳಲ್ಲಿ ತಕ್ಷಣ ಜನರ ನೆರವಿಗೆ ಧಾವಿಸುತ್ತಾ ಬಂದಿದೆ ಎಂದು ತಿಳಿಸಿದರು.


ಬೀದರ್ ಹಾರ್ಟಿಕಲ್ಚರ್ ಫಾರ್ಮರ್ಸ್ ಪ್ರೊಡ್ಯೂಸರ್ ಕಂಪನಿ ಲಿಮಿಟೆಡ್ ಅಧ್ಯಕ್ಷ ಚೇತನ್ ದಾಬಕೆ ಮಾತನಾಡಿ, ದೇಶದ ಬೆನ್ನೆಲುಬಾಗಿರುವ ರೈತರು ಆರೋಗ್ಯ ಕಾಳಜಿ ವಹಿಸಬೇಕು ಎಂದರು.

ಲಘು ಉದ್ಯೋಗ ಭಾರತಿ ಬೀದರ್ ಘಟಕದ ಜಂಟಿ ಕಾರ್ಯದರ್ಶಿ ಮಂಜುನಾಥ ಹೂಗಾರ ಗಾದಗಿ, ಸಲಹೆಗಾರ ರಾಘವೇಂದ್ರ ಪಾಟೀಲ, ನರಸಿಂಗ್ ಸಿಂಧೆ, ನಿಖಿಲ್, ಗಂಗಶೆಟ್ಟಿ, ಮಹೇಶ ಚಿಮಕೋಡೆ, ವೀರೇಶ ಪಾಟೀಲ ಇದ್ದರು.

# ಆದಿ ಜಾಂಬವ ಸಂಘ ಸಭೆ ೩ರಂದು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 28 : ಆದಿ ಜಾಂಬವ ಸಂಘದ ಜಿಲ್ಲಾ ಘಟಕ ಸಭೆ ಮೇ.3ರಂದು ಮಧ್ಯಾಹ್ನ 1ಕ್ಕೆ ಇಲ್ಲಿನ ಕುಂಬಾರವಾಡ ಕ್ರಾಸ್ ಹತ್ತಿರದ ಮುಚಳಂಬೆ ಫಂಕ್ಷನ್ ಹಾಲ್ನಲ್ಲಿ ಕರೆಯಲಾಗಿದೆ. ಸಂಘ ರಾಜ್ಯ ಹಿರಿಯ ಉಪಾಧ್ಯಕ್ಷ ಡಾ. ರಾಜು ಕಡ್ಯಾಳ್ ಆದೇಶದ ಮೇರೆಗೆ ಸಭೆ ಆಯೋಜಿಸಲಾಗಿದೆ. ಸಂಘದ ನೂತನ ಜಿಲ್ಲಾಧ್ಯಕ್ಷರ ಆಯ್ಕೆ ಹಾಗೂ ಪರಿಶಿಷ್ಟ



ಜಾತಿ ಒಳ ಮೀಸಲಾತಿ ವಗರ್undefinedಕರಣ, ನ್ಯಾ.ಎಚ್.ಎನ್.ನಾಗಮೋಹನ್ ದಾಸ್ ಏಕ ಸದಸ್ಯ ಆಯೋಗವು ಪರಿಶಿಷ್ಟಜಾತಿಗಳ ಸಮೀಕ್ಷೆ ಕುರಿತು ಜಾಗೃತಿ ಮೂಡಿಸಲು ಸಭೆ ನಡೆಯಲಿದೆ. ಸಂಘದ ಜಿಲ್ಲಾ, ತಾಲ್ಲೂಕು ಪದಾಧಿಕಾರಿಗಳು, ಚಿಂತಕರು, ಸಮಾಜದ ಬುದ್ಧಿಜೀವಿಗಳು, ಹೋರಾಟಗಾರರು, ಹಿರಿಯ ಮುಖಂಡರು ಸಭೆಗೆ ಆಗಮಿಸಿ ಸಲಹೆ ನೀಡಬೇಕು ಎಂದು ಸಂಘದ ಜಾಫ್ರಾಜ್ ಕಡ್ಯಾಳ್, ಸಂಜುಕುಮಾರ ಬೇಂದ್ರೆ, ಸಿ.ಎಂ. ದಾಸ್, ಜೀವನ ರಿಕ್ಕೆ, ರೋಷನ್ ಮಲ್ಕಾಪುರ ತಿಳಿಸಿದ್ದಾರೆ.

# ಚರಂಡಿಗಳ ದುರಸ್ತಿಗೆ ರಕ್ಷಣಾ ವೇದಿಕೆ ಪ್ರವೀಣ್‌ಕುಮಾರ ಶೆಟ್ಟಿ ಬಣ ಒತ್ತಾಯ





ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು.ಏ.28-ಪಟ್ಟಣದ ಗಡಿಯಾರವೃತ್ತದಿಂದಹನುಮಾನ ವೃತ್ತದ ವರೆಗೆ ಚರಂಡಿಗಳು ಮುಚ್ಚಿಹೋಗಿದ್ದು, ಚರಂಡಿಗಳ ದುರಸ್ತಿಗೆ ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್‌ಕುಮಾರ ಶೆಟ್ಟಿ ಬಣ ಕಾರ್ಯಕರ್ತರು ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿದರು. ಚರಂಡಿಗಳ ಮೇಲೆ ಕಂಪೌಂಡ್ ಗೋಡೆ ಹಾಗೂ ಸ್ಟೇರ್‌ಕೇಸ್‌ಗಳನ್ನುನಿರ್ಮಿಸಿದ್ದಾರೆ. ಇದರಿಂದಾಗಿ ಚರಂಡಿಗಳು ಮುಚ್ಚಿ ಹೋಗಿವೆ. ಪರಿಣಾಮ ಚರಂಡಿ ತುಂಬಿ ಚರಂಡಿ ನೀರು ರಸ್ತೆಯ ಮೇಲೆ ಹರಿಯುತ್ತಿವೆ. ಇದರಿಂದಾಗಿ ದುರ್ವಾಸನೆ ಬೀರುತ್ತಿದೆ. ರಸ್ತೆ ಒತ್ತುವರಿಯಾಗಿ ವಾಹನ ಸವಾರರು ತೊಂದರೆ ಅನುಭವಿಸುತ್ತಿದ್ದಾರೆ.

ಕಾರಣ ಕೂಡಲೇ ಚರಂಡಿಯನ್ನು ಸ್ವಚ್ಛಗೊಳಿಸಬೇಕು ಹಾಗೂ ಚರಂಡಿ ಮೇಲೆ ನಿರ್ಮಿಸಿದ ಕಟ್ಟಡಗಳನ್ನು ತೆರವುಗೊಳಿಸಿ ಚರಂಡಿ ನೀರು ಸರಾಗವಾಗಿ ಹರಿಯುವಂತೆ ಮಾಡಬೇಕೆಂದು ಒತ್ತಾಯಿಸಿದರು.

ಸಂಘಟನೆಯ ತಾಲೂಕು ಅಧ್ಯಕ್ಷ ಆಂಜನೇಯ ಭಂಡಾರಿ, ಭೀಮೇಶ ನಾಯಕ, ಕುರುಮೇಶ ನಾಯಕ, ಶಿವು ಪತ್ತಾರ್, ಸಲೀಂಖಾನ್, ಮೌನೇಶ ಬಳ್ಳಾಪೂರು, ಅಶೋಕ ನಾಯಕ, ಸಿದ್ದು ಚಲುವಾದಿ ಇದ್ದರು.

# ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷೆ ವ್ಯವಸ್ಥಿತವಾಗಿ ಕೈಗೊಳ್ಳಲು ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಏ:28:: ಪರಿಶಿಷ್ಟ ಜಾತಿಕುಟುಂಬಗಳಸಮೀಕ್ಷೆಯನ್ನು ಯಾವುದೇ ಲೋಪವಿಲ್ಲದೆ ವ್ಯವಸ್ಥಿತವಾಗಿ ಕೈಗೊಳ್ಳಲು ಸಹಾಯಕ ಆಯುಕ್ತರಾದ ಶ್ರೀ ಹಂಪಣ್ಣ ಸಜ್ಜನ್ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಪಂಚಾಯತ್‌ಸಭಾಂಗಣದಲ್ಲಿ ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಿಕ್ಷಣ ಇಲಾಖೆ ಹಾಗೂಸಮಾಜಕಲ್ಯಾಣಇಲಾಖೆಗಳ ಸಹಯೋಗದಲ್ಲಿಹಮ್ಮಿಕೊಂಡಿದ್ದ ಪರಿಶಿಷ್ಟ ಜಾತಿ ಒಳಮೀಸಲಾತಿ ಕುರಿತ ಜಿಲ್ಲಾ ಮಟ್ಟದ ತರಬೇತಿ ಕಾರ್ಯಾಗಾರವನ್ನುಉದ್ಘಾಟಿಸಿ ಅವರು ಮಾತನಾಡಿದರು.

ಗೌರವಾನ್ವಿತ ನ್ಯಾಯಮೂರ್ತಿ ಡಾ.ಹೆಚ್.ಎನ್.ನಾಗಮೋಹನ್ ದಾಸ್ ಏಕಸದಸ್ಯ ವಿಚಾರಣಾ ಆಯೋಗದ ವರದಿಯ ಹಿನ್ನೆಲೆಯಲ್ಲಿ ಪರಿಶಿಷ್ಟ ಜಾತಿ ಜನಾಂಗದ ಕುಟುಂಬಗಳ ಸಮಗ್ರ ಸಮೀಕ್ಷೆಯನ್ನುವೈಜ್ಞಾನಿಕವಾಗಿ ಕೈಗೊಳ್ಳಲು ಸರ್ಕಾರನಿರ್ದೇಶಿಸಿದ್ದು, ವ್ಯವಸ್ಥಿತವಾಗಿಯಾವುದೇಕುಟುಂಬ ಈಸಮೀಕ್ಷೆಯಿಂದ ವಂಚಿತರಾಗ ದಂತೆಎಚ್ಚರಿಕೆಯೊಂದಿಗೆಕೈಗೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಅವರು ಸೂಚಿಸಿದರು.

ಇದೇ ಮೇ ದಿನಾಂಕ:9-5-25 ರಿಂದ 17-5-25 ರವರೆಗೆ ಸಮೀಕ್ಷೆ ದಾರರು ಮನೆ ಮನೆಗೆ ಭೇಟಿ ನೀಡಿ ವಿವೇಚನಾಯುತ ನಡೆ-ನುಡಿಯೊಂದಿಗೆ ಭೇಟಿಯ ಉದ್ದೇಶವನ್ನು ಮನವರಿಕೆ ಮಾಡಿ ಮೋಬೈಲ್ ಆಪ್ ನಲ್ಲಿಯೇ ಮಾಹಿತಿಯನ್ನು ಬ್ಲಾಕ್ ಆಧಾರದಲ್ಲಿ ಪ್ರತಿ ಬ್ಲಾಕ್ನಲ್ಲಿ ತಲಾ 300 ಮನೆಗಳ ಕುಟುಂಬಗಳ ಮಾಹಿತಿ ಸಂಗ್ರಹಿಸಬೇಕು.ನಂತರ ದಿನಾಂಕ:19-5-25 ರಿಂದ 21-5-25 ರವರೆಗೆ ಸಮೀಕ್ಷೆಯಲ್ಲಿ ಕೈಬಿಟ್ಟುಹೋದ ಕುಟುಂಬಗಳನ್ನು ಗುರುತಿಸಿ ಮಾಹಿತಿ ಸಂಗ್ರಹಿಸಬೇಕು. ಇದರಲ್ಲಿಯೂ ಬಿಟ್ಟು ಹೋದ ಕುಟುಂಬಗಳಿದ್ದಲ್ಲಿ ಆನ್ಲೈನ್ ಮೂಲಕ ಸಂಬಂಧಪಟ್ಟ ಜನಾಂಗದವರು ತಾವಾಗಿಯೇ ಸಮೀಕ್ಷೆಯಡಿ ಮಾಹಿತಿ ನೀಡಲು ಅವಕಾಶ ಕಲ್ಪಿಸಲಾಗಿದೆ. ಕಾರಣ ಸಮೀಕ್ಷೆದಾರರುಮತ್ತುಸಂಬಂಧಿಸಿದ ಅಧಿಕಾರಿಗಳುಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸುವಂತೆ ಅವರು ಸೂಚಿಸಿದರು.

ಸಮೀಕ್ಷೆಯ ಮೇಲ್ವಿಚಾರಣೆಗಾಗಿ, ರಾಜ್ಯ ಮಟ್ಟದಲ್ಲಿ ಸಮಿತಿ ಇದ್ದು, ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಇದೆ,ಜಿ.ಪಂ. ಸಿಇಓ ಉಪಾಧ್ಯಕ್ಷರಾಗಿದ್ದಾರೆ.

ತಾಲೂಕಾ ಮಟ್ಟದಲ್ಲಿ ಸಹಾಯಕ ಆಯುಕ್ತರ ಅಧ್ಯಕ್ಷತೆಯ ಸಮಿತಿ ಮೇಲ್ವಿಚಾರಣೆ ಮಾಡಲಿದೆ.ಪ್ರತಿ ತಾಲೂಕಿಗೆ ತಲಾ 5 ಮಾಸ್ಟರ್ ಟ್ರೈನರ್ ಆಯ್ಕೆ ಮಾಡಿದ್ದು, ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ನಿಯೋಜಿಸಲಾಗಿದೆ.ರಾಜ್ಯಮಟ್ಟದಲ್ಲಿ ತರಬೇತಿ ಪಡೆದ ಮಾಸ್ಟರ್ ಟ್ರೈನರ್ ರಾಘವೇಂದ್ರ,ಗುರು ಪಾಟೀಲ್ ಮತ್ತುಶ್ರೀನಿವಾಸ್ ಅವರ ಮೂಲಕ ಇಂದು ತರಬೇತಿ ನೀಡಿದ್ದು, ರಾಜ್ಯದಲ್ಲಿ ಗುರುತಿಸಿದ 101 ಪರಿಶಿಷ್ಟ ಜಾತಿಗಳ ಜಣಗಣತಿ ನಡೆಯುತ್ತಿದ್ದು,ಇದರ ಅಂಗವಾಗಿ ಜಿಲ್ಲೆಯಲ್ಲಿ ವ್ಯವಸ್ಥಿತವಾಗಿ ಯಾವುದೇ ಲೋಪವಿಲ್ಲದೆ ಪ.ಜಾತಿ ಜನಾಂಗದ ಸಮೀಕ್ಷೆ ಕಾರ್ಯ ಕೈಗೊಳ್ಳುವಂತೆ ಅವರು ಸೂಚನೆ ನೀಡಿದರು.

ಈ ಸಮೀಕ್ಷೆ ಅಂಗವಾಗಿ ಪ್ರಾಥಮಿಕಹಾಗೂಸಾಮಾಜಿಕವಾಗಿ ಹಾಗೂ ಆರ್ಥಿಕ ಸ್ಥಿತಿಗತಿಗಳ ಸಮೀಕ್ಷೆ ಸಹ ಕೈಗೊಳ್ಳಬೇಕು. ಉಪಜಾತಿಗಳ ಅಂಕಿ ಅಂಶ ಸಹ ಸಂಗ್ರಹಿಸಬೇಕೆಂದ ಅವರು ಸಮೀಕ್ಷೆನಂತರಮೇಲ್ವಿಚಾರಕರಿಂದ ಪರಿಶೀಲನೆ ಸಹ ನಡೆಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಾಗಾರದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ವಿಜಯಕುಮಾರ್ ಮಡ್ಡೆ, ತಹಸೀಲ್ದಾರ್ ಸುರೇಶ್ ಅಂಕಲಗಿ, ಪರಿಶಿಷ್ಟ ಜಾತಿ ಕಲ್ಯಾಣಾಧಿಕಾರಿ ಸಿದ್ದಣ್ಣ, ತಾಲೂಕ ಮಟ್ಟದ ಮಾಸ್ಟರ್ ಟ್ರೈನರ್ ಗಳು , ಕ್ಷೇತ್ರ ಶಿಕ್ಷಣಾಧಿಕಾರಿಗಳು ,ಇತರರು ಉಪಸ್ಥಿತರಿದ್ದರು.

# ಗುರಣ್ಣ ಸಾಹುಕಾರ್ ಅವರ ಪ್ರಥಮ ಪುಣ್ಯಸ್ಮರಣೆ



ಕೆಂಭಾವಿ : ಗುರಣ್ಣ ಸಾಹುಕಾರ್ ಅವರು ನಮ್ಮನ್ನು ಅಗಲಿ ಇಂದಿಗೆ ಒಂದು ವರ್ಷವಾಗಿದೆ. ಅವರ ಧರ್ಮನಿಷ್ಠೆ,ಪ್ರಾಮಾಣಿಕತೆ ಮತ್ತು ಸಮಾಜಸೇವೆಯ ಆದರ್ಶಗಳು ಇಂದಿಗೂ ನಮ್ಮ ಜೀವನದ ದೀಪವಾಗಿವೆ. "ಅಪ್ಪ, ನೀವು ಕೊನೆ ಕ್ಷಣದಲ್ಲಿ ಹೇಳಿದ ಮಾತು,

ನೀವು ತೋರಿಸಿದ ದಾರಿ ಅದೇ ಇಂದು ನಮ್ಮ ಜೀವನದ ದಿಕ್ಕು.

ನೀವುನೀಡಿದಮಾರ್ಗದರ್ಶನದಲ್ಲಿ, ನಿಮ್ಮ ಆಶೀರ್ವಾದದೊಂದಿಗೆ ನಾವು ಮುಂದುವರಿದಿದ್ದೇವೆ.

ನಿಮ್ಮ ನೆನಪು ಸದಾ ನಮ್ಮ ಹೃದಯದಲ್ಲಿ ಜೀವಂತವಾಗಿಯೇ ಇರುತ್ತದೆ."

ಧರ್ಮಪತ್ನಿ:ಶ್ರೀಮತಿ ಮಹಾದೇವಿ ಟಕ್ಕಳಕಿ

ಗಂಡು ಮಕ್ಕಳು: ವೀರೇಶ್ ಟಕ್ಕಳಕಿ, ನಿತ್ಯಾನಂದ ಟಕ್ಕಳಕಿ

**ಹೆಣ್ಣು ಮಕ್ಕಳು:**

ಪಾರ್ವತಿ, ರೇಣುಕಾ ಅಪಾರ ಬಂಧು-ಬಳಗ ಅವರ ಪವಿತ್ರ ಆತ್ಮಕ್ಕೆ ಶಾಂತಿ ದೊರಕಲೆಂದು ಹೃತ್ಪೂರ್ವಕ ಪ್ರಾರ್ಥಿಸುತ್ತಾರೆ.

"ಓಂ ಶಾಂತಿ ಶಾಂತಿ ಶಾಂತಿ:"

# ಹನ್ನೊಂದನೇ ದಿನದ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹಕ್ಕೆ ಅರುಣಕುಮಾರ. ಪಾಟೀಲ್ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಅಫಜಲಪುರ :ತಾಲೂಕಿನ ಗಾಣಗಪೂರ ದತ್ತಾತ್ರೇಯ ದೇವಸ್ಥಾನವನ್ನು ಕಾಶಿ ವಿಶ್ವನಾಥ ದೇವ ಸ್ಥಾನದ ಮಾದರಿಯಲ್ಲಿ ಸಮಗ್ರ ಅಭಿವೃದ್ಧಿ ಮಾಡುವಂತೆ ಆಗ್ರಹಿಸಿ ಅನಿದಿಷ್ಟವದಿ ಧರಣಿ ಸತ್ಯಾಗ್ರಹನಡೆಯುತ್ತಿದ್ದು,ಹನ್ನೊಂದು ದಿನಗಳ ನಂತರ ಸಾಮಾಜಿಕ ಹೋರಾಟಗಾರ ಶಿವುಕುಮಾರ್ ನಾಟಿಕರ ಅವರ ನೇತೃತವದಲ್ಲಿ ನಡೆಯುತ್ತಿರುವ ಧರಣಿ ಸತ್ಯಾಗ್ರಹ ಸ್ಥಳಕ್ಕೆ ಕೆಪಿಸಿಸಿ ಸದಸ್ಯ ಹಾಗೂ ಶಾಸಕರ ಸುಪುತ್ರರಾದ ಅರುಣ ಕುಮಾರ ಪಾಟೀಲ ಆಗಮಿಸಿ ಅಪ್ಪನ ದಾರಿ ಯಲ್ಲಿ ಅಭಿವೃದ್ಧಿ ಮಾತನಾಡಿ ಹೊರಟು ಹೋದರು.

ಪ್ರತಿಭಟನೆಯ ಕಾವು ದಿನದಿಂದ ದಿನಕ್ಕೆ ತೀವ್ರ ಸ್ವರೂಪ ಪಡೆಯುತ್ತಿರುವುದನ್ನು ಮನಗಂಡ ರಾಜಕೀಯ ಮುಖಂಡರು ಒಬ್ಬರ ಹಿಂದೆ ಒಬ್ಬರಂತೆ ಪ್ರತಿಭಟನೆಗೆ ಬೆಂಬಲ ಸೂಚಿಸಲು ಆಗಮಿಸುತ್ತಿದ್ದಾರೆ. ಸರತಿ ಸಾಲಿನಲ್ಲಿರುವಂತೆ ಕೆಪಿಸಿಸಿ ಸದಸ್ಯರಾದ ಅರುಣಕುಮಾರ ಪಾಟೀಲ ಅವರು ಇಂದು ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ ಮಾತನಾಡಿದರು.

ವಾರದ ಹಿಂದೆ ಶಾಸಕರಾದ ಎಮ್.ವೈ. ಪಾಟೀಲರು ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ ಬೆಂಬಲ ಸೂಚಿಸುವುದರ ಜೊತೆಗೆ ಗಾಣಗಾಪುರ ಅಭಿವೃದ್ಧಿಗಾಗಿ ಖರ್ಚು ಮಾಡಿರುವ ಅನುದಾನದ ಪಟ್ಟಿ ಓದಿದರು. ಅದಕನ್ವಯವಾಗುವಂತೆ ಇಂದು ಶಾಸಕರ ಸುಪುತ್ರರು ಗಾಣಗಾಪುರ ಗ್ರಾಮ ದಲ್ಲಿ ಶಾಲೆ ಸೇರಿದುತೆ ಸಿಸಿ ರಸ್ತೆಗಳು ಹಾಗೂ ಸಂಗಮದಲ್ಲಿ ಭಕ್ತರ ಗಂಗಸ್ಥಳಕ್ಕಾಗಿ ಮೆಟ್ಟಿಲು ಗಳು ಮಾಡಲಾಗಿದೆ.

ಇನ್ನುಅನೇಕಕೆಲಸಗಳುಮಾಡುವುದಿದೆ ಎಂದರು.ಸದ್ಯದಲ್ಲೇ ಪ್ರಸಾದ ಯೋಜನೆಯಡಿಯಲ್ಲಿ 83 ಕೋಟಿ ಅನುದಾನ ಬಿಡುಗಡೆಯಾಗುವ ಹಂತದಲ್ಲಿದೆ.

ಗಾಣಗಾಪುರ ಅಭಿವೃದ್ಧಿಗೆ ಅಷ್ಟು ಅನುದಾನ ಸಾಕಾಗುವುದಿಲ್ಲ. ನೂರು ಕೋಟಿಗಿಂತ ಹೆಚ್ಚು ಅನುದಾನ ಸಿಕ್ಕಾಗ ಅಭಿವೃದ್ಧಿಯಾಗುತ್ತದೆ ಎಂದರು.ಶಿವಕು ಮಾರ ನಾಟಕಾರ ಅವರು ಉತ್ತಮ ವಾಗಿ ಗಳಾಗಿದ್ದು,ತಂದೆಯವರ ಜೊತೆ ಸೇರಿ ಮುಖ್ಯಮಂತ್ರಿಗಳ ಹತ್ತಿರ ಹೋಗಿ ಗಾಣಗಾಪುರ ಅಭಿವೃದ್ಧಿಗಾಗಿ ಮಾಡಬೇ ಕಾದ ಕೆಲಸಗಳ ಬಗ್ಗೆನಿಲಿ ನಕ್ಷೆ ಅವರ ಗಮನಕ್ಕೆ ತಂದು ಅಭಿವೃದ್ಧಿ ಮಾಡೋಣ ಎಂದರು. ಇಂದು ಅಮವಾಸ್ಯೆ ಇದೆ ತಮ್ಮ ಹೋರಾಟ ಮೊಟಕುಗೊಳಿಸಿ ಎಂದು ಮನವಿ ಮಾಡಿದರು.

ನಂತರ ಮಾತನಾಡಿದ ಹೋರಾಟಗಾರ ಶಿವಕುಮಾರ ನಾಟಿಕಾರಕಾಶಿವಿಶ್ವನಾಥರಸನ್ನಿಧಿಯ ಮಾದರಿಯಲ್ಲಿ ಗಾಣಗಾಪುರ ಅಭಿವೃದ್ಧಿಯಾಗುವವರೆಗೂ ನನ್ನ ಹೋರಾಟ ನಿರಂತರವಾಗಿರುತ್ತದೆ.

ಗಾಣಗಾಪುರ ಅಭಿವೃದ್ಧಿ ಪ್ರಾಧಿಕಾರ ಮಾಡುವುದಕ್ಕೆ ದೇಣಿಗೆ ಸಂಗ್ರಹ ಕಡಿಮೆಯಾಗುವ ಉತ್ತರ ನೀಡಿದ ಸಚಿವರಿಗೆ ತಿರುಗೇಟು ಕೊಟ್ಟ ನಾಟೀಕಾರ. ಈ ಮೊದಲು ಅಭಿವೃದ್ಧಿ ಪ್ರಾಧಿಕಾರ ಮಾಡಿದ ದೇವಸ್ಥಾನಗಳ ದೇಣಿಗೆ ಸಂಗ್ರಹದ ಮಾಹಿತಿ ನೀಡಿ ಸಚಿವರೇ.ಆ ದೇವಸ್ಥಾನಗಳ ದೇಣಿಗೆ ಸಂಗ್ರಹವಾಗುವ ಪೈಕಿ ಗಾಣಗಾಪುರ ದತ್ತಾತ್ರೇಯರ ದೇಣಿಗೆ ಸಂಗ್ರಹ ಹತ್ತು ಪಟ್ಟು ಹೆಚ್ಚಿಗಿದೆ.

ಇಲ್ಲಿಯವರೆಗೆ ಅಭಿವೃದ್ಧಿ ಯಾಕೆ ಆಗಿಲ್ಲ ಎನ್ನುವ ಗೋಜಿಗೆ ನಾನು ಹೋಗುವುದಿಲ್ಲ. ಇನ್ನು ಮುಂದೆ ಅಭಿವೃದ್ಧಿ ಪ್ರಾರಂಭವಾಗಲಿ ಎನ್ನುವುದು ನನ್ನ ಬೇಡಿಕೆ ಇದೆ. ಈಗಲೇ ಆಗಬೇಕು ಎನ್ನುವ ಹಠವೂ ನನ್ನದಲ್ಲ. ಆದರೆ ಅದಕ್ಕೆ ಸಂಬಂಧಪಟ್ಟ

ಜಿಲ್ಲಾಧಿಕಾರಿಗಳು ದೇವಸ್ಥಾನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾಗಿರುತ್ತಾರೆ.

ದೇವಸ್ಥಾನದ ಹುಂಡಿಯ ಹಣ ಎಣಿಕೆ ಮಾಡಿಕೊಂಡು ಹೋಗಲು ಬರುವ ಜಿಲ್ಲಾಧಿಕಾರಿಗಳು ಅಭಿವೃದ್ಧಿಗಾಗಿ ಹುಂಡಿಯ ಹಣ ಖರ್ಚು ಮಾಡಲಿ.ತುರ್ತು ಕೆಲಸಗಳಲ್ಲಿ ಬಿಜಿ ಇರುವ ಅಧಿಕಾರಿಗಳು ತಮ್ಮ ವ್ಯಾಪ್ತಿ ಯಲ್ಲಿ ಬರುವ ದೇವಸ್ಥಾನದ ಎದುರು ಅಭಿವೃದ್ಧಿಗಾಗಿ 11 ದಿನಗಳಿಂದ ಧರಣಿ ಕುಳಿತಿರುವ ಮಾಹಿತಿ ಇದ್ದರೂ ಸ್ಥಳಕ್ಕೆ ಬಾರದೆ ಇರುವುದು ಎಷ್ಟು ಸರಿ ಎಂದರು. ಪ್ರತಿಭಟನಾ ಸ್ಥಳಕ್ಕೆ ಜಿಲ್ಲಾಧಿಕಾರಿಗಳು ಬಂದು ಸೂಕ್ತ ನಿರ್ಧಾರಗಳನ್ನು ತಿಳಿಸುವ ವರೆಗೆ ನಮ್ಮ ಧರಣಿ ಸತ್ಯಾಗ್ರಹ ಮುಂದುವರೆಯುತ್ತದೆ. ಬರದೆ ಇದ್ದರೂ ತೊಂದರೆ ಇಲ್ಲ ಹೋರಾಟದ ಸ್ವರೂಪ ಬದಲಾಗುತ್ತದೆ ಎಂದರು.

ಇದೆ ಸಂದರ್ಭದಲ್ಲಿ ವಿಶ್ವನಾಥ ಕಾರ್ನಾಡ್,ಗ್ರಾಮದಮುಖಂಡರಾದ ಮಾರುತಿ ಮುರನ್ನತ್ತಿ,ರಾಜಕುಮಾರ ಉಕಲಿ, ಆಮೂಲ, ಪ್ರಿಯಾಂಕ್ ಪೂಜಾರಿ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಏ.30ರಿಂದ ಗಡಿನಾಡ ಉದ್ಭವ ಮೂರ್ತಿ ನಂದಿಬಸವೇಶ್ವರ ಜಾತ್ರೆಯ ಸಡಗರ ಪ್ರಾರಂಭ



ಮಲ್ಲಮ್ಮ ನುಡಿ ವಾರ್ತೆ

ಚಾಕೊಂಡಿ:ಏ.30ರಿಂದ ಗಡಿನಾಡ ಉದ್ಭವ ಮೂರ್ತಿ ನಂದಿಬಸವೇಶ್ವರ ಜಾತ್ರೆಯ ಸಡಗರ ಪ್ರಾರಂಭ ಸುದ್ದಿಗಾರರೊಂದಿಗೆ ಮಾತನಾಡಿದ ಮುಖಂಡ ಅರ್ಜುನ ಸೋಮಜಾಳ,ಪ್ರತಿವರ್ಷದಂತೆ ಈ ವರ್ಷವೂ ಕೂಡಾ ನಂದಿ ಬಸವೇಶ್ವರ ಜಾತ್ರೆಯು ಬಹು ವಿಜೃಂಭಣೆಯಿಂದನಡೆಯಲಿದ್ದು,ನಂದಿ ಬಸವೇಶ್ವರ ಇತಿಹಾಸ ನೋಡುವುದಾದರೆ ಗ್ರಾಮದ ಚಾಕೊಂಡಿ ಅವರ ಮನೆತನದ ದನಗಳ ಕೊಟ್ಟಿಗೆ ಈಗಿರುವ ದೇವಸ್ಥಾನವಾಗಿದ್ದು,ಚಾಕೊಂಡಿ ಮನೆತನದ ಹೆಣ್ಣುಮಗಳು ಕುಡುಗೋಲಿನಿಂದ ಕಸ ತೆಗೆಯಲು ಪ್ರಾರಂಭಿಸಿದಾಗ ನಂದಿಯ ಕೋಡಿಗೆ ತಗುಲಿ ರಕ್ತ ಬರಲು ಪ್ರಾರಂಭಿಸಿತು.ನಂತರ ಗ್ರಾಮದ ಹಿರಿಯರೆಲ್ಲರೂ ಸೇರಿ ಬಂದು ನೋಡಿದಾಗ ನಂದಿ ಬಸವನ ಮೂರ್ತಿ ಇರುವುದು ಮನಗಂಡು ಇಲ್ಲಿಯವರೆಗೆ ಗ್ರಾಮದ ಹಿರಿಯರ ಸಮುಖದಲ್ಲಿ ನಂದಿ ಬಸವೇಶ್ವರ ಜಾತ್ರೆ ನಡೆಯುತ್ತಾ ಬಂದಿದೆ ಎಂದರು.ನಂತರ ಮಾತನಾಡಿದ ಶಿಕ್ಷಕರಾದ ಶಿವಶರಣಪ್ಪ ಕಗ್ಗೊಡಿ ಯುಗಾದಿ ಹಬ್ಬದಂದು ನಂದಿ ಬಸವೇಶ್ವರ ದೇವಸ್ಥಾನದಿಂದ ಮಲ್ಲಿಕಾರ್ಜುನ ದೇವಸ್ಥಾನದಲ್ಲಿ ನಂದಿಕೋಲ ಪೋಜೆ ಆದನಂತರ ಒಂದು ತಿಂಗಳು ಪೂರ್ತಿಯಾಗಿ ದಿನನಿತ್ಯ ವಿಶೇಷ ಪೂಜೆಗಳು ದೇವಸ್ಥಾನದಲ್ಲಿ ಜರುಗುತ್ತವೆ.ಏ.30 ರಂದುಬೆಳಿಗ್ಗೆಯಿಂದಸಾಯಂಕಾಲದ ವರೆಗೆ ರುದ್ರಾಭಿಷೇಕ ನಡೆ-ಯುತ್ತದೆ. ನಂತರ ಹತ್ತು ಹಲವು ವಾದ್ಯಗಳೊಂದಿಗೆ ಕಳಸ ಮೆರವಣಿಗೆ ಪ್ರಾರಂಭವಾಗಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ನಡೆದುಕೊಂಡು ಬರುತ್ತದೆ. ನಂತರ ಮದ್ದು ಸುಡುವ ಕಾರ್ಯಕ್ರಮ ಅದೆ ದಿನ ನಸುಕಿನ ಜಾವ ನಡೆಯುತ್ತದೆ. ಮರುದಿನ ಮೆ.1 ರಂದು ಪುರಂತರ ಸೇವೆ ಆದ ನಂತರ ಗ್ರಾಮದ ಮುಖ್ಯ ರಸ್ತೆಗಳ ಮೂಲಕ ನಂದಿಕೋಲ ಮತ್ತು ಪಲ್ಲಕ್ಕಿ ಮೆರವಣಿಗೆ ಭಜನೆ ಸೇರಿದಂತೆ ಅನೇಕ ಕಲಾ ವೈಭೋಗಗಳೊಂದಿಗೆ ನಡೆಯುತ್ತದೆ. ನಂದಿ ಬಸವೇಶ್ವರ ಜಾತ್ರೆಯ ಮುಖ್ಯಗಟ್ಟ ಅದೆ ದಿನ ಸಾಯಂಕಾಲ 4 ಗಂಟೆಗೆ ಸಹಸ್ರ ಭಕ್ತರೊಟ್ಟಿಗೆ ನಂದಿ ಬಸವೇಶ್ವರ ತೊಟ್ಟಿಲು ಕಾರ್ಯಕ್ರಮ ಜರುಗುತ್ತದೆ ಎಂದರು.ತದನಂತರ ಮಾತನಾಡಿದ ಶರಣಬಸಪ್ಪ ಪಾಟೀಲ,ನಂದಿ ಬಸವೇಶ್ವರ ಜಾತ್ರಾ ಪ್ರಯುಕ್ತ ದಿನನಿತ್ಯ ದೇವಸ್ಥಾನದಲ್ಲಿ ಸತತ 5 ದಿನಗಳಿಂದ ಪುರಂತರ ಸೇವೆ ನಡೆಯುತ್ತದೆ.ಮೂರು ದಿನಗಳ ಭರ್ಜರಿ ಜಾತ್ರೆಗೆ ನಾಡಿನ ಮೂಲೆಮೂಲೆಗಳಿಂದ ಭಕ್ತರು ಹರಿದು ಬರುತ್ತಾರೆ. ಉದ್ಭವಲಿಂಗ ನಂದಿ ಬಸವೇಶ್ವರರಿಗೆ ಬೇಡಿ-ಕೊಂಡ ವರಗಳು ಈಡೇರಿರುವ ಉದಾಹರಣೆಗಳು ಕಣ್ಮುಂದೆಯೇ ಇವೆ. ಮೆ.2 ರಂದು ಸುಪ್ರಸಿದ್ಧ ಕಲಾವಿದರಿಂದ ಗೀ ಗೀ ಪದಗಳು ನಡೆಯುತ್ತವೆ. ಅದೆ ದಿನ ಸಾಯಂಕಾಲ ಸುಪ್ರಸಿದ್ಧ ಪೈಲ್ವಾನರಿಂದ ಜಂಗಿ ಕುಸ್ತಿಗಳು ಜರಗುತ್ತವೆ.ಸಮಸ್ತನಂದಿಬಸವೇಶ್ವರ ಭಕ್ತಾಧಿಗಳು ಜಾತ್ರೆಗೆ ಆಗಮಿಸಿ ನಂದಿ ಬಸವೇಶ್ವರ ದರ್ಶನ ಪಡೆದು ಪಾವನರಾಗಬೇಕು ಎಂದು ಮನವಿ ಮಾಡಿದರು

ನಂತರ ಮಾತನಾಡಿದ ರಾಜಕುಮಾರ ಪುಲಾರಿ ಕರ್ನಾಟಕದ ಗಡಿಯಲ್ಲಿರುವ ನಂದಿ ಬಸವೇಶ್ವರ ಜಾತ್ರೆಗೆ ಬರುವ ಭಕ್ತಾಧಿಗಳಿಗೆ ಹತ್ತಿರದಲ್ಲಿಯೇ ರೈಲು ಸಂಚಾರ ಸೇರಿದಂತೆ ವಾಹನ ಸೌಲಭ್ಯಗಳು ಇವೆ. ಗ್ರಾಮದ ದೇವಸ್ಥಾನದ ಆಡಳಿತ ಮಂಡಳಿಯ ಸದಸ್ಯರು ಭಕ್ತರಿಗಾಗಿ ಪ್ರಸಾದ ಸೇವೆ ಸೇರಿದಂತೆ ಎಲ್ಲಾ ರೀತಿಯ ಸೌಲಭ್ಯಗಳನ್ನು ಒದಗಿಸಿದ್ದಾರೆ. ಆದಕಾರಣ ನಂದಿ ಬಸವೇಶ್ವರ ಜಾತ್ರೆಯಲ್ಲಿ ಪಾಲ್ಗೊಂಡು ದರ್ಶನ ಪಡೆದು ಪಾವನರಾಗಬೇಕು ಎಂದರು.

ಇದೆ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಚನ್ನಬಸಪ್ಪ ಚಾಕೊಂಡಿ, ವಂಲ್ಲಿನಾಥ ಮಠಪತಿ,ಮಲ್ಲಣ್ಣ ರಡ್ಡಿ,ಚನ್ನಪ್ಪ ಠಕ್ಕಾ,ಅಶೋಕ ಪಾಟೀಲ,ಶ್ರೀಮಂತ ಪಾಟೀಲ, ಶರಣಬಸಪ್ಪ ಪಾಟೀಲ,ಶ್ರೀಶೈಲ ಪಾಟೀಲ,ಕಲ್ಯಾಣಿ ಚಲಗೇರಿ,ಫಲಾಲಸಿಂಗ ರಾಠೋಡ, ಅರವಿಂದ ದೊಡ್ಮನಿ, ಶರಣಪ್ಪ ದೊಡ್ಮನಿ,ಬಸಣ್ಣ ಕಲಶೆಟ್ಟಿ,ಬಸವರಾಜ ಗುತ್ತೇದಾರ,ಹಜರತ ಪಟೇಲ, ಅಣ್ಣಾರಾವ್ ಪಾಟೀಲ,ಸುಭಾಷ್ ಗುತ್ತೇದಾರ, ಹಣಮಯ್ಯ ಗುತ್ತೇದಾರ,ಮನೋಹರ ರಾಠೋಡ, ಅಶೋಕ ಜವಳಗಿ,ಶ್ರೀಶೈಲ ರಡ್ಡಿ,ನಾಗೇಶ ದುಧನಿ,ಸುರೇಶ ರಜಪೂತ,ಗುರಲಿಂಗಪ್ಪ ಪಾಟೀಲ, ಬಸಣ್ಣಾ ಹಡಪದ,ಶಾಂತಪ್ಪ ಚಲಗೇರಿ,ಗುರುಪಾದ ಬಾಲ್ಕುಂಡಿ,ಸೇರಿದಂತೆ ಗ್ರಾಮದ ಅನೇಕ ಮುಖಂಡರು ಉಪಸ್ಥಿತರಿದ್ದರು.

# ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಶರಣಬಸಪ್ಪ ದರ್ಶನಾಪೂರ ಅವರ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಏಪ್ರಿಲ್:28-ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಇದೇ ಏಪ್ರಿಲ್ 29 ಹಾಗೂ ಏಪ್ರಿಲ್ 30 ರಂದು ಯಾದಗಿರಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಈ ಕೆಳಕಂಡ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು.

ಇದೇ ಏಪ್ರಿಲ್ 29 ರಂದು ಬೆಳಿಗ್ಗೆ 10-30 ಗಂಟೆಗೆ ಯಾದಗಿರಿಗೆ ಆಗಮಿಸಿ ಸರ್ಕಾರಿ ಪದವಿ ಮಹಾವಿದ್ಯಾಲಯದಲ್ಲಿ ಸರ್ಕಾರಿ ನೌಕರರ ದಿನಾಚರಣೆ ಹಾಗೂ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸುವರು.

ನಂತರ ಮಧ್ಯಾಹ್ನ 12-30 ಗಂಟೆಗೆ

ಶಹಾಪೂರಗೆ ಆಗಮಿಸಿ, ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗವಹಿಸುವರು ಹಾಗೂ ಸಾರ್ವಜನಿಕ ಕುಂದುಕೊರತೆಗಳ ವಿಚಾರಣೆನಡೆಸುವರು.ತದನಂತರ ಸಂಜೆ 4-30 ಗಂಟೆಗೆ ಕಲಬುರಗಿಗೆ ಪ್ರಯಾಣ ಬೆಳೆಸುವರು.

ಏಪ್ರಿಲ್ 30 ರಂದು ಬೆಳಿಗ್ಗೆ 10-30 ಗಂಟೆಗೆ ಶಹಾಪುರ ಬಸವೇಶ್ವರನಗರ ಶ್ರೀಗದ್ದೆರಾಯನ ದೇವಸ್ಥಾನ ಇಲ್ಲಿ

ಶ್ರೀ ಬಸವಸೇವಾ ಸಂಘದ ವತಿಯಿಂದ ಆಯೋಜಿಸಿದ ಜಗಜ್ಯೋತಿಬಸವಣ್ಣನವರಮೂರ್ತಿ ಪ್ರತಿಷ್ಠಾಪನಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ನಂತರ ಸಂಜೆ 5 ಗಂಟೆಗೆ ಕಲಬುರಗಿಗೆ ಪ್ರಯಾಣ ಬೆಳೆಸುವರು.

# ಬುದ್ಧ ಜಯಂತಿ ಅರ್ಥಪೂರ್ಣ ಆಚರಣೆ: ಸಹಾಯಕ ಆಯುಕ್ತ ಪಿ.ಪ್ರಮೋದ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.28-ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಮೇ 12 ರಂದು ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮವನ್ನುಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಸಹಾಯಕ ಆಯುಕ್ತ ಪಿ.ಪ್ರಮೋದ್ ಅವರು ಹೇಳಿದರು.

ಸೋಮವಾರ, ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಭಗವಾನ್ ಬುದ್ಧ ಜಯಂತಿ ಆಚರಣೆ ಕುರಿತು ಆಯೋಜಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಭಗವಾನ್ ಬುದ್ಧನ ಜಯಂತಿ ಕಾರ್ಯಕ್ರಮವನ್ನು ಆಚರಿಸಲು ರಾಜ್ಯಸರ್ಕಾರದ ನಿರ್ದೇಶನವಿದ್ದು, ಜಿಲ್ಲಾ ಕೇಂದ್ರದಲ್ಲಿ ಅದ್ದೂರಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ಬೇಕಾದ ಎಲ್ಲಾ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಮೇ 12 ರಂದು ಸಂಜೆ 06.30 ಗಂಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮ ಆಚರಿಸಲು ನಿರ್ಧರಿಸಲಾಗಿದ್ದು, ಜಯಂತಿ ಕಾರ್ಯಕ್ರಮ ನಡೆಯುವ ಸ್ಥಳದ ಸ್ವಚ್ಛತೆ, ಆಸನಗಳ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಇತರೆ ವ್ಯವಸ್ಥೆ ಮಾಡಬೇಕು ಎಂದು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅಂದು ಸಂಜೆ 04.30 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜು ಮೈದಾನದಿಂದ ಜಯಂತಿ ಅಂಗವಾಗಿ ಭವ್ಯ ಮೆರವಣಿಗೆ ನಡೆಯಲಿದೆ. ಮೆರವಣಿಗೆಯು ಮುನಿಸಿಪಲ್ ಕಾಲೇಜು ಮೈದಾನ-ಗಡಿಗಿ ಚೆನ್ನಪ್ಪ ವೃತ್ತ-ಬೆಂಗಳೂರು ರಸ್ತೆ-ಬ್ರೂಸ್‌ಪೇಟೆ ಪೊಲೀಸ್ ಠಾಣೆ ಮುಂಭಾಗ-ಜೈನ್ ಮಾರ್ಕೆಟ್ ರಸ್ತೆ-ಹೆಚ್.ಆರ್. ಗವಿಯಪ್ಪವೃತ್ತ-ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ವೇದಿಕೆ ಕಾರ್ಯಕ್ರಮದವರೆಗೆ ನಡೆಯಲಿದೆ.

ಜಯಂತಿ ಆಚರಣೆ ಸಂದರ್ಭದಲ್ಲಿ ಶಿಷ್ಟಾಚಾರದನ್ವಯ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಲಾಗುವುದು. ಬುದ್ಧ ಗಾಯನ ಕಾರ್ಯಕ್ರಮ ಏರ್ಪಡಿಸಲಾಗುವುದು.ಮಹಾನ್ ವ್ಯಕ್ತಿಗಳ ವಿಚಾರಧಾರೆಗಳನ್ನು ಇಂದಿನ ಪೀಳಿಗೆಗೆ ಪರಿಚಯಿಸುವ ಅಗತ್ಯವಿದ್ದು, ಈ ನಿಟ್ಟಿನಲ್ಲಿ ನುರಿತ ಉಪನ್ಯಾಸಕರಿಂದ ವಿಶೇಷ ಉಪನ್ಯಾಸ ಆಯೋಜಿಸಲಾಗುವುದು ಎಂದರು.

ಜಯಂತಿ ಮೆರವಣಿಗೆಯಲ್ಲಿ ವಿವಿಧ ಸಾಂಸ್ಕೃತಿಕ ಕಲಾತಂಡಗಳನ್ನು ನಿಯೋಜಿಸಲಾಗುವುದು.ಜಯಂತಿ ಕಾರ್ಯಕ್ರಮಗಳಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಹಾಜರಿರಬೇಕು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಸೂಚಿಸಿದರು.

ಜಿಲ್ಲೆಯಲ್ಲಿ ಬುದ್ಧ ವಿಹಾರ ಧ್ಯಾನ ಕೇಂದ್ರ ಆರಂಭಿಸಬೇಕು ಎಂದು ಸಭೆಯಲ್ಲಿ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಪ್ರಸ್ತಾಪಿಸಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಮತ್ತೀತರರು ಉಪಸ್ಥಿತರಿದ್ದರು.

## ಆಲಿಕಲ್ಲು ಮಳೆಯಿಂದ ನೆಲಕಚ್ಚಿದ ಭತ್ತದ ಬೆಳೆ! ಕೈಗೆ ಬಂದ ತುತ್ತು ಬಾಯಿಗೆ ಬರಲಿಲ್ಲ:ರೈತನ ಅಳಲು, ಸರ್ಕಾರಕ್ಕೆ ಪರಿಹರ ಕೊಡಿಸುವಂತೆ ಮನವಿ.



ಯಾದಗಿರಿ ಜಿಲ್ಲೆಯ ಗುರುಮಿಟ್ಕಲ್ ತಾಲೂಕಿನ ಅರಕೆರ ಸಮೀಪದ ತಾತಳ ಗೇರ ಗ್ರಾಮದಲ್ಲಿ ರವಿವಾರ ಮಧ್ಯಾಹ್ನ ಸುರಿದ ಮಳೆಗೆ 60 ಎಕರೆಗಿಂತ ಅಧಿಕ ಭತ್ತದ ಬೆಳೆ ನಾಶವಾಗಿದೆ.

ಹಳ್ಳಿಗಳಲ್ಲಿ ಗುಡುಗು ಸಹಿತ ಭಾರೀ ಬಿರು ಗಾಳಿ ಬೀಸಿ ಆಲಿಕಲ್ಲು ಮಳೆ ಸುರದಿದ್ದರಿಂದ ಬತ್ತ ಸಂಪೂರ್ಣ ನೆಲಕ್ಕೆ ಬಿದ್ದಿದೆ

ಇದರಿಂದಾಗಿ ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿದೆ.

ಈ ಬೆಳೆನಾಶದ ಬಗ್ಗೆ ಗ್ರಾಮದ ರೈತರು ಮಳೆಯಿಂದ ಸಂಪೂರ್ಣ ಬತ್ತ ನಾಶವಾಗಿದ್ದರಿಂದ ಸರ್ಕಾರಕ್ಕೆ ತಮ್ಮ ಅಳಲನ್ನು ತೋಡಿಕೊಂಡಿದ್ದಾರೆ. ಇದಕ್ಕೆ ಸಂಬಂಧ ಪಟ್ಟ ಅಧಿಕಾರಿಗಳು ಜಮೀನಿಗೆ ಆಗಮಿಸಿ, ಬೆಳೆ ನಷ್ಟ ವೀಕ್ಷಿಸಿ ರೈತರಿಗೆ ಪರಿಹಾರ ಕೊಡುವದಾಗಿ ವಿನಂತಿ ಮಾಡಿ ಕೊಂಡರು.

# ಏ.29 ರಂದು ಬಳ್ಳಾರಿ ವಲಯ ಐ.ಜಿ.ಪಿ ಅವರ ನಿವೃತ್ತಿ ಬೀಳ್ಕೊಡುಗೆ ಸಮಾರಂಭ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.28–ಬಳ್ಳಾರಿ ವಲಯ ಪೊಲೀಸ್ ಮಹಾನಿರೀಕ್ಷಕರಾದ ಬಿ.ಎಸ್.ಲೋಕೇಶ್ ಕುಮಾರ್ ಅವರ ನಿವೃತ್ತಿ ಹಿನ್ನಲೆಯಲ್ಲಿ ಏ.29 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕೋಟೆ ಪ್ರದೇಶದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸನ್ಮಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಅದೇ ದಿನದಂದು ಸಂಜೆ 4.30 ಗಂಟೆಗೆ ಜಿಲ್ಲಾ ಸಶಸ್ತ್ರ ಪೊಲೀಸ್ ಕವಾಯತು ಮೈದಾನದಲ್ಲಿ ಬೀಳ್ಕೊಡುಗೆ ಸಮಾರಂಭ ಅಂಗವಾಗಿ ಸೇವಾ ಕವಾಯತು ಆಯೋಜಿಸಲಾಗಿದೆ.


ಬಳ್ಳಾರಿ ವಲಯ ಪೊಲೀಸ್ ಮಹಾ ನಿರೀಕ್ಷಕರಾದ ಬಿ.ಎಸ್. ಲೋಕೇಶ್ ಕುಮಾರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ.ಶೋಭಾ ರಾಣಿ ವಿ.ಜೆ ಅವರು ಸಮಾರಂಭದ ಅಧ್ಯಕ್ಷತೆ ವಹಿಸುವರು.

ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಕೆ.ಪಿ.ರವಿಕುಮಾರ್, ಎಸ್.ನವೀನ್ ಕುಮಾರ್ ಸೇರಿದಂತೆ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ ಹಾಗೂ ಇನ್ನಿತರರು ಉಪಸ್ಥಿತರಿರುವರು ಎಂದು ಜಿಲ್ಲಾ ಪೊಲೀಸ್ ಇಲಾಖೆ ಪ್ರಕಟಣೆ ತಿಳಿಸಿದೆ.

# ಬೇಸಗೆ ಸಮಯದಲ್ಲಿ,ಕಚೇರಿ ಸಮಯ ಬದಲಾದರು ಸರಿಯಾದ ಸಮಯಕ್ಕೆ ಬಾರದ ಅಧಿಕಾರಿಗಳು



(ವೀರಯ್ಯ ವಿ ಹಿರೇಮಠ)

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಬೇಸಿಗೆ ಬಿಸಿಲಿನ ತಾಪದಿಂದ ನೌಕರರು ಸುಸ್ತಾಗದೆ ಇರಲಿ ಎಂದು ಸರ್ಕಾರಿ ಕಚೇರಿ ವೇಳೆಯನ್ನು ಸರ್ಕಾರ ಬದಲಿಸಿದ್ದರು ಕೂಡಾ ಅನುಕೂಲ ಮಾಡಿಕೊಳ್ಳದೆ ಜಿಲ್ಲೆಯಲ್ಲಿ ನೌಕರರು ಸೇರಿದಂತೆ ಅನೇಕರು ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ.

ಬದಲಾದ ವೇಳೆಯಂತೆ ಬೆಳಿಗ್ಗೆ 8 ರಿಂದ ಮಧ್ಯಾಹ್ನ 1.30ರ ವರಗೆ ಸರ್ಕಾರಿ ಕಚೇರಿಗೆ ಅಧಿಕಾರಿಗಳು ಆಗಮಿಸಿ ಕಾರ್ಯನಿರ್ವಹಿಸಬೇಕು. ಆದರೆ, ಜಿಲ್ಲೆಯ ಬಹುತೇಕ ಸರ್ಕಾರಿ ಕಚೇರಿಗಳಲ್ಲಿ ಬೆಳಿಗ್ಗೆ 8ಕ್ಕೆ 'ಡಿ' ಗ್ರೂಫ್ ನೌಕರರನ್ನು ಬಿಟ್ಟರೆ ಇಲಾಖೆಯ ಮುಖ್ಯಸ್ಥರು ಸೇರಿದಂತೆ ಪ್ರಮುಖ ಸಿಬ್ಬಂದಿಗಳು ಸರಿಯಾದ ಸಮಯಕ್ಕೆ ಆಗ–ಮಿಸದೇ ಯತಾವತ್ 10: 00 ಗಂಟೆಗೂ ವಿಳಂಬವಾಗಿ ಕಚೇರಿಗೆ ಆಗಮಿಸುತ್ತಿರುವುದು ಮಾಮೂಲಾಗಿದೆ.

ಈ ಸಂಬಂಧ ಸೋಮವಾರ 'ಮಲ್ಲಮ್ಮನುಡಿ ದಿನಪತ್ರಿಕೆ ಪ್ರತಿನಿಧಿ ಕೊಪ್ಪಳದ ಜಿಲ್ಲಾಡಳಿತ ಭವನದ ವಿವಿಧ ಇಲಾಖೆಗಳ ಕಚೇರಿಗೆ ಭೇಟಿ ನೀಡಿ ಪರಿಶೀಲಿಸಿದಾಗ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಕಛೇರಿ, ಸೇರಿದಂತೆ ಯಾವೊಂದು ಇಲಾಖೆ ಕಚೇ–ರಿಯ ಮುಖ್ಯಸ್ಥರು ಕಚೇರಿಗೆ ಆಗಮಿಸಿರಲಿಲ್ಲ ಎಂಬುದು ವಿಪರ್ಯಾಸದ ಸಂಗತಿಯಾಗಿದೆ.

ಬೆಳಿಗ್ಗೆ 10,00 ಗಂಟೆಯಾದರೂ ಕಚೇರಿಗಳು ಬಣಗುಡುತ್ತಿದ್ದವು, 'ಡಿ'ಗ್ರೂಫ್ ನೌಕರರು ಕಚೇರಿ ಬಾಗಿಲು ತೆರೆದು, ಸ್ವಚ್ಛಗೊಳಿಸಿ, ವಿದ್ಯುತ್ ದೀಪ, ಫ್ಯಾನ್, ಎಸಿ ಹಚ್ಚಿಟ್ಟು ಅಧಿಕಾರಿಗಳ ಆಗಮನಕ್ಕಾಗಿ ಕಾದುಕುಳಿತಿದ್ದ ದೃಶ್ಯಗಳು ಸರ್ವೆ ಸಾಮಾನ್ಯವಾಗಿ ಕಂಡುಬರುತ್ತಿದೆ.

ಕೆಲವು ಸಿಬ್ಬಂದಿ ಅರ್ಧ, ಮುಕ್ಕಾಲು ಗಂಟೆ ವಿಳಂಬವಾಗಿ ಆಗಮಿಸಿದ್ದರೂ ಕೂಡ ಕೆಲಸದಲ್ಲಿ ನಿರತರಾಗಿರದೇ ಮೊಬೈಲ್ ನೋಡುವುದರಲ್ಲಿ, ಹರಟೆ ಹೊಡೆಯೋತ್ತಾರೆ. ಮತ್ತೆ ಕೆಲವರು ಕ್ಯಾಂಟಿನ್‌ನಲ್ಲಿ ಬೆಳಗ್ಗಿನ ಉಪಾಹಾರ ಸೇವನೆಯಲ್ಲಿ ತೊಡಗಿರುವುದು ಕಂಡುಬಂದಿತು.

ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಪಂಚಾಯ್ತಿ ಕಾರ್ಯಪಾಲಕ ಎಂಜಿನಿಯರ್ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಅಕ್ಷರ ದಾಸೋಹ ಇಲಾಖೆ, ಕರ್ನಾಟಕ ಗೃಹ ಮಂಡಳಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಜಲಾನಯನ ಅಭಿವೃದ್ಧಿ ಇಲಾಖೆ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ಇಲಾಖೆಯ ಮುಖ್ಯಸ್ಥರು ಬೆಳಿಗ್ಗೆ 10 ಗಂಟೆಯಾದರೂ ಕಚೇರಿಗೆ ಆಗಮಿಸುತ್ತಿಲ್ಲ ಎಂಬ ಆರೋಪ ಕೇಳಿ ಬಂದಿದೆ.

# ಮೇ 14 ರಂದು ಕುಂದು–ಕೊರತೆಗಳ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.28–ಬಳ್ಳಾರಿ ತಾಲ್ಲೂಕಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಜನಾಂಗದವರ ಸಮಸ್ಯೆಗಳನ್ನು ಆಲಿಸಿ, ಪರಿಹರಿಸಲು ಬಳ್ಳಾರಿ ತಾಲ್ಲೂಕು ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಕುಂದುಕೊರತೆ ಸಭೆಯನ್ನು ಮೇ 14 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಕೌಲ್ ಬಜಾರ್ ನ 1ನೇ ರೈಲ್ವೇ ಗೇಟ್ ಬಳಿಯ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದೆ.

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ: ಪ್ರವೇಶ ಪರೀಕ್ಷೆ ಸುಸೂತ್ರ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.28–ಜಿಲ್ಲೆಯಲ್ಲಿ ಅಲ್ಪಸಂಖ್ಯಾತರಕಲ್ಯಾಣಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ (ಆಂಗ್ಲ ಮಾಧ್ಯಮ) ಶಾಲೆ ಮತ್ತು ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ (ಸಿಬಿಎಸ್‌ಸಿ) ಶಾಲೆಗಳ ದಾಖಲಾತಿಗಾಗಿ 2025–26 ನೇ ಶೈಕ್ಷಣಿಕ ವರ್ಷಕ್ಕೆ 6ನೇ ತರಗತಿ ಪ್ರವೇಶ ಪರೀಕ್ಷೆಯು ಭಾನುವಾರ ಸುಸೂತ್ರವಾಗಿ ನಡೆದಿದೆ.

ಜಿಲ್ಲೆಯಾದ್ಯಂತ ಒಟ್ಟು 1571 ಅರ್ಜಿಗಳು ಸಲ್ಲಿಕೆಯಾಗಿದ್ದವು. 05 ಕೇಂದ್ರಗಳಲ್ಲಿ ಪ್ರವೇಶ ಪರೀಕ್ಷೆ ನಡೆದಿದ್ದು, 595 ಗಂಡು ಮತ್ತು 473 ಹೆಣ್ಣು ಸೇರಿ ಒಟ್ಟು 1038 ವಿದ್ಯಾರ್ಥಿಗಳು ಹಾಜರಾಗಿದ್ದರು. ಅದರಲ್ಲಿ 503 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ ಅವರು ತಿಳಿಸಿದ್ದಾರೆ.

# ಇಂದು ಬಸವೇಶ್ವರ ಜಾತ್ರೆ ಪ್ರಯುಕ್ತ ಉದ್ಯೋಗ ಮೇಳ.

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: – ಏ 28 ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಮತ್ತು ವಿಶ್ವಸ್ಥ ಸಮಿತಿ ವತಿಯಿಂದ ಶ್ರೀ ಬಸವೇಶ್ವರ ಜಾತ್ರೆ ಅಮೃತ ಮಹೋತ್ಸವ ಪ್ರಯುಕ್ತ ಶ್ರೀ ಬಸವೇಶ್ವರ ಐಟಿಐ ಕಾಲೇಜಿನಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಉದ್ಯೋಗ ಮೇಳವನ್ನು ಮುಚಳಂಬನ ಪೂಜ್ಯಶ್ರೀ ಪ್ರಣಾವಾನಂದ ಮಹಾಸ್ವಾಮಿಗಳು ಉದ್ಘಾಟಿಸಿ, ಮಾತನಾಡಿ ಉದ್ಯೋಗ ಮೇಳದಲ್ಲಿ ಹಲವಾರು ಜನ ಭಾಗವಹಿ ಕೆಲಸ ಗಿಟ್ಟಿಸಿಕೊಂಡ ಜೀವನ ಸುಧಾರಿಸಿಕೊಳ್ಳಬೇಕು ಎಂದರು.

ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಮತ್ತು ವಿಶ್ವಸ್ಥ ಸಮಿತಿ ವತಿಯಿಂದ ಬಸವೇಶ್ವರ ಜಾತ್ರಾ ಅಮೃತ ಮಹೋತ್ಸವ ಪ್ರಯುಕ್ತ ಹಮ್ಮಿಕೊಂಡಿದ್ದ ಈ ಮೇಳ ಎಲ್ಲರಿಗೂ ಸದುಪಯೋಗವಾಗಲಿ. ಪಂಚ ಕಮಿಟಿ ಮತ್ತು ವಿಶ್ವಸ್ಥ ಸಮಿತಿ ಈ ಭಾಗದಲ್ಲಿ ಸಾಮಾಜಿಕ, ಸಾಂಸ್ಕೃತಿಕ, ಆರ್ಥಿಕ, ಧಾರ್ಮಿಕ ಕೆಲಸದಲ್ಲಿ ಅಗ್ರಸ್ಥಾನ ಪಡೆದಿದೆ ಎಂದರು.

ಬಿಡಿಪಿಸಿ ಅಧ್ಯಕ್ಷ ಬಸವರಾಜ ಕೋರಕೆ ಅಧ್ಯಕ್ಷತೆ ವಹಿಸಿದ್ದರು.


ಬಿಡಿವಿಸಿ ಅಧ್ಯಕ್ಷ ಶಶಿಕಾಂತ ದುರ್ಗೆ, ಬಿಡಿಪಿಸಿ ಉಪಾಧ್ಯಕ್ಷ ಮಲ್ಲಿಕಾರ್ಜುನ ಚಿರಡೆ, ಕೋಶಾಧ್ಯಕ್ಷ ರಾಜಕುಮಾರ ಹೊಳಕುಂದೆ, ಕಾರ್ಯದರ್ಶಿ ಶ್ರೀಕಾಂತ ಬಡದಾಳೆ, ಸಹ ಕಾರ್ಯದರ್ಶಿ ವಿವೇಕಾನಂದ ಹೊದಲೂರೆ, ನಿರ್ದೇಶಕರಾದ ವೀರಣ್ಣ ಹಲಶೆಟ್ಟೆ, ಸುಭಾಷ ಹೊಳಕುಂದೆ, ಅಶೋಕ ನಾಗರಾಳೆ, ಜಗನ್ನಾಥ ಖೂಬಾ, ಭದ್ರಿನಾಥ ಪಾಟೀಲ, ಅನಿಲಕುಮಾರ ರಗ–ಟೆ, ರೇವಣಪ್ಪಾ ರಾಯವಾಡೆ, ಬಿಡಿವಿಸಿ ಉಪಾಧ್ಯಕ್ಷ ಡಾ ಜಿ. ಎಸ್. ಭುರಾಳೆ, ಬಿಡಿವಿಸಿಯ ನಾಗಯ್ಯ ಸ್ವಾಮಿ, ಸಂದೀಪ ಪಾಟೀಲ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಆಕಾಶ ಖಂಡಾಳೆ ಪ್ರಾಸ್ತಾವಿಕ ಮಾತನಾಡಿದರು. ಪ್ರಾಚಾರ್ಯ ಜ್ಞಾನ ರೆಡ್ಡಿ ಬೋಳಿಂಗೆ ಸ್ವಾಗತಿಸಿದರು. ಜಗನ್ನಾಥ ಖ್ಯಾಡೆ ನಿರೂಪಿಸಿದರು. ರಾಜಕುಮಾರ ನಾಗರಾಳೆ ವಂದಿಸಿದರು. ಈ ಸಂದರ್ಭದಲ್ಲಿ ದಲ್ಲಿ 250 ರಲ್ಲಿ

ಭಾರತ ಫೋರ್ಜ್ ಲಿಮಿಟೆಡ್ ನಲ್ಲಿ 21, ಕಿಯೋನ್ ಇಂಡಿಂ–ಯಾ ಪ್ರೈವೇಟ್ ಲಿಮಿಟೆಡ್ ನಲ್ಲಿ 40, ಗುರು ಯುವಶಕ್ತಿ ಪ್ರೈವೇಟ್ ಲಿಮಿಟೆಡ್ ನಲ್ಲಿ 45, ವಾಲಿಯೋ ದಲ್ಲಿ 11 ಸೇರಿ ವಿವಿಧ ಪ್ರೈವೇಟ್ ಕಂಪನಿ ಲಿಮಿಟೆಡ್ ನಲ್ಲಿ ಒಟ್ಟು 141 ಜನರಿಗೆ ಉದ್ಯೋಗದ ನೇಮಕಾತಿಯ ಆದೇಶ ಪತ್ರ ನೀಡಲಾಯಿತು.

# ಅದ್ದೂರಿಯಾಗಿ ಜರುಗಿದ ಭಟಪನಹಳ್ಳಿಯ ಶ್ರೀ ಭೀಮಾಂಬಿಕಾ ದೇವಿಯ 28 ನೇ ವರ್ಷದ ಜಾತ್ರಾ ಮಹೋತ್ಸವ





ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಕುಕನೂರ ತಾಲೂಕಿನ ಭಟಪನಹಳ್ಳಿಯ ಭಕ್ತರು ಭಾಗ್ಯವಂತರು ಪುಣ್ಯವಂತರು ಇದ್ದಾರೆ ಮುಂದಿನ ವರ್ಷದಲ್ಲಿ ನೂತನ ತೇರು ಎಳೆಯುವದಕ್ಕೆ ಸಜ್ಜಾಗಿರುವದು ಈ ಭಕ್ತರ ದಾನ ಧರ್ಮ ಅಪಾರವಾಗಿದೆ ಎಂದು ಶಿರಹಟ್ಟಿಯ ಫಕೀರಸಿದ್ದರಾಮ ಸ್ವಾಮೀಜಿ ಅವರು ಕೊಪ್ಪಳ ಜಿಲ್ಲೇಯ ಕುಕನೂರ ತಾಲೂಕಿನ ಭಟಪನಹಳ್ಳಿ ಗ್ರಾಮದ ಶ್ರೀ ಭೀಮಾಂಬಿಕೆ ದೇವಿಯ ಮಠದಲ್ಲಿ 28 ನೆ ವರ್ಷದ, ಶ್ರೀ ಕಲ್ಲಿನಾಥ ಕವಿಗಳು ದ್ಯಾಂಪೂರ ವಿರಚಿತ ಮಹಾ ಶಿವಶರಣೆ ಶ್ರೀ ಭೀಮಾಂಬಿಕ ದೇವಿಯ ಜಾತ್ರಾ ಮಹೋತ್ಸವ, ಪುರಾಣ ಮಹಾ ಮಂಗಲೋತ್ಸವ, ಸಾಮೂಹಿಕ ವಿವಾಹ ಕಾರ್ಯಕ್ರಮಗಳು ಎ.28 ರಂದು ಸೋಮವಾರ ಬೆಳಿಗ್ಗೆ 11.30 ಗಂಟೆಗೆ ಜರುಗಿದ ಸಮಯದಲ್ಲಿ ಸಾನಿದ್ಯವಹಿಸಿ ಮಾತನಾಡಿದರು. ಕುಕನೂರಿನ ಡಾ.ಮಹಾದೇವ ಸ್ವಾಮೀಜಿ ಅವರು ಮಾತನಾಡಿ ಸಾಮೂಹಿಕ ವಿವಾಹಗಳು ಬಡವರ ಪಾಲಿಗೆ ವರದಾನವಾಗಿವೆ ಇದರಿಂದ ಅತಿಯಾದದುಂದುವೆಚ್ಚತಡೆಯಲು ಸಾಧ್ಯವಾಗುತ್ತದೆ ಎಂದರು. ಕಾಟ್ರಳ್ಳಿಯ ಶಾಂತವೀರಯ್ಯ ಶಾಸ್ತ್ರಿ ಪುರಾಣ ಪ್ರವಚನ ನೀಡಿದರು., ಸಂಗೀತ ಬಳಗದ ಗವಾಯಿಗಳಾದ ಕಲಬರ್ಗಿಯ ಕುಮಾರ ಶಶಿಧರ ಗವಾಯಿಗಳು, ಕುರಹಟ್ಟಿಯ ಬಸವರಾಜ ಹುಯಿಲಗೋಳ ಕಲ್ಲಯ್ಯ ಹಿರೇಗೌಡ್ರ ಕಲ್ಲೂರ, ಇವರು ಸಂಗೀತ ಸೇವೆ ನೀಡಿದರು. ಹಾಗು ಭಟಪನಹಳ್ಳಿಯ ಭಾವಿಕಟ್ಟಿ ಕಟ್ಟಿಮನಿಯವರು ಮಾಂಗಲ್ಯ ಕಾರ್ಯದಲ್ಲಿ ಭಾಗವಹಿಸಿದ್ದರು., ಪುರಾಣ ಕಾರ್ಯಕ್ರಮದಲ್ಲಿ ಶ್ರೀ ಭೀಮಾಂಬಿಕಾದೇವಿ ತೆ–ೂಟ್ಟಿಲ ಕಾರ್ಯಕ್ರಮ, ಮದುವೆ ಸೀಮಂತ ಕಾರ್ಯಕ್ರಮಗಳು ಸೇರಿದಂತೆ ಇತರ ಧಾರ್ಮಿಕ ಕಾರ್ಯಕ್ರಮಗಳು ಸಾಗಿ ಬಂದು. ಎ.28 ರಂದು 13 ಜೋಡಿ ಸಾಮೂಹಿಕ ವಿವಾಹಗಳು ಜರುಗಿದವು.

ಕಾರ್ಯಕ್ರಮದಲ್ಲಿ ನಿವೃತ್ತ ಲೋಕಸೇವಾ ಆಯೋಗದ ಸದಸ್ಯ ಎಚ್.ಡಿ.ಪಾಟೀಲ ಅವರು ಮಾತನಾಡಿ ಸಾಮೂಹಿಕ ವಿವಾಹಗಳು ಅದ್ದೂರಿಯಾಗಿ ಜರುಗಲು ಪ್ರತಿಯೊಬ್ಬರೂ ನಿರಂತರವಾಗಿ ಶ್ರಮಿಸಿದ್ದಾರೆ ಇವರ ಕಾರ್ಯ ಶ್ಲಾಘನಿಯವಾದದು, ಕಾರ್ಯಕ್ರಮ ಯಶಸ್ವಿಗೆ ತಮ್ಮೆಲ್ಲರ ಸಹಕಾರ ಮುಖ್ಯವಾಗಿದೆ ಎಂದರು. ಹುಚ್ಚಿರಯ್ಯ ಭದ್ರಾಪೂರ, ವಿರೂಪಾಕ್ಷಯ್ಯ ಗುರುವಿನ, ಮಹಾದೇವಯ್ಯ ತುರುವಿಹಾಳ, ದೇವಪ್ಪ ಭಾವಿಕಟ್ಟಿ, ಮುಖಂಡರಾದ ಯಲ್ಲಪ್ಪ ದೇವರಳ್ಳಿ, ಪರಸಪ್ಪ ಹೊಸಮನಿ, ರಾಜಶೇಖರ ಕರವುಡಿ, ಹಂಚ್ಯಾಲಪ್ಪ ಕಲ್ಗೋಡಿ, ಮಹೇಶ ದೊಡ್ಡಮನಿ, ಶರಣಪ್ಪ ಹಾದಿಮನಿ, ಮಲ್ಲಪ್ಪ ಗುಡಿಹಿಂದಲ, ಭೀಮಣ್ಣ ಉದ್ದಾರ, ದೇವಪ್ಪ ಭಿ.ಭಾವಿಕಟ್ಟಿ, ಮುದಿಯಪ್ಪ ಪೂಜಾರ, ಚೆನ್ನಪ್ಪ ವಾಲಿಕಾರ, ಶರಣಬಸಪ್ಪ ದಾನಕೈ, ದೇವಿಂದ್ರಪ್ಪ ಹುರಿಗೆಜ್ಜಿ, ಮಲ್ಲಿಕಾರ್ಜುನ ಕರಮುಡಿ, ಯಲ್ಲಪ್ಪ ಪೊತುಂಡಿ, ರಾಮಚಂದ್ರಪ್ಪ ಗುರಿಕಾರ, ಬಸವರಾಜ ಭಾವಿಕಟ್ಟಿ, ಕಿರಣ ಗುದ್ಯಾಡಿ, ವಿಜಯಕುಮಾರ ಕಾಗಿ, ಬಸಪ್ಪ ಕುಡಗುಂಟಿ, ಶ್ರೀಧರ ಹೊಸಮನಿ, ಶರಣಪ್ಪ ದೊಡ್ಡಮನಿ, ಹನುಮಪ್ಪ ಗಾಳಿ, ಸೇರಿದಂತೆ ಇತರರು ಇದ್ದರು. ಪ್ರತಿ ನಿತ್ಯ ಅಮ್ಮನ ಜೀವನ ಚರಿತ್ರೆ, ಪವಾಡಗಳ ಕಾರ್ಯಕ್ರಮ ಸಾಗಿಬಂದು ಎ.28 ರಂದು ಸಂಜೆ 5 ಗಂಟೆಗೆ ಶ್ರೀ ಭೀಮಾಂಬಿಕಾದೇವಿಯ ಲಘು ರಥೋತ್ಸವ ಜರುಗಿತು. ರಾತ್ರಿ 9.30 ಗಂಟೆಗೆ ಸಾಮಾಜಿಕ ನಾಟಕ ದಿಲ್ಲಿ ಹೊಕ್ಕ ಪುಂಡ ಹುಲಿ ನಾಟಕವನ್ನು ಶ್ರೀ ಭೀಮಾಂಬಿಕಾ ನಾಟ್ಯ ಸಂಘದವರು ಅಭಿನಯಿಸಿದರು.

### ರಂಗಭೂಮಿ ಕಲಾವಿದರೊಂದಿಗೆ ಸಮಾಲೋಚನಾ ಸಭೆ

# ಬಳ್ಳಾರಿಯು ರಂಗಭೂಮಿಯ ತವರೂರು: ಡಾ.ಸುಜಾತ ಜಂಗಮಶೆಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.28–ಬಳ್ಳಾರಿ ಜಿಲ್ಲೆಯು ರಂಗಭೂಮಿಯ ತವರೂರರಾಗಿದೆ ಎಂದು ಕಲಬುರಗಿ ರಂಗಾಯಣದ ನಿರ್ದೇಶಕರಾದ ಡಾ.ಸುಜಾತ ಜಂಗಮಶೆಟ್ಟಿ ಅವರು ಹೇಳಿದರು.

ನಗರದ ಡಾ.ರಾಜ್ ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ಹೊಂಗಿರಣ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ರಂಗಭೂಮಿ ಕಲಾವಿದರೊಂದಿಗೆ ಸಮಾಲೋಚನಾ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕಲಬುರಗಿ ರಂಗಾಯಣವು ಕಲ್ಯಾಣ ಕರ್ನಾಟಕ ಭಾಗದ ಏಳು ಜಿಲ್ಲೆಗಳಿಗೂ ಹೊಂದಿಕೊಂಡಿದೆ. ಕಲಬುರಗಿ ರಂಗಾಯಣವನ್ನು ಕ.ಕ ಭಾಗದ ಹೋಬಳಿ ಮಟ್ಟದಲ್ಲಿಯೂ ತಲುಪಬೇಕು ಎಂಬುದು ಕಲಬುರಗಿ ರಂಗಾಯಣದ ಮುಖ್ಯ ಉದ್ದೇಶವಾಗಿದೆ ಎಂದರು.

ಬಳ್ಳಾರಿ ಜಿಲ್ಲೆಗೆ ಡಾ.ಜೋಳದರಾಶಿ ದೊಡ್ಡನಗೌಡ, ರಾಘವ, ಬೆಳಗಲ್ಲು ವೀರಣ್ಣ, ಸುಭದ್ರಮ್ಮ ಮಾನ್ಸೂರು ಸೇರಿದಂತೆ ಹಲವಾರು ಗಣ್ಯರ ಕೊಡುಗೆ ಅಪಾರವಿದೆ ಎಂದು ತಿಳಿಸಿದರು. ಪ್ರಸ್ತುತದಲ್ಲಿ ರಂಗಭೂಮಿಯು ಅಳಿವಿಂಚಿನಲ್ಲಿದೆ. ರಂಗ ಕಲೆಯನ್ನು ಮತ್ತು ರಂಗಭೂಮಿ ಕಲಾವಿದರನ್ನು ಪ್ರೋತ್ಸಾಹಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ಯುವಪೀಳಿಗೆಯು ಸಹ ರಂಗ ಪ್ರವೇಶಿಸಲು ಶಾಲಾ–ಕಾಲೇಜುಗಳಲ್ಲಿ ನಾಟಕ ರಂಗದ ಕುರಿತು ಅರಿವು ಸಂವಾದ ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ಹೇಳಿದರು.

**ರಂಗದಂಗಳದಲ್ಲಿ ಮಾತುಕತೆ:**

ಕಲಬುರಗಿ ವ್ಯಾಪ್ತಿಯ ಏಳು ಜಿಲ್ಲೆಗಳಲ್ಲಿನ ರಂಗಕಲಾವಿದರನ್ನು ಜೊತೆಗೂಡಿಸಿ ರಂಗನಾಟಕ ಉಳಿಯುವಿಕೆ ಮತ್ತು ಬೆಳೆಸುವಿಕೆಗೆ ಅನಿಸಿಕೆ–ಅಭಿಪ್ರಾಯಗಳನ್ನು ಸಂಗ್ರಹಿಸಲು 'ರಂಗದಂಗಳದಲ್ಲಿ ಮಾತುಕತೆ' ಸಭೆ ಏರ್ಪಡಿಸಲಾಗುವುದು ಎಂದರು.

*ನಾಟಕ ರಚನಾ ಶಿಬಿರ:*

ಕ.ಕ ಭಾಗದಲ್ಲಿ ಇನ್ನು ಹಳೆಯ ನಾಟಕ ಶೈಲಿ ಒಳಗೊಂಡಿದೆ. ಇದನ್ನು ಹೊಸ ಶೈಲಿಗೆ ಅಭಿವೃದ್ಧಿ ಪಡಿಸಬೇಕಿದೆ ಮತ್ತು ಹೊಸ ನಾಟಕಕಾರರನ್ನು ಪರಿಚಯಿಸಬೇಕಿದೆ. ಈ ನಿಟ್ಟಿನಲ್ಲಿ ರಂಗಾಯಣದಿಂದ ನಾಟಕ ರಚನಾ ಶಿಬಿರ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು. ಪೋಷಕರು ಮಕ್ಕಳಿಗೆ ರಂಗಭೂಮಿಯ ಕುರಿತು ಆಸಕ್ತಿ ಮೂಡಿಸಬೇಕಿದೆ. ಶಾಲಾ–ಕಾಲೇಜುಗಳಲ್ಲಿ ನಾಟಕಕಾರರನ್ನು ಕರೆಯಿಸಿ ನಾಟಕ ಪ್ರದರ್ಶನ, ನಾಟಕ ಕುರಿತು ಸಂವಾದ ಕಾರ್ಯಕ್ರಮ ಆಯೋಜಿಸುವಂತೆ ಕ್ರಮವಹಿಸಲಾಗುವುದು ಎಂದರು.

ಈ ಭಾಗದ ಬಯಲಾಟ, ದೊಡ್ಡಾಟ ಮತ್ತು ತೊಗಲು ಗೊಂಬೆಯಾಟ ರಂಗಕಲೆಯನ್ನು ಉಳಿಸುವ ಮತ್ತು ಬೆಳೆಸುವ ಜವಾಬ್ದಾರಿ ನಮ್ಮ ಮೇಲಿದೆ. ಕಲೆ ಕುರಿತು ತರಬೇತಿ ನೀಡಲು, ಕಲೆ ಉಳಿಸಲು ಒಂದು ವಾರದ ಶಿಬಿರ ಆಯೋಜಿಸಲಾಗುವುದು. ಇದರಲ್ಲಿ ಲಿಂಗತ್ವ ಅಲ್ಪಸಂಖ್ಯಾತರು ಸಹ ಭಾಗವಹಿಸಲು ಒಲವು ತೋರಿಸುತ್ತಿದ್ದು, ಅವರಿಗೂ ಸಹ ಅವಕಾಶ ಕಲ್ಪಿಸಬೇಕಿದೆ ಎಂದರು.

ಗಡಿ ಭಾಗದ ಮರಾಠಿ, ತೆಲುಗು ಭಾಷೆ ರಂಗಭೂಮಿಯೊಂದಿಗೆ ಹೊಂದಿಕೊಂಡು ನಾಟಕ ಶಿಬಿರ ಹಮ್ಮಿಕೊಳ್ಳಲಾಗುವುದು. ಇದರಿಂದ ಅಲ್ಲಿನ ನಾಟಕ ಶೈಲಿ, ಆಯಾಮಗಳನ್ನು ಪರಿಚಯಿಸಿಕೊಳ್ಳಬೇಕಿದೆ. ಈ ಕುರಿತು ಗಡಿ ಅಭಿವೃದ್ಧಿ ಪ್ರಾಧಿಕಾರದ ಜೊತೆ ಚರ್ಚಿಸಲಾಗುವುದು ಎಂದರು. ಇದೇ ಸಂದರ್ಭದಲ್ಲಿ ರಂಗಭೂಮಿಯಲ್ಲಿ ಪ್ರಸ್ತುತದಲ್ಲಿನ ವಾಸ್ತವತೆ, ಬೆಳವಣಿಗೆಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಬಳ್ಳಾರಿಯ ರಂಗಕಲಾವಿದರೊಂದಿಗೆ ಸಂವಾದ ನಡೆಸಿದರು. ಇದೇ ವೇಳೆ ರಂಗಕಲಾವಿದರಿಂದ ಸಲಹೆ ಪಡೆದರು. ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ರಂಗಭೂಮಿಯ ಹಿರಿಯ ಕಲಾವಿದರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಮೇ 09 ರಂದು ಕಂಪ್ಲಿ ತಾಲ್ಲೂಕು ಮಟ್ಟದ ಕುಂದು–ಕೊರತೆಗಳ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.28–ಕಂಪ್ಲಿ ತಾಲ್ಲೂಕಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಜನಾಂಗದವರ ಸಮಸ್ಯೆಗಳನ್ನು ಆಲಿಸಿ, ಪರಿಹರಿಸಲು ಕಂಪ್ಲಿ ತಾಲ್ಲೂಕು ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಕುಂದುಕೊರತೆ ಸಭೆಯನ್ನು ಮೇ 09 ರಂದು ಬೆಳಿಗ್ಗೆ 11 ಗಂಟೆಗೆ ಕಂಪ್ಲಿಯ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಕಂಪ್ಲಿ ಪುರಸಭೆ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಸಂಘದ ಮುಖ್ಯಸ್ಥರು, ಸದಸ್ಯರು, ದಲಿತ ಮುಖಂಡರು ಹಾಗೂ ಸಮುದಾಯದ ಜನರು ಸಮಸ್ಯೆಗಳಿದ್ದಲ್ಲಿ ಅಂದು ನಡೆಯುವ ಕುಂದು ಕೊರತೆ ಸಭೆಯಲ್ಲಿ ಭಾಗವಹಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರಳತೆ, ಶ್ರದ್ಧೆಯೇ ಸಾಧನೆಗೆ ಕಾರಣ : ಸಂಸದ ರಾಜಶೇಖರ ಹಿಟ್ನಾಳ್ ಅಭಿಮತ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಸರಳತೆ ಮತ್ತು ಶ್ರದ್ಧೆ ಮೈಗೂಢಿಸಿಕೊಂಡರೇ ಸಾಧನೆಯ ಮೆಟ್ಟಿಲುಗಳನ್ನು ಏರಬಹುದು ಎಂಬುದಕ್ಕೆ ಡಾ.ಶ್ರೀನಿವಾಸ ಹ್ಯಾಟಿ ಅವರು ಸಾಕ್ಷಿಯಾಗಿದ್ದಾರೆ ಎಂದು ಸಂಸದ ರಾಜಶೇಖರ ಹಿಟ್ನಾಳ್ ಹೇಳಿದರು.

25 ವರ್ಷಗಳಿಂದ ವೈದ್ಯಕೀಯ ಮತ್ತು ಸಾಮಾಜಿಕ ಕ್ಷೇತ್ರದಲ್ಲಿ ಸೇವೆಗೈಯುತ್ತಿರುವ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ರಾಜ್ಯ ಶಾಖೆಯ ಉಪ ಸಭಾಪತಿಗಳಾಗಿ ಆಯ್ಕೆಯಾಗಿರುವ ಡಾ.ಶ್ರೀನಿವಾಸ ಹ್ಯಾಟಿ ಅವರಿಗೆ ನಗರದ ಬಾಲಾಜಿ ಪಂಕ್ಷನ್ ಹಾಲ್ ನಲ್ಲಿ ಸ್ನೇಹ ಬಳಗದಿಂದ ಭಾನುವಾರ ಆಯೋಜಿಸಲಾಗಿದ್ದ ಅಭಿನಂದನಾ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಜೀವನದಲ್ಲಿ ಸರಳತೆಯೊಂದಿಗೆ ಶ್ರದ್ಧೆ ಮೈಗೂಢಿಸಿಕೊಂಡರೇ ಸಾಧನೆ ಒಲಿಯಲಿದೆ ಎಂಬುದನ್ನು ಭಗತ್ ಸಿಂಗ್ ಅವರ ಹೇಳುತ್ತಾರೆ

ಅದರಂತೆ ಡಾ.ಶ್ರೀನಿವಾಸ ಹ್ಯಾಟಿ ಅವರು ಬದುಕು ಸಾಗಿಸುತ್ತಿದ್ದಾರೆ. ಹೀಗಾಗಿಯೇ ರೆಡ್ ಕ್ರಾಸ್ ಶಾಖೆಯ ಉಪ ಸಭಾಪತಿಗಳಾಗಿ ಅವರು ಆಯ್ಕೆಯಾಗಿ ಸಮಾಜಮುಖಿ ಕೆಲಸ ಮಾಡಲು ಸಾಧ್ಯವಾಗಿದೆ.

ಹ್ಯಾಟಿ ಅವರು ಸಮಾಜಕ್ಕಾಗಿ ಯಾವುದೇ ಪ್ರಚಾರವಿಲ್ಲದೇ ಕೆಲಸ ಮಾಡುತ್ತಿದ್ದಾರೆ.

ಶೈಕ್ಷಣಿಕ, ವೈದ್ಯಕೀಯ ರಂಗದಲ್ಲಿ ಎಲ್ಲರನ್ನು ಒಗ್ಗೂಡಿಸಿಕೊಂಡು ಮುನ್ನಡೆಯುತ್ತಿದ್ದಾರೆ.

ಅದರಲ್ಲಿಯೂ ಕೊಪ್ಪಳ ಜಿಲ್ಲಾ ರೆಡ್ ಕ್ರಾಸ್ ಸಂಸ್ಥೆಯನ್ನು ಮೂರು ಬಾರಿ ರಾಜ್ಯ ಮಟ್ಟದ ಪ್ರಶಸ್ತಿ ತೆಗೆದುಕೊಳ್ಳುವಂತೆ ಮಾಡುವುದರ ಹಿಂದೆ ಅವರ ಶ್ರಮ ಅಪಾರವಾಗಿದೆ.

ಈ ಮೂಲಕ ಮೈನಳ್ಳಿ ಗ್ರಾಮದಿಂದ ಕೊಪ್ಪಳಕ್ಕೆ ಬಂದು ರಾಜ್ಯಮಟ್ಟದವರೆಗೆ ಬೆಳೆದಿರುವುದು ಸಂತಸ ತಂದಿದೆ ಎಂದರು.

ಮಾಜಿ ಸಂಸದ ಸಂಗಣ್ಣ ಕರಡಿ ಮಾತನಾಡಿ, ಡಾ.ಶ್ರೀನಿವಾಸ ಅವರು ಕಳೆದ 25 ವರ್ಷಗಳಿಂದ ವೈದ್ಯಕೀಯ, ಶಿಕ್ಷಣ ಹಾಗೂ ರೆಡ್ ಕ್ರಾಸ್ ಸಂಸ್ಥೆಯ ಮೂಲಕ ಸಮಾಜಮುಖಿ ಕೆಲಸ ಮಾಡುತ್ತಿದ್ದಾರೆ.

ಹ್ಯಾಟಿ ಅವರು ಬಹಳ ಸೌಮ್ಯ ಸ್ವಭಾವದ ವ್ಯಕ್ತಿ.

ನಾವೆಲ್ಲ ಸಮಾಜದಿಂದ ನಮಗೇನು ಸಿಕ್ಕಿದೆ ಎಂದುಕೊಳ್ಳುತ್ತೇವೆ. ಆದರೆ, ಸಮಾಜಕ್ಕೆ ನಮ್ಮ ಕೊಡುಗೆ ಏನು ಎಂಬುದನ್ನು ಮನನ ಮಾಡಿಕೊಳ್ಳಬೇಕು.

ಹ್ಯಾಟಿ ಅವರ ಕುಟುಂಬ ಬಹಳ ಸಂಸ್ಕಾರಯುತವಾಗಿದೆ. ಹೀಗಾಗಿ ಜೀವನದಲ್ಲಿ ಅವರ ಕುಟುಂಬ ಮುಂದೆ ಬರುತ್ತಿದೆ ಎಂದರು.

ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ ಮಾತನಾಡಿ, ಹ್ಯಾಟಿ ಅವರಲ್ಲಿ ಸೇವಾ ಮನೋಭಾವವಿದೆ. ಹೀಗಾಗಿ ಕಳೆದ 25 ವರ್ಷಗಳಿಂದ ವೈದ್ಯಕೀಯ ರಂಗದಲ್ಲಿ ತಮ್ಮದೇ ಆದ ಛಾಪೂ ಮೂಡಿಸಿದ್ದಾರೆ.

ಅಲ್ಲದೆ, ಶ್ರೀನಿವಾಸ ಹ್ಯಾಟಿ ಅವರು ಭಾಗವಹಿಸದ ಕ್ಷೇತ್ರಗಳಿಲ್ಲ. ಎಲ್ಲ ರಂಗದಲ್ಲಿಯೂ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ. ಹ್ಯಾಟಿ ಅವರ ಸಾಧನೆ ನೋಡಿ ಸಂತಸ ತಂದಿದೆ ಎಂದರು.

ಬಿಜೆಪಿ ರಾಜ್ಯ ಕಾರ್ಯಕಾರಿಣಿ ಸದಸ್ಯ ಬಸವರಾಜ ಕ್ಯಾವಟರ್ ಮಾತನಾಡಿ, ಹ್ಯಾಟಿ ಅವರನ್ನು ಬಹಳ ಹತ್ತಿರದಿಂದ ನೋಡಿದ್ದೇನೆ. ಅವರಲ್ಲಿರುವ ಸಾಮಾಜಿಕ ಕಳಕಳಿ ಅಪಾರ.

ಕಳೆದ 25 ವರ್ಷದಿಂದ ವೈದ್ಯಕೀಯ ರಂಗದಲ್ಲಿ ಸೇವೆ ಸಲ್ಲಿಸಿರುವುದು ಮೆಚ್ಚುವಂತಹ ಸಂಗತಿ.

ಹ್ಯಾಟಿ ಅವರು ಜನಪರ ಸೇವೆಯಲ್ಲಿ ಮಂಚೂಣಿಯಲ್ಲಿದ್ದಾರೆ. ಸಮಯ ಪ್ರಜ್ಞೆ ಅರಿತು ಕೆಲಸ ಮಾಡುತ್ತಿದ್ದಾರೆ. ಈ ಹಿಂದೆ ಸಣ್ಣ–ಪುಟ್ಟ ಆರೋಗ್ಯ ಸಮಸ್ಯೆಗಳಿಗೆ ಬೇರೆ ಜಿಲ್ಲೆಗೆ ಹೋಗಬೇಕಿತ್ತು. ಆದರೆ, ಈಗ ಪರಿಸ್ಥಿತಿ ಬದಲಾಗಿದೆ. ಎಲ್ಲ ರೀತಿಯ ಅತ್ಯುತ್ತಮ ಚಿಕಿತ್ಸೆಗಳು ಸ್ಥಳೀಯವಾಗಿ ದೊರೆಯುತ್ತಿವೆ. ಇದಕ್ಕೆ ಮೂಲ ಕಾರಣ ರೆಡ್ ಕ್ರಾಸ್ ಸಂಸ್ಥೆ. ಈ ಸಂಸ್ಥೆ ಹುಟ್ಟು ಹಾಕುವಲ್ಲಿ ಡಾ.ಶ್ರೀನಿವಾಸ ಹ್ಯಾಟಿ ಅವರು ಕೂಡ ಒಬ್ಬರು ಎಂಬುದು ಗಮನಾರ್ಹ.

ಅವರ ಮುಂದಿನ ಜೀವನ ಉತ್ತುಂಗಕ್ಕೆ ಇನ್ನಷ್ಟು ಹೇರಲಿ ಎಂದು ಆಶಿಸಿದರು.

> ನಾನು ಇನ್ನೂ ಸಮಾಜಮುಖಿಯಾಗಿ ಕೆಲಸ ಮಾಡುವುದು ಬಹಳಷ್ಟಿದೆ. ಸ್ನೇಹಿತರ ಬಳಗ ಹಮ್ಮಿಕೊಂಡಿರುವ ಈ ಕಾರ್ಯಕ್ರಮ ನನ್ನಲ್ಲಿ ಮತ್ತಷ್ಟು ಜವಾಬ್ದಾರಿ ಹೆಚ್ಚಳವಾಗುವಂತೆ ಮಾಡಿದೆ. ಮುಂದಿನ ದಿನಗಳಲ್ಲಿ ರೆಡ್ ಕ್ರಾಸ್ ಮೂಲಕ
> ಕೊಪ್ಪಳಕ್ಕೆ ಥಲಾಸ್ಸೇಮಿಯಾ ಹಾಗೂ ಎಸ್ ಡಿಪಿ ಸೆಂಟ–ರ್ ತರುವ ಉದ್ದೇಶವಿದೆ. ಇಂತಹ ಎಲ್ಲ ಸಮಾಜಮುಖಿ ಕೆಲಸಗಳಿಗೆ ತಮ್ಮ ಸಹಕಾರವಿರಲಿ.
> **ಡಾ.ಶ್ರೀನಿವಾಸ ಹ್ಯಾಟಿ, ಉಪ ಸಭಾಪತಿಗಳು, ಭಾರತೀಯ ರೆಡ್ ಕ್ರಾಸ್ ಸಂಸ್ಥೆ,ರಾಜ್ಯ ಶಾಖೆ, ಬೆಂಗಳೂರು.**

ಜೆಡಿಎಸ್ ರಾಜ್ಯ ಕೋರ್ ಕಮಿಟಿ ಸದಸ್ಯ ಸಿ.ವಿ.ಚಂದ್ರಶೇಖರ, ಸರಕಾರಿ ಅಭಿಯೋಜಕರಾದ ಬಿ.ಎಸ್.ಪಾಟೀಲ್ ತಾವರಗೇರಾ, ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಮಾಜಿ ಉಪಾಧ್ಯಕ್ಷ ಶಂಭುಲಿಂಗನಗೌಡ ಹಲಗೇರಿ, ಸರಕಾರಿ ನೌಕರರ ಸಂಘದ ಅಧ್ಯಕ್ಷ ನಾಗರಾಜ ಜುಮ್ಮಣ್ಣನವರ, ರೆಡ್ ಕ್ರಾಸ್ ಸಂಸ್ಥೆಯ ಮಾಜಿ ಉಪ ಸಭಾಪತಿ ಅಪ್ಪಾರಾವ ಅಕ್ಕೋಣಿ ಹಾಗೂ

ಸ್ನೇಹ ಬಳಗದ ಶರಣಪ್ಪ ಬಾಚಲಾಪೂರ, ರಾಜೇಶ ಯಾವಗಲ್, ಡಾ.ಶಿವನಗೌಡ ಪಾಟೀಲ್ ಮಾತನಾಡಿದರು.

ರೆಡ್ ಕ್ರಾಸ್ ನ ಜಿಲ್ಲಾ ಶಾಖೆಯ ಸಭಾಪತಿಗಳಾದ ಸೋಮರಡ್ಡಿ ಅಳವಂಡಿ ಪ್ರಾಸ್ಥವಿಕವಾಗಿ ಮಾತನಾಡಿದರು.

ಡಾ.ಎಸ್.ಕರಮುಡಿ ನಿರೂಪಿಸಿದರು. ಶಿವಕುಮಾರ ಕೂಕನೂರು ಸ್ವಾಗತಿಸಿದರು.

ಕಾಶ್ಮೀರದ ಫಹಲ್ಗಾಂನಲ್ಲಿ ಹುತಾತ್ಮರಾದವರಿಗೆ ಕಾರ್ಯಕ್ರಮಕ್ಕೂ ಮುನ್ನ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಈ ವೇಳೆ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶ್ರೀನಿವಾಸ ಗುಪ್ತಾ, ಹಿರಿಯ ಸಾಹಿತಿ ಎಚ್.ಎಸ್.ಪಾಟೀಲ್, ಜಿಪಂ ಮಾಜಿ ಅಧ್ಯಕ್ಷ ಎಚ್.ಎಲ್.ಹಿರೇಗೌಡ್ರು, ಪ್ರಥಮ ದರ್ಜೆ ಗುತ್ತಿಗೆದಾರ ಬಸವರಾಜ ಪುರದ, ಜೆಡಿಎಸ್ ಜಿಲ್ಲಾಧ್ಯಕ್ಷ ಸುರೇಶ ಭೂಮರಡ್ಡಿ, ಪ್ರಭು ಹೆಬ್ಬಾಳ ಪ್ರಭಂಜನ ಮೆಹತಾ, ಭಾರೆಕ್ರಾ ಸಂಸ್ಥೆಯ ಅನ್ನಪೂರ್ಣ ಸದಾಶಿವ, ಮಂಜುನಾಥ ಡೊಳ್ಳಿನ ಸೇರಿ ಇನ್ನಿತರರು ಇದ್ದರು.

# ಎ.30 ಬೇವೂರ ಬಸವೇಶ್ವರ ಜಾತ್ರೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.28- ತಾಲೂಕಿನ ಬೇವೂರ ಗ್ರಾಮದಲ್ಲಿ ಬಸವೇಶ್ವರ ಜಾತ್ರಾ ಮಹೋತ್ಸವ ಪ್ರಾರಂಭಗೊಂಡಿದ್ದು, ಎ.30ರಂದು ರಥೋತ್ಸವ ಜರುಗಲಿದೆ.

ಕಳೆದ ಮೂರು ದಿನಗಳಿಂದ ಕಮತಗಿಯ ಗಣೇಶ ಶಾಸ್ತ್ರಿಗಳು ಹಿರೇಮಠ ಅವರಿಂದ ಹಾನಗಲ್ಲ ಗುರುಕುಮಾರ ಶಿವಯೋಗಿಗಳ ಮಹಾಪುರಾಣ ನಡೆಯುತ್ತಿದ್ದು, ಮೇ.5ರಂದು ಮುಕ್ತಾಯಗೊಳ್ಳಲಿದೆ.

ನಿಡಗುಂದಿಯ ರುದ್ರಮುನಿ ಶಿವಾಚಾರ್ಯರು, ಬಿಲ್‌ಕೆರೂರಿನ ಸಿದ್ಧಲಿಂಗ ಶಿವಾಚಾರ್ಯರು, ಕಮತಗಿಯ ಹೊಳೆ ಹುಚ್ಚೇಶ್ವರ ಶ್ರೀಗಳು, ಇಳಕಲ್ಲಿನ ಗುರುಮಹಾಂತ ಶ್ರೀಗಳು, ವಿಜಯಮಹಾಂತ ತೀರ್ಥದ ಬಸವಲಿಂಗಸ್ವಾಮೀಜಿ, ಗುಳೇದಗುಡ್ಡದ ಅಭಿನವ ಒಪ್ಪತ್ತೇಶ್ವರ ಶ್ರೀಗಳು ಹಾಗೂ ಬೇವೂರಿನ ಪೂಜ್ಯ ಗ್ಯಾನಪ್ಪಜ್ಜನವರ ದಿವ್ಯ ಸಮ್ಮುಖದಲ್ಲಿ ಎ.30 ರಂದು ಸಾಯಂಕಾಲ 5-30 ಗಂಟೆಗೆ ನೂತನವಾಗಿ ತಯಾರಿಸಲಾದ ರಥೋತ್ಸವ ಜರುಗಲಿದೆ. ಅಂದೇ ರಾತ್ರಿ 8-30ಕ್ಕೆ ಅಮೀನಗಡ-ರಕ್ಕಸಗಿಯ ಮಲ್ಲಿಕಾರ್ಜುನ ಅಮೀನಗಡ ತಂಡದವರಿಂದ ರಸಮಂಜರಿ ಕಾರ್ಯಕ್ರಮ ನಡೆಯಲಿದೆ ಎಂದು ಬಸವೇಶ್ವರ ಜಾತ್ರಾ ಮಹೋತ್ಸವ ಸಮಿತಿ ತಿಳಿಸಿದೆ.

# ಮಲ್ಲಾಪೂರದಲ್ಲಿ ಡೆಂಗ್ಯು ಜಾಗೃತಿ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ


ಬಾಗಲಕೋಟೆ,ಎ.28-ತಾಲೂಕಿನ ಮಲ್ಲಾಪೂರ ಗ್ರಾಮದಲ್ಲಿ ರವಿವಾರ ಬಾಗಲಕೋಟೆ ಬಸವೇಶ್ವರ ವಾಣಿಜ್ಯ ಮಹಾವಿದ್ಯಾಲಯದ ಎನ್.ಎಸ್.ಎಸ್.ಶಿಬಿರಾರ್ಥಿಗಳಿಂದ ಡೆಂಗ್ಯು ಕುರಿತು ಜಾಗೃತಿ ಕಾರ್ಯಕ್ರಮ ಜರುಗಿತು.

ಆರೋಗ್ಯ ಇಲಾಖೆ ಹಾಗೂ ಶಿರೂರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಗ್ರಾಮದಲ್ಲಿ ಜಾಗೃತಿ ಜಾಥಾ ನಡೆಸಿ ಆರೋಗ್ಯ ಮಾಹಿತಿ ನೀಡಲಾಯಿತು.

ಡೆಂಗ್ಯು ತಡೆಯುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ತಗ್ಗು ಪ್ರದೇಶಗಳಲ್ಲಿ ನೀರು ನಿಲ್ಲುವುದರಿಂದ ಸೊಳ್ಳೆಗಳು ಉತ್ಪತ್ತಿಯಾಗಿ ರೋಗಗಳು ಹರಡುವ ಸಂಭವ ಹೆಚ್ಚಾಗಿರುತ್ತದೆ. ಹೀಗಾಗಿ ಪ್ರತಿಯೊಂದು ಕುಟುಂಬ ಮನೆ ಸುತ್ತ ಮುತ್ತ ಸ್ವಚ್ಛಗೊಳಿಸಿ ರೋಗ ಹರಡದಂತೆ ಕಾಳಜಿ ವಹಿಸಬೇಕು ಎಂಬ ಸಂದೇಶ ಸಾರುವ ಬೀದಿ ನಾಟಕ ಪ್ರದರ್ಶನ ಮಾಡಲಾಯಿತು.

ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಜಗನ್ನಾಥ ಚವ್ಹಾಣ, ಎನ್.ಎಸ್.ಎಸ್ ಅಧಿಕಾರಿ ಡಾ.ಎಂ.ಎಂ. ಹುದ್ದಾರ, ಶಿರೂರ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ನಿರೀಕ್ಷಣಾಧಿಕಾರಿ ಕೆ.ಎಫ್.ಮಾಯಾಚಾರಿ, ಶಿಬಿರದ ಸಂಘಟಕರಾದ ಡಾ.ರವಿ ಬಳಗೆರಿ, ಶ್ರುತಿ ಬಡಿಗೇರ, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತರು, ಎನ್‌ಎಸ್‌ಎಸ್ ಶಿಬಿರಾರ್ಥಿಗಳು ಪಾಲ್ಗೊಂಡಿದ್ದರು.

## ಯುಪಿಎಸ್ಸಿ ಯಲ್ಲಿ ರಾಂಕ್ ವಿಜೇತ ಮೋಹನ್ ಪಾಟಲಿಗೆ ಅಭಿನಂದನೆ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕಲ್ಬುರ್ಗಿ:ಜಿಲ್ಲೆಯ ಕಮಲಾಪುರ ತಾಲೂಕಿನ ಡೋರ್ ಜಂಬಗಾ ಗ್ರಾಮದ ಕೃಷಿ ಕುಟುಂಬದ ಸಂಗನಗೌಡ ಪಾಟೀಲ್ ಅವರ ಪುತ್ರ ಮೋಹನ್ ಪಾಟೀಲ್ ಅವರು ಯುಪಿಎಸ್ಸಿ ಪರೀಕ್ಷೆಯಲ್ಲಿ 984ನೇ ಬ್ಯಾಂಕ್ ಪಡೆದು ಜಿಲ್ಲೆಗೆ ಮತ್ತು ಕಲ್ಯಾಣ ಕರ್ನಾಟಕ ಭಾಗಕ್ಕೆ ಕೀರ್ತಿ ತಂದುಕೊಟ್ಟು ಸಾಧನೆಗೈದ ಅವರಿಗೆ ಅಭಿನಂದನಾ ಕಾರ್ಯಕ್ರಮ ನಗರದ ಸಪ್ತಗಿರಿ ಹೋಟೆಲ್‌ನಲ್ಲಿ ಹಮ್ಮಿಕೊಳ್ಳಲಾಗಿತ್ತು ಕಾರ್ಯಕ್ರಮದಲ್ಲಿ ಶಾಸಕ ಎಂ ವೈ ಪಾಟೀಲ್ ಮಾಜಿ ಶಾಸಕ ದೊಡ್ಡಪ್ಪಗೌಡ ಪಾಟೀಲ ನರಿಬೋಳ ವೀರಶೈವ ಮಹಾಸಭಾ ಜಿಲ್ಲಾಧ್ಯಕ್ಷ ಶರಣಕುಮಾರ್ ಮೋದಿ ಪ್ರಭಾಕರ್ ಫೌಂಡೇಶನ್ ಅಧ್ಯಕ್ಷ ಶರಣ-ರಾಜ ಚಪ್ಪಬಂದಿ ನಾಲ್ಕು ಚಕ್ರ ಮುಖ್ಯಸ್ಥೆ ಮಾಲಾ ಕಣ್ಣಿ ಅವರು ಸಾಧನೆಗೈದ ಕು ಮೋಹನ್ ಎಸ್ ಪಾಟೀಲ್ ಅವರನ್ನು ಗೌರವಿಸಿ ಸನ್ಮಾನಿ ಶರಣರಾಜ ಸ್ವಾಗತಿಸಿದರು ಮಾಲಾ ಕಣ್ಣಿ ವಿಶ್ವನಾಥ್ ಪಾಟೀಲ್ ಗವನಳ್ಳಿ ಬಾಬುರಾವ್ ಶೇರಿಕಾರ ಸೇರಿ ಹಲವಾರು ಮಾತನಾಡಿ ಸಾಧನೆಗೈದ ಮೋಹನ್ ಪಾಟೀಲ್ ಅವರ ಶ್ರಮ ಮತ್ತು ಸಾದನೆ ಕುರಿತು ಮಾತನಾಡಿ ಅಭಿನಂದಿಸಿದರು ಕಾರ್ಯಕ್ರಮದಲ್ಲಿ ಮೋಹನ್ ಪಾಟೀಲ್ ಅವರ ತಂದೆಯವರಾದ ಸಂಗಣ್ಣ ಗೌಡ ಪಾಟೀಲ್ ಮತ್ತು ಸಮಾಜದ ಹಿರಿಯ ಮುಖಂಡರಾದ ರಾಜುಗೌಡ ನಾಗನಹಳ್ಳಿ ಗಿರಿರಾಜ ಯಳಿಮೇಲಿ ವಿಶ್ವನಾಥ್ ಪಾಟೀಲ್ ಗವನಳ್ಳಿ ಮಲ್ಕಪ್ ಗೋಳ ವಕೀಲರು ಕಲ್ಯಾಣಿ ಕಣ್ಣ ಶ್ರೀಧರ್ ನಾಗನಹಳ್ಳಿ ಮಲ್ಲಿಕಾರ್ಜುನ ಡೋಣೂರ ವೀರೇಶ್ ಬಿರಾದಾರ್ ಉದಯ್ ಕುಮಾರ್ ಜೇವರ್ಗಿ ರೇವಣಸಿದ್ಧ ಪಟ್ಟಣ ಕಲ್ಯಾಣರಾವ ಅಂಬಲಗಿ ನಾಗೇಶ್ ಬೆಳಮಗಿ ಸೇರಿದಂತೆ ಸಮಾಜದ ನೂರಾರು ಮುಖಂಡರು ಭಾಗವಹಿಸಿದ್ದರು ಕಾರ್ಯಕ್ರಮದ ಪ್ರಾರಂಭದಲ್ಲಿ ಶರಣರಾಜ ಸಾಗತಿಸಿದರು ಪ್ರಭುಲಿಂಗ ಮೂಲೆಗೆ ನಿರೂಪಣೆ ಮಾಡಿದರು ವಂದನಾರ್ಪಣೆಯನ್ನು ಮಲ್ಕಪಗೌಡ ವಕೀಲರು ನಡೆಸಿಕೊಟ್ಟರು.

## ಪಹಲ್ಗಾಮ್ ಪ್ರವಾಸಿಗರ ಮೇಲೆ ಉಗ್ರರ ದಾಳಿಖಂಡನಿಯ ರಂಗಸ್ವಾಮಿ ಕೊಂಕಲ್

ಮಲ್ಲಮ್ಮ ನುಡಿ ವಾರ್ತೆ

ಗುರುಮಿಠಕಲ್.ಎ.28-ಜಮ್ಮು-ಕಾಶ್ಮೀರದ ಪಹಲ್ಗಾಮ್ ದಲ್ಲಿ ಪ್ರವಾಸಕ್ಕೆ ಹೋಗಿದ್ದ 3 ಜನ ಕನ್ನಡಿಗರು ಸೇರಿದಂತೆ ದೇಶದ 26 ಜನರ ಮೇಲೆ ಉಗ್ರರು ದಾಳಿ ಮಾಡಿ ಹತ್ಯೆ ಮಾಡಿರುವ ಘಟನೆ ಖಂಡನೀಯವಾಗಿದೆ ಎಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಡಿ ಜಿ ಸಾಗರ್ ಬಣ ಗುರುಮಠಕಲ ತಾಲೂಕು ಅಧ್ಯಕ್ಷ ರಂಗಸ್ವಾಮಿ ಕೊಂಕಲ್ ಈ ಕುರಿತು ಪತ್ರಿಕಾ ಹೇಳಿಕೆ ನೀಡಿ, ಈ ಘಟನೆಯ ಕುರಿತು ಕೇಂದ್ರ ಸರ್ಕಾರ ತೆಗೆದುಕೊಳ್ಳುವ ನಿರ್ಣಯಗಳಿಗೆ ಎಲ್ಲರೂ ಬೆಂಬಲವಾಗಿ,



ಎಲ್ಲ ಪಕ್ಷಗಳು ಬೆಂಬಲಿಸಬೇಕು ಎಂದರು. ಉಗ್ರರ ದಾಳಿಯಲ್ಲಿ ಹತ್ಯೆಗೀಡಾಗಿರುವ ಕರ್ನಾಟಕದ ಮೂರು ಜನ ಸೇರಿದಂತೆ ಎಲ್ಲ 26 ಜನರ ಕುಟುಂಬಗಳಿಗೆ ಬುದ್ಧ ಬಸವ ಅಂಬೇಡ್ಕರ್ ಅವರು ದುಃಖವನ್ನು ಭರಿಸುವ ಶಕ್ತಿಯನ್ನು ನೀಡಲಿ ಎಂದು ಪ್ರಾರ್ಥಿಸಿದ್ದಾರೆ.

# ಜಿಲ್ಲೆಯಲ್ಲಿ ಮೇ 5ರಿಂದ ಒಳ ಮೀಸಲಾತಿ ಸಮೀಕ್ಷೆ : ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.28-ಒಳಮೀಸಲಾತಿ ಜಾರಿಗೆ ಸಂಬಂಧಿಸಿದಂತೆ ದತ್ತಾಂಶಗಳನ್ನು ಸಂಗ್ರಹಿಸಲು ಮೇ 5 ರಿಂದ 17 ವರೆಗೆ ಜಿಲ್ಲೆಯಾದ್ಯಂತ ಪರಿಶಿಷ್ಟ ಜಾತಿಯ ಜನರ ಮನೆ ಮನೆ ಸಮೀಕ್ಷೆ ನಡೆಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಸೋಮವಾರ ಪರಿಶಿಷ್ಟ ಜಾತಿಯ ಒಳಮೀಸಲಾತಿ ಸಮೀಕ್ಷೆ ಕುರಿತು ಜರುಗಿದ ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸರಕಾರದಿಂದ ನೇಮಕವಾಗಿರುವ ನ್ಯಾಯಮೂರ್ತಿ ಹೆಚ್.ಎನ್.ನಾಗಮೋಹನದಾಸ ಅವರ ಏಕ ಸದಸ್ಯ ವಿಚಾರಣಾ ಆಯೋಗವು ಪರಿಶಿಷ್ಟ ಜಾತಿಯ ವಿವಿಧ ಅಂಶಗಳ ಬಗ್ಗೆ ದತ್ತಾಂಶಗಳನ್ನು ಸಂಗ್ರಹಿಸಲಿದೆ. ಈ ನಿಟ್ಟಿನಲ್ಲಿ ಜಿಲ್ಲೆಯಾದ್ಯಂತ ಸಮೀಕ್ಷೆ ಕೈಗೊಳ್ಳಲಾಗಿದ್ದು, ನಿಗದಿತ ಅವಧಿಯಲ್ಲಿ ಸಮೀಕ್ಷೆಯನ್ನು ಪೂರ್ಣಗೊಳಿಸಲು ತಿಳಿಸಿದರು.

ಜಿಲ್ಲಾ ಮಟ್ಟದಲ್ಲಿ 3 ಜನ ಹಾಗೂ ಪ್ರತಿ ತಾಲ್ಲೂಕಿಗೆ 5 ರಂತೆ ಒಟ್ಟು 50 ಜನ ಮಾಸ್ಟರ ಟ್ರೇನರಗಳನ್ನು ನೇಮಕ ಮಾಡಲಾಗಿದೆ. ಸದರಿ ಸಮೀಕ್ಷೆ ಕಾರ್ಯಕ್ಕೆ ಪ್ರತಿ ಮತಗಟ್ಟೆಗೆ ಒಬ್ಬರಂತೆ ಗಣತಿದಾರರನ್ನು ನೇಮಕ ಮಾಡಲು ಕ್ರಮ ವಹಿಸಲಾಗುತ್ತಿದೆ. ಗಣತಿದಾರರಿಂದ ಮನೆ ಮನೆ ಸಮೀಕ್ಷೆ ಕಾರ್ಯ ನಡೆಸಲಾಗುತ್ತಿದೆ. 10 ರಿಂದ 12 ಜನ ಗಣತಿದಾರರಿಗೆ ಒಬ್ಬರಂತೆ ಮೇಲ್ವಿಚಾರಕ ಅಧಿಕಾರಿಯನ್ನು ನೇಮಿಸಲಾಗಿದೆ. ಈ ಗಣತಿ ಕಾರ್ಯಕ್ಕೆ ಶಿಕ್ಷಕರನ್ನು ನೇಮಕ ಮಾಡಲಾಗಿದೆ. ಸಮೀಕ್ಷೆಯನ್ನು ಅಂಡ್ರಾಯ್ಡ್ ಮೊಬೈಲ್ ಮೂಲಕ ಆನ್‌ಲೈನ್‌ನಲ್ಲಿಯೇ ನಮೂದು ಮಾಡಲಾಗುತ್ತಿದೆ. ಆದ್ದರಿಂದ ಜವಾಬ್ದಾರಿಯಿಂದ ಸಮೀಕ್ಷೆ ಕಾರ್ಯ ನಡೆಸಬೇಕಿದೆ ಎಂದು ಅವರು ತಿಳಿಸಿದರು.

ತಾಲೂಕಾ ಮಟ್ಟದ ಮಾಸ್ಟರ ಟ್ರೈನರ್‌ಗಳಿಗೆ ತರಬೇತಿ ನೀಡಲಾಗುತ್ತಿದ್ದು, ಸಂಪೂರ್ಣ ತರಬೇತಿ ಹೊಂದಿ ಗಣತಿದಾರರಿಗೆ ತರಬೇತಿ ನೀಡಬೇಕು. ಏನೇ ಸಂದೇಹಗಳಿದ್ದರೂ ತರಬೇತಿಯಲ್ಲಿಯೇ ಬಗೆಹರಿಸಿಕೊಳ್ಳಬೇಕು. ಸಮೀಕ್ಷೆ ಕಾರ್ಯದಲ್ಲಿ ಮನೆ ಮನೆ ಭೇಟಿ ನೀಡಿದ ಸಂದರ್ಭದಲ್ಲಿ ಅವರ ಜೊತೆ ಸೌಹಾರ್ದತೆಯಿಂದ ನಡೆದುಕೊಂಡು ಮಾಹಿತಿಯನ್ನು ಪಡೆದುಕೊಳ್ಳಬೇಕು. ಒಳಮೀಸಲಾತಿಯ ದತ್ತಾಂಶದಂತಹ ಮಹತ್ವದ ಜವಾಬ್ದಾರಿಯನ್ನು ನಿಮ್ಮ ಮೇಲೆ ಹಾಕಿದೆ. ತಾವು ಜವಾಬ್ದಾರಿಯಿಂದ ಸಮೀಕ್ಷೆ ಕಾರ್ಯದಲ್ಲಿ ಕೆಲಸ ಮಾಡಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಗಣತಿದಾರರಿಂದ ಮನೆ ಮನೆ ಸಮೀಕ್ಷೆ ಮುಕ್ತಾಯಗೊಂಡ ನಂತರ ಗುರುತಿಸಿರುವ ಮತಗಟ್ಟೆ ಪ್ರದೇಶದಲ್ಲಿ ವಿಶೇಷ ಶಿಬಿರಗಳನ್ನು ಆಯೋಜಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಅಲ್ಲದೇ ಪರಿಶಿಷ್ಟ ಜಾತಿಯ ಜನಾಂಗದವರು ವಿಶೇಷ ಶಿಬಿರಗಳಿಗೆ ತೆರಳಿ ಗಣ-ತಿದಾರರಿಗೆ ಜಾತಿ ಕುರಿತು ಮೇ 19 ರಿಂದ 21 ವರೆಗೆ ಮಾಹಿತಿ ಸಲ್ಲಿಸಲು ಅವಕಾಶ ಕಲ್ಪಿಸಲಾಗುತ್ತದೆ. ಮನೆ ಮನೆ ಸಮಿಕ್ಷೆ ಹಾಗೂ ವಿಶೇಷ ಶಿಬಿರದಲ್ಲಿ ಜಾತಿಯ ಬಗ್ಗೆ ಘೋಷಣೆ ಮಾಡಿಕೊಳ್ಳದವರು ಆನಲೈನ ಮೂಲಕ ಘೋಷಣೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಿದೆ. ಸ್ವಯಂ ಘೋಷಣೆಗೆ ಆಧಾರ ನಂಬರ ಹಾಗೂ ಆರ್‌ಡಿ ನಂಬರ ಕಡ್ಡಾಯವಾಗಿರುತ್ತದೆ. ಗಣತಿ ಸಮಯದಲ್ಲಿ ಗಣತಿದಾರರಿಗೆ ಮಾಹಿತಿ ಒದಗಿಸಬೇಕೆಂದು ಜಿಲ್ಲಾಧಿಕಾರಿಗಳು ಮನವಿ ಮಾಡಿಕೊಂಡರು.

ಜಿ.ಪಂ ಸಿಇಓ ಶಶಿಧರ ಕುರೇರ ಮಾತನಾಡಿ, ಜನಗಣತಿ ರೀತಿಯಲ್ಲಿ ಒಳಮೀಸಲಾತಿ ಸಮೀಕ್ಷೆ ಕೈಗೊಳ್ಳಲಾಗುತ್ತಿದ್ದು, ಪ್ರತಿಯೊಂದು ಅಂಶದಲ್ಲಿ ಸ್ಪಷ್ಟತೆ ಇರಬೇಕು. ಪ್ರತಿಯೊಂದು ದತ್ತಾಂಶವನ್ನು ರ್‍ಯಾಂಡಮ್ ಆಗಿ ಪರೀಕ್ಷಿಸಬೇಕು. ಸಮೀಕ್ಷೆ ಕೈಗೊಳ್ಳುವ ಪೂರ್ವದಲ್ಲಿ ಮನೆ ಮನೆಗಳಿಗೆ ಮುಂಚಿತವಾಗಿ ಮಾಹಿತಿ ನೀಡಲು ತಿಳಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಮಾತನಾಡಿ, ಸಮೀಕ್ಷೆ ಕಾರ್ಯದಲ್ಲಿ ತೊಂದರೆಗಳು ಉಂಟಾದಲ್ಲಿ 112 ಹಾಗೂ ಪೊಲೀಸ್ ಕಂಟ್ರೋಲ್ ರೂಮ್ ನಂ.9480803900ಗೆ ಕರೆ ಮಾಡಬಹುದಾಗಿದೆ ಎಂದು ತಿಳಿಸಿದರು. ಸಂಪನ್ಮೂಲ ವ್ಯಕ್ತಿಗಳಾದ ಎ.ಆರ್.ಹಂಚಿನಾಳ, ಎಸ್.ಕೆ.ಕಲ್ಲೂರ, ಸ್ವಾಗತ ಗುಡಗಡೆ ಅವರು ಪಿಪಿಟಿ ಪ್ರದರ್ಶನದ ಮೂಲಕ ಸಮೀಕ್ಷೆ ನಡೆಸುವ ಬಗೆಯನ್ನು ವಿವರಿಸಿದರು. ಕಾರ್ಯಾಗಾರದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಸದಾಶಿವ ಬಡಿಗೇರ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿದ್ಯಾಗಿರಿಯಲ್ಲಿ ಎ.30 ಬಸವ ಜಯಂತಿ ಉತ್ಸವ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.28- ನಗರದ ವಿದ್ಯಾಗಿರಿಯ 22 ರಸ್ತೆಯಲ್ಲಿರುವ ಈಶ್ವರ ದೇವಸ್ಥಾನದ ವಿಜಯನಗರ ಬಡಾವಣೆ ಅಭಿವೃದ್ಧಿ ಸಂಘದ ವತಿಯಿಂದ ಎ.30 ರಂದು ಬಸವ ಜಯಂತಿ ಆಚರಿಸಲಾಗುವುದು.

ಬುಧವಾರ ಮುಂಜಾನೆ 8 ಗಂಟೆಗೆ ಕುಂಭಮೇಳ ಹಾಗೂ ವಾದ್ಯಗಳೊಂದಿಗೆ ಬಸವಣ್ಣನವರ ಭಾವಚಿತ್ರದ ಮೆರವಣಿಗೆ ಈಶ್ವರ ದೇವಸ್ಥಾನದಿಂದ ಹೊರಟು, ಸಂತೋಷ ಕಿರಾಣಿ ಸ್ಟೋರ್ಸ್ ವೃತ್ತ, 19ನೇ ರಸ್ತೆಯಲ್ಲಿ ಹಾಯ್ದು 15ನೇ ರಸ್ತೆಯಲ್ಲಿರುವ ಕೆಂಚಮ್ಮನ ದೇವಸ್ಥಾನ, 17ನೇ ರಸ್ತೆಯ ಹನುಮಾನ ದೇವಸ್ಥಾನದ ಮುಖಾಂತರ ಮರಳಿ ಈಶ್ವರ ದೇವಸ್ಥಾನಕ್ಕೆ ಆಗಮಿಸಲಿದೆ.

ನಂತರ ದೇವಸ್ಥಾನದ ಆವರಣದಲ್ಲಿ ಈಶ್ವರಿ ಮಹಿಳಾ ಮಂಡಳಿಯವರಿಂದ ರುದ್ರಪಠಣ ಹಾಗೂ ಬಸವ ಜಯಂತಿಯ ಕಾರ್ಯಕ್ರಮಗಳು ಜರುಗಲಿವೆ. ಸಾನಿಧ್ಯವನ್ನು ಮಳೇರಾಜೇಂದ್ರ ಮಹಾಸ್ವಾಮಿಗಳು ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ನಿವೃತ್ತ ಪ್ರಾಚಾರ್ಯ ಎ.ಎಸ್.ಪಾವಟೆ ಆಗಮಿಸಲಿದ್ದಾರೆ. ಮಧ್ಯಾಹ್ನ 1 ಗಂಟೆಗೆ ಅನ್ನಪ್ರಸಾದ ಜರುಗಲಿದೆ.

## ಅಸ್ಲಾಂಮಿಯಾ ಅವರ ಧರ್ಮ ಸೇವೆ ಅಮೋಘ:- ಹವಾ ಮಲ್ಲಿನಾಥ ಮಹಾರಾಜರು



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪಟ್ಟಣದ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಅವರ ಅಂಗಡಿಗೆ ಸೋಮವಾರ ಹವಾ ಮಲ್ಲಿನಾಥ ಮಹಾರಾಜರು ಭೇಟಿ ನೀಡಿದಾಗ ಅಸ್ಲಾಂಮಿಯಾ ಅವರು ಮೈಸೂರ್ ಪೇಠ ಹಾಕಿ ಸನ್ಮಾನಿಸಿದರು. ಅಸ್ಲಾಂಮಿಯಾ ಅವರ ಧರ್ಮ ಸೇವೆ ಅಮೋಘವಾಗಿದೆ, ಬೀದರ್ ಗುಲ್ಬರ್ಗ ಜಿಲ್ಲೆಯಲ್ಲಿ ಎಲ್ಲಾ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುತ್ತಿರುವುದು ಸಂತೋಷ್ ತಂದಿದೆ ಎಂದರು. ಈ ಸಂದರ್ಭದಲ್ಲಿ ಪರಿಸರವಾದಿಗಳು ಹಾಗೂ ಹಿರಿಯ ಪತ್ರಕರ್ತ ಶೈಲೇಂದ್ರ ಕಾವಡಿ, ಪತ್ರಕರ್ತ ರಾಜಕುಮಾರ ಆರ್. ಹಡಪದ, ಅಂಗಡಿ ಮಾಲೀಕ ಮಹಮ್ಮದ್ ಅಬ್ದುಲ್ ಮತಿನ್ ಶಾದಬ್ ಇಂಜಿನಿಯರ, ನರೇಂದ್ರ-ರೆಡ್ಡಿ ರಾಂಪುರ, ಚಂದ್ರಕಾಂತ ಮಠಪತಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ;ಎ.28-ನಗರದ ತಾಲೂಕಾ ಪಂಚಾಯತ ಸಭಾಭವನದಲ್ಲಿ ತಾಲೂಕಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಜರುಗಿತು.

ಪ್ರಾಧಿಕಾರದ ಅಧ್ಯಕ್ಷ ಎಸ್.ಎನ್.ರಾಂಪೂರ ಸರಕಾರದ ಪಂಚ ಗ್ಯಾರಂಟಿ ಯೋಜನೆಗಳಾದ ಅನ್ನ ಭಾಗ್ಯ, ಗೃಹಲಕ್ಷ್ಮೀ, ಗೃಹ ಜ್ಯೋತಿ, ಯುವನಿಧಿ, ಶಕ್ತಿ, ಯೋಜನೆಯ ಕುರಿತು ಅನುಷ್ಠಾಣ ಇಲಾಖೆಯ ಅಧಿಕಾರಿಗಳಿಂದ ಪ್ರಗತಿ ವರದಿ ಹಾಗೂ ಕುಂದು ಕೊರತೆಗಳು ನಿವಾರಣಾ ಕ್ರಮಗಳು ಕೈಗೊಳ್ಳಬೇಕಾದ ಅಂಶಗಳ ಬಗ್ಗೆ ಪರಿಶೀಲನೆ ನಡೆಸಿದರು. ಅರ್ಹ ಫಲಾನುಭವಿಗಳು ಸರಕಾರದ ಯೋಜನೆಗಳಿಂದ ವಂಚಿತರಾಗದಂತೆ ಕ್ರಮವಹಿಸಲು ತಿಳಿಸಿದರು.

ಹೊಸದಾಗಿ ಸದಸ್ಯರಾಗಿ ಆಯ್ಕೆಯಾದ ಇರ್ಫಾನ ಮುದ್ನಾಳ, ರವೀಂದ್ರ ಅನವಾಲ ಅವರನ್ನು ಸನ್ಮಾನಿಸಲಾಯಿತು. ಸಭೆಯಲ್ಲಿ ತಾಲೂಕಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಸದಸ್ಯರಾದ ರೇಣುಕಾ ನ್ಯಾಮಗೌಡ, ರಂಗಪ್ಪ ಮಳ್ಳಿ, ಜಟ್ಟೆಪ್ಪ ಮಾದಾಪೂರ, ಹನಮಂತ ಪೂಜಾರಿ, ಚನ್ನವೀರಪ್ಪ ಅಂಗಡಿ, ರವೀಂದ್ರ ಅನವಾಲ, ಮಹ್ಮಮದ ಇರ್ಫಾನ ಮುದ್ನಾಳ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಎಸ್.ಸಂಪಗಾವಿ, ಯೋಜನೆಯ ಅನುಷ್ಠಾನ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# 'ಮೂಕಮಾಟಿ' ಸಾಹಿತ್ಯ ಕ್ಷೇತ್ರದ ಹೊಸ ಮಹಾಕಾವ್ಯ: ನ್ಯಾಮಗೌಡ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.28-ಮಹಾಕಾವ್ಯ 'ಮೂಕಮಾಟಿ' ಹಿಂದಿ ಸಾಹಿತ್ಯ ಕ್ಷೇತ್ರದಲ್ಲಿ ಹೊಸ ಅಲೆ ಎಬ್ಬಿಸಿದ ಮಹತ್ವದ ಕಾವ್ಯ. ಇದರ ಕೇಂದ್ರ ಬಿಂದು ಮತ್ತು ಕೇಂದ್ರ ಪ್ರಜ್ಞೆ ಮಣ್ಣು. ಉತ್ಕೃಷ್ಟ ಭೂಮಿ ಗೀತವೂ ಆಗಿರುವ ಈ ಮೂಕಮಾಟಿ ಮಣ್ಣಿನ ಇತಿಹಾಸ, ಮಣ್ಣಿನ ಮೌನ ಸ್ಪಂದನ ಎಂದು ಪ್ರೊ. ಬಿ.ಪಿ.ನ್ಯಾಮಗೌಡ ಹೇಳಿದರು. ನಗರದ ಶಿವಾನುಭವ ಸಮಿತಿ ಹಾಗೂ ಸಾಹಿತ್ಯ ಸಂಸ್ಕೃತಿ ಸಂವಹನ ವೇದಿಕೆ ಚರಂತಿಮಠ ಇವರ ಸಹಯೋಗದಲ್ಲಿ ತಿಂಗಳ ವಿಶೇಷ ಉಪನ್ಯಾಸ ಮಾಲಿಕೆ ಐದರಲ್ಲಿ ವಿಶೇಷ ಉಪನ್ಯಾಸಕರಾಗಿ ಮಾತನಾಡಿದ ಅವರು, ಮೂಕಮಾಟಿ ಕಾವ್ಯಾವಲೋಕನದ ಕವಿ ಆಚಾರ್ಯ ವಿದ್ಯಾಸಾಗರಜೀ ಒಬ್ಬ ಯೋಗಿಯಾದರೂ ಅವರು ರಸತಪಸ್ವಿ, ಭಾವಲೋಕವಿಹಾರಿ. ಇದೊಂದು ವರ್ಣನಾ ಪ್ರಧಾನ ಕಾವ್ಯ ಎಂದರು. ಸಾನಿಧ್ಯ ವಹಿಸಿದ್ದ ಚರಂತಿಮಠದ ಡಾ.ಪ್ರಭುಸ್ವಾಮಿಗಳು, ಮೂಕಮಾಟಿಯಲ್ಲಿ ಮಣ್ಣಿನ ಮೂಲಕ ಮುಕ್ತಿ ಕಾಣುವ



ಬಗೆಯನ್ನು ವಿದ್ಯಾಸಾಗರಜೀ ನಿರೂಪಿಸಿದ್ದಾರೆ. ಇಳೆ, ಮಣ್ಣು, ಕುಂಭ, ಕುಂಭಕಾರ, ನೀರು, ಹಗ್ಗ, ಮೀನು, ಗಿಡ-ಮರ, ಪಕ್ಷಿ, ಕಲ್ಲು, ಪಂಚಭೂತಗಳು ಎಲ್ಲವೂ ಇಲ್ಲಿ ವಸ್ತುವಾಗಿವೆ. ಇವುಗಳ ಅರ್ಥ ವಲಯ ನೆಲದಗಲ, ಜಗದಗಲ, ಮುಗಿಲಗಲ ವ್ಯಾಪ್ತಿಗೊಳ್ಳುವ ಪರಿ ಪರಿಭಾವನೀಯ. ಇಂದ್ರಿಯ ಗೋಚರ ಹಾಗೂ ಇಂದ್ರಿಯಗ್ರಾಹ್ಯ ವಸ್ತುಗಳನ್ನು ಶಾಬ್ದಿಕವಾಗಿ ಪರಿಚಯಿಸುವುದರೊಂದಿಗೆ ಅದೇ ಉಸಿರಿಗೆ ಅತೀಂದ್ರಿಯ ಎತ್ತರಗಳ ದಾಟಿಸುವ ಲಘಿಮಾ ಕೌಶಲ ಕವಿ ವಿದ್ಯಾಸಾಗರರಿಗೆ ಸಿದ್ಧಿಸಿದೆ ಎಂದು ಹೇಳಿದರು.

ಎ.ಎಸ್.ಪಾವಟೆ, ಎಸ್.ಆರ್.ಮನಹಳ್ಳಿ ವೇದಿಕೆ ಮೇಲೆ ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಬೆಳಗಾವಿಯ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ ಪಡೆದ ಶ್ರೀ ಪ್ರಭುಸ್ವಾಮಿಗಳಿಗೆ ಸಾಹಿತ್ಯ ಸಂಸ್ಕೃತಿ ಸಂವಹನ ವೇದಿಕೆ ವತಿಯಿಂದ ಗೌರವ ಸನ್ಮಾನ ನೀಡಲಾಯಿತು.

ಡಾ.ಎಂ.ನಂಜುಂಡಸ್ವಾಮಿ ಸ್ವಾಗತಿಸಿದರು. ಡಾ.ಬಸವರಾಜ ಖೋತ ಪರಿಚಯಿಸಿದರು. ನಂದಿನಿ ದೊಡಮನಿ ವಂದಿಸಿದರು, ಡಾ.ಐ.ಕೆ.ಮಠದ ನಿರೂಪಿಸಿದರು. ಡಾ.ಸಿದ್ದರಾಮಯ್ಯ ಮಠಪತಿ ಅವರ ಪ್ರಾರ್ಥನೆ ಎಲ್ಲರ ಗಮನ ಸೆಳೆಯಿತು. ಬಸವರಾಜ ಭಗವತಿ, ಡಾ.ಜಗನ್ನಾಥ ಚವ್ಹಾಣ, ಡಾ.ಎಸ್.ಡಿ.ಕೆಂಗಲಗುತ್ತಿ, ಪ್ರೊ.ಕಿತ್ತೂರ ಸೇರಿದಂತೆ ಬಾಗಲಕೋಟೆ ಜೈನ ಸಮಾಜದ ಗುರುಹಿರಿಯರು, ಅಕ್ಕನ ಬಳಗದ ಸದಸ್ಯರು ಭಾಗವಹಿಸಿದ್ದರು.

# ಭರವಸೆಯ ಭವಿಷ್ಯಕ್ಕೆ ಉತ್ತಮ ಆರೋಗ್ಯ ಮುಖ್ಯ : ನಾಟಿಕರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಎ.28-ಭರವಸೆಯ ಭವಿಷ್ಯಕ್ಕೆ ಉತ್ತಮ ಆರೋಗ್ಯ ಮುಖ್ಯವಾಗಿದ್ದು, ಅತ್ಯುತ್ತಮ ಆರೋಗ್ಯಕರ ಪರಿಸರದ ನಿರ್ಮಾಣ ಅಗತ್ಯವಾಗಿದೆ ಎಂದು ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯ ಪ್ರಾಚಾರ್ಯ ಡಾ.ದೀಲಿಪ್ ನಾಟಿಕರ ಹೇಳಿದರು.




ಬ.ವಿ.ವ ಸಂಘದ ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ಪ್ರಸವ ಮತ್ತು ಸ್ತ್ರೀರೋಗ ಶಾಸ್ತ್ರ ಶುಶ್ರೂಷಾ ವಿಭಾಗದ ವತಿಯಿಂದ ನಡೆದ ವಿಶ್ವ ಆರೋಗ್ಯ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿಶ್ವ ಆರೋಗ್ಯ ಸಂಸ್ಥೆಯ ವರದಿಯ ಪ್ರಕಾರ ಪ್ರತಿ ವರ್ಷ 3ಲಕ್ಷ ಮಹಿಳೆಯರು ಗರ್ಭಧಾರಣೆ ಮತ್ತು ಹೆರಿಗೆಯ ಅವಧಿಯಲ್ಲಿ ಮರಣ ಹೊಂದುತ್ತಾರೆ ಮತ್ತು ಸುಮಾರು 2 ಮಿಲಿಯನ್ ನವಜಾತ ಶಿಶುಗಳು ತಮ್ಮ ಜೀವನದ ಮೊದಲ ತಿಂಗಳಲ್ಲಿ ಮರಣ ಹೊಂದುತ್ತವೆ ಎಂದರು.

ಭರವಸೆಯ ಭವಿಷ್ಯಕ್ಕೆ ಉತ್ತಮ ಆರೋಗ್ಯ ಮುಖ್ಯವಾಗಿದ್ದು ಆರೋಗ್ಯವನ್ನು ಕಾಪಾಡಿಕೊಳ್ಳಲು ಅತ್ಯುತ್ತಮ ಪರಿಸರವನ್ನು ನಿರ್ಮಾಣ ಮಾಡುವುದು ಇಂದಿನ ಅಗತ್ಯವಾಗಿದೆ ಎಂದು ನಾಟಿಕರ ಹೇಳಿದರು.

ಅತಿಥಿ ಉಪನ್ಯಾಸಕ ಡಾ.ಉಮೇಶ ರಾಮದುರ್ಗ, ತಾಯಿ ಮತ್ತು ನವಜಾತ ಶಿಶುಗಳ ಆರೈಕೆ ಮತ್ತು ಗರ್ಭಾವಸ್ಥೆಯಲ್ಲಿ ತಾಯಂದಿರ ಮರಣ ಪ್ರಮಾಣವನ್ನು ಕಡಿಮೆ ಮಾಡುವ ಮಾರ್ಗಗಳ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು.

ಮಹಾವಿದ್ಯಾಲಯದ ಚಿಕ್ಕಮಕ್ಕಳ ಶುಶ್ರೂಷಾ ವಿಭಾಗದ ಪ್ರಾಧ್ಯಾಪಕ ಡಾ.ಪ್ರಶಾಂತ ಕುಲಕರ್ಣಿ ತಾಯಿ ಮತ್ತು ಶಿಶುವಿನ ಆರೋಗ್ಯದ ಮಹತ್ವದ ಕುರಿತು ಮಾಹಿತಿ ನೀಡಿದರು. ಡಾ.ಜಯಶ್ರೀ ಅವರ ಸಂಗ ನೇತೃತ್ವ ವಹಿಸಿದ್ದರು.

ಕಾರ್ಯಕ್ರಮದ ಅಂಗವಾಗಿ ವಿದ್ಯಾರ್ಥಿಗಳಿಗೆ ಭಾಷಣ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ವಿಭಾಗದ ಸಹ ಪ್ರಾಧ್ಯಾಪಕರು, ಉಪನ್ಯಾಸಕರು ಹಾಗೂ 120 ವಿದ್ಯಾರ್ಥಿಗಳು ಭಾಗವಹಿಸಿದ್ದರು. ಪವಿತ್ರಾ ಸ್ವಾಗತಿಸಿದರು. ಸಿಂಡ್ರೆಲ್ ನಿರೂಪಿಸಿದರು.

# ಅಗಲಿದ ಪತ್ರಕರ್ತರಿಗೆ ಇಂದು ಕೆಯುಡಬ್ಲ್ಯೂಜೆ ಶ್ರದ್ಧಾಂಜಲಿ




ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಇತ್ತೀಚೆಗೆ ನಮ್ಮನ್ನಗಲಿದ ಹಿರಿಯ ಪತ್ರಕರ್ತರುಗಳಾದ ಎಸ್.ಕೆ.ಶ್ಯಾಮಸುಂದರ್ ಮತ್ತು ಶ್ರವಣಬೆಳಗೊಳದ ಎಸ್.ಎನ್. ಅಶೋಕಕುಮಾರ್ ಅವರಿಗೆ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದಿಂದ ನುಡಿ ನಮನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ನಗರದ ಕೆ.ಜಿ.ರಸ್ತೆ ಕಂದಾಯ ಭವನದ 3ನೇ ಮಹಡಿಯಲ್ಲಿ ಕೆಯುಡಬ್ಲ್ಯೂ ಸಭಾಂಗಣದಲ್ಲಿ ಎ.29ರಂದು ಮಂಗಳವಾರ ಬೆಳಿಗ್ಗೆ 11.30ಕ್ಕೆ ಏರ್ಪಡಿಸಲಾಗಿದೆ.

ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಕನ್ನಡಪ್ರಭ ಪತ್ರಿಕೆ ಸಂಪಾದಕರಾದ ರವಿ ಹೆಗಡೆ, ಪುರವಣಿ ಸಂಪಾದಕರಾದ ಜೋಗಿ, ಪ್ರಜಾವಾಣಿ ನಿವೃತ್ತ ಸಂಪಾದಕರಾದ ಪದ್ಮರಾಜ ದಂಡವತಿ ಅವರು ಭಾಗವಹಿಸಲಿದ್ದು, ಕೆಯುಡಬ್ಲ್ಯೂಜೆ ಅಧ್ಯಕ್ಷರಾದ ಶಿವಾನಂದ ತಗಡೂರು ಅಧ್ಯಕ್ಷತೆ ವಹಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ಇತ್ತೀಚೆಗೆ ಅಗಲಿದ ಪತ್ರಕರ್ತರುಗಳಿಗೂ ಮತ್ತು ಕಾಶ್ಮೀರದ ಪಹಲ್ಗಾಮ ಘಟನೆಯಲ್ಲಿ ಮಡಿದವರಿಗೂ ಶ್ರದ್ಧಾಂಜಲಿ ಸಲ್ಲಿಸಲಾಗುವುದು ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

